24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 66 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 1 2026 ಮಂಗಳವಾರ


**ಡಾ. ಜಿ. ಪರಮೇಶ್ವರ**
ಮಾನ್ಯ ಉಪ ಮುಖ್ಯಮಂತ್ರಿಗಳು


**ಶ್ರೀ ಕೃಷ್ಣ ಬೈರೇಗೌಡ**
ಮಾನ್ಯ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರು

# ಬಿಡಿಎ

## ಇತಿಹಾಸ ನಿರ್ಮಾಣ !

31ನೇ ಆಗಸ್ಟ್ 2026 ರಂದು.

## ಡಾ. ಕೆ. ಶಿವರಾಮ ಕಾರಂತ ಬಡಾವಣೆಗೆ (DSKL)

ತಮ್ಮ ಭೂಮಿ ನೀಡಿದ 3800 ರೈತರುಗಳಿಗೆ

# 18,399

## ಅಭಿವೃದ್ಧಿಪಡಿಸಿದ ನಿವೇಶನಗಳ ಹಂಚಿಕೆ

ಇತಿಹಾಸದಲ್ಲೆ ಪ್ರಪ್ರಥಮ: ಬಿಡಿಎಯಿಂದ ಒಂದೇ ದಿನದಲ್ಲಿ 18,399 ನಿವೇಶನಗಳ ಹಂಚಿಕೆ.

**ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ರವರಿಗೆ ನಾವು ಧನ್ಯವಾದ ಸಲ್ಲಿಸುತ್ತೇವೆ**


ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ರವರು ದೊಡ್ಡಬೆಟ್ಟಹಳ್ಳಿಯ ಶ್ರೀಮತಿ. ಜಯಮ್ಮರವರಿಗೆ ತಮ್ಮ ನಿವೇಶನದ ಕ್ರಯಪತ್ರ ನೀಡುತ್ತಿರುವುದು

| ಒಳಪಟ್ಟಿರುವ ರೈತರ ಸಂಖ್ಯೆ | CeG ತಂತ್ರಾಂಶದ ಮೂಲಕ | 40:60 ಅನುಪಾತ | ಒಳಪಟ್ಟಿರುವ ಒಟ್ಟು ವಿಸ್ತೀರ್ಣ |
|---|---|---|---|
| 3,800 | ಪಾರದರ್ಶಕ ಹಂಚಿಕೆ | 1 ಎಕರೆ ಭೂಮಿಗೆ 9,583 ಚದರ ಅಡಿ ಅಭಿವೃದ್ಧಿ ಪಡಿಸಿದ ಪ್ರದೇಶ | 3 ಕೋಟಿ ಚದರ ಅಡಿ |

**ಇವರಿಗೂ ಧನ್ಯವಾದ ಸಲ್ಲಿಸುವೆವು :**

**ಬಿಡಿಎ ಮಂಡಳಿ ಸದಸ್ಯರು**

ಶ್ರೀ ಎ.ಸಿ. ಶ್ರೀನಿವಾಸ್, ಮಾನ್ಯ ಶಾಸಕರು
ಶ್ರೀ ಬಿ. ಶಿವಣ್ಣ, ಮಾನ್ಯ ಶಾಸಕರು
ಶ್ರೀ ಆನಂದ್ ಪ್ರಸಾದ್ ಎಸ್.
ಶ್ರೀ ಕೆ. ಪುಟ್ಟಸ್ವಾಮಿಗೌಡ
ಶ್ರೀ ವಿ.ಆರ್. ಸುಜಯ್
ಶ್ರೀ ಬಿ.ಎನ್.ಆರ್. ಅಮರನಾಥ್
ಶ್ರೀ ಪಿ. ಗಾಂಧಿ
ಶ್ರೀಮತಿ. ಮಂಜುಳ ನಾಯ್ಡು
ಶ್ರೀ ಎಂ. ಜಯಗೋಪಾಲ್ ಗೌಡ

**ಡಾ. ಜಿ. ಪರಮೇಶ್ವರ,** ಮಾನ್ಯ ಉಪಮುಖ್ಯಮಂತ್ರಿಗಳು
**ಶ್ರೀ ಕೃಷ್ಣ ಬೈರೇಗೌಡ,** ಮಾನ್ಯ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರು
**ಶ್ರೀ ಎಸ್.ಆರ್. ವಿಶ್ವನಾಥ್,** ಮಾನ್ಯ ಶಾಸಕರು, ಯಲಹಂಕ ಕ್ಷೇತ್ರ
**ಶ್ರೀ ಎಸ್. ಮುನಿರಾಜು,** ಮಾನ್ಯ ಶಾಸಕರು, ದಾಸರಹಳ್ಳಿ ಕ್ಷೇತ್ರ

**ಇವರಿಗೆ ಬಿಡಿಎ ಕೃತಜ್ಞತೆ ಸಲ್ಲಿಸುವುದು :**

1. ಬಿಡಿಎ ಮಾಜಿ ಅಧ್ಯಕ್ಷರುಗಳು
2. ಬಿಡಿಎ ಮಾಜಿ ಆಯುಕ್ತರುಗಳು
3. ಬಿಡಿಎ ಮಾಜಿ ಮಂಡಳಿ ಸದಸ್ಯರುಗಳು
4. ಭೂಮಾಲೀಕರುಗಳು
5. ಬಿಡಿಎ ಸಿಬ್ಬಂದಿ
   ಮತ್ತು ಮಾರ್ಗದರ್ಶನ ನೀಡಿದ ಉನ್ನತ ನ್ಯಾಯಾಂಗಕ್ಕೆ

“ **ಡಾ. ಕೆ. ಶಿವರಾಮ ಕಾರಂತ ಬಡಾವಣೆಗಾಗಿ** ತಮ್ಮ ಭೂಮಿಯನ್ನು ನೀಡಿದ ಎಲ್ಲಾ ರೈತರು, ಭೂಮಾಲೀಕರು ಮತ್ತು ಕುಟುಂಬಕ್ಕೆ
**ಧನ್ಯವಾದಗಳು.**
ನಿಮ್ಮ ಕೊಡುಗೆ ಬೆಂಗಳೂರಿನ ಬೆಳವಣಿಗೆಯ ಪಯಣದ ಭಾಗವಾಗಿದೆ. ಈ ಐತಿಹಾಸಿಕ ಹಂಚಿಕೆಗೆ ನಿಮ್ಮ ಕೊಡುಗೆಯನ್ನು ಗೌರವ, ಪಾರದರ್ಶಕತೆ ಮತ್ತು ಘನತೆಯೊಂದಿಗೆ ಬಿಡಿಎ ಸ್ಮರಿಸುತ್ತದೆ. ”


**ಶ್ರೀ ಎನ್.ಎ. ಹ್ಯಾರಿಸ್**
ಅಧ್ಯಕ್ಷರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ



**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ**

ಬಿಡಿಎ ಸಹಾಯವಾಣಿ 24/7 : 9483166622
https://bdakarnataka.in / @BDAOfficialGoK

## ನಿತ್ಯ ಪಂಚಾಂಗ 1.09.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ
ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ ಶ್ರಾವಣ–ಬಾದ್ರಪದ ಮಾಸ
ಶ್ರಾವಣ ಬಹುಳ, ಚೌತಿ,
ಅಶ್ವಿನಿ ನಕ್ಷತ್ರ, (ಪಂಚಮಿ),
ಮಂಗಳಗೌರೀ ವ್ರತ, ದ್ರೌಪದೀ ಜಯಂತಿ,
ಕಲ್ಯಾಣ ಕಾರಣಿಕ, ಬಿದರ ಹಳ್ಳಿ ವಿದ್ಯಾಭೂಷಣ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ನೇಪಾಳ ದುರಂತ: 903ಕ್ಕೇರಿದ ಮೃತರ ಸಂಖ್ಯೆ

## ಕನ್ನಡಿಗರ ರಕ್ಷಣೆಗೆ ಸರ್ಕಾರ ಎಲ್ಲಾ ಕ್ರಮ ಕೈಗೊಳ್ಳುತ್ತಿದೆ: ಸಿಎಂ ಡಿ.ಕೆ.ಶಿವಕುಮಾರ್



**ಬೆಂಗಳೂರು, ಸೆ.1:** ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಮೃತರ ಸಂಖ್ಯೆ 903ಕ್ಕೆ ಏರಿಕೆಯಾಗಿದೆ. ಈ ನಡುವೆ ನೇಪಾಳ ಪ್ರವಾಸಕ್ಕೆ ತೆರಳಿದ್ದ ಬೆಂಗಳೂರಿನ 13 ಜನರು ಇನ್ನೂ ಸಂಪರ್ಕ್ಕೆ ಸಿಗುತ್ತಿಲ್ಲ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಇದೇ ವೇಳೆ ನೇಪಾಳಕ್ಕೆ ತೆರಳಿದ್ದ ಅಮೆರಿಕ ಪೌರತ್ವ ಹೊಂದಿರುವ ತುಮಕೂರು ಮೂಲದ ಇಬ್ಬರು ನಾಪತ್ತೆಯಾಗಿದ್ದಾರೆ ಎಂದು ತಿಳಿದುಬಂದಿದೆ. ತುಮಕೂರು ನಗರದ ನೃಪತುಂಗನ ಬಡಾವಣೆಯ ರಂಗುಸುಧೀರ್ (53), ಕೀರ್ತಿ ಆಚಾರ್ಯ (50) ನಾಪತ್ತೆಯಾದವರು. ಅವರು ಅಮೆರಿಕದಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿದ್ದರು. ಆಗಸ್ಟ್ 22ರಂದು ಅಲ್ಲಿಂದ 10 ಜನರ ತಂಡ ನೇಪಾಳಕ್ಕೆ ಹೊರಟಿದ್ದರು. 26ರ ಬೆಳಗ್ಗೆ 8:29ರಂದು ಸಂಬಂಧಿ ಗುರುಪ್ರಸಾದ್ ಎನ್ನುವವರಿಗೆ ಕೊನೆಯ ಕರೆ ಮಾಡಿದ್ದರು. ಅಲ್ಲಿಂದ ಸಂಪರ್ಕಕ್ಕೆ ಸಿಗುತ್ತಿಲ್ಲ. ರಂಗುಸುಧೀರ್ ಹಾಗೂ ಕೀರ್ತಿ ಆಚಾರ್ಯ ಇಬ್ಬರ ಕುಟುಂಬ ತುಮಕೂರಿನಲ್ಲಿದ್ದು, ಕುಟುಂಬ ಸದಸ್ಯರಲ್ಲಿ ಆತಂಕ ಎದುರಾಗಿದೆ. ಈಗಾಗಲೇ ರಾಜ್ಯ ಸರ್ಕಾರ ಹಾಗೂ ನೇಪಾಳ ಸರ್ಕಾರವನ್ನು ಸಂಪರ್ಕಿಸಿ ಮಾಹಿತಿ ನೀಡಿದ್ದೇವೆ.

ಅಣ್ಣ ವಾಪಸ್ ಬಂದೇ ಬರುತ್ತಾನೆ ಎಂಬ ನಂಬಿಕೆಯಿದೆ ಎಂದು ರಂಗುಸುಧೀರ್ ಅವರ ತಂಗಿ ಸರಿತಾ ತಿಳಿಸಿದ್ದಾರೆ.

**ವಿಶೇಷ ನೋಡಲ್ ಅಧಿಕಾರಿಯಾಗಿ ಅಭಿಜಿತ್ ಗೌಡ ನೇಮಕ**

ನೇಪಾಳ ಮತ್ತು ಟಿಬೆಟ್ ಗಡಿಭಾಗದಲ್ಲಿ ಸಂಭವಿಸಿರುವ ಭೀಕರ ಪ್ರವಾಹ ಹಾಗೂ ಭೂಕುಸಿತದ ದುರಂತದಲ್ಲಿ ಸಿಲುಕಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರ ಸಿದ್ಧತೆ ನಡೆಸಿದೆ. ಸಂಕಷ್ಟಕ್ಕೆ ಸಿಲುಕಿರುವ ಪ್ರವಾಸಿಗರ ರಕ್ಷಣೆ ಮತ್ತು ಅವರ ಕುಟುಂಬಗಳಿಗೆ ನೆರವು ನೀಡಲು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಅಭಿಜಿತ್ ಗೌಡ ಅವರನ್ನು ರಾಜ್ಯ ಸರ್ಕಾರ ವಿಶೇಷ ನೋಡಲ್ ಅಧಿಕಾರಿಯಾಗಿ ನೇಮಕ ಮಾಡಿದೆ. ನೇಪಾಳದಲ್ಲಿ ಸಂಭವಿಸಿದ ರೌದ್ರಾವತಾರದ ಪರಿಣಾಮ ರಸ್ತೆ ಹಾಗೂ ಸೇತುವೆಗಳು ಕೊಚ್ಚಿಹೋಗಿದ್ದು, ಸಂಪರ್ಕ ಸಂಪೂರ್ಣವಾಗಿ ಕಡಿತಗೊಂಡಿದೆ. ಕೈಲಾಸ ಮಾನಸ ಸರೋವರ ಪ್ರವಾಸ ಹಾಗೂ ಮುಕ್ತಿನಾಥ ದರ್ಶನಕ್ಕೆ ತೆರಳಿದ್ದ ರಾಜ್ಯದ ಹತ್ತಾರು ಯಾತ್ರಿಕರು ಅಲ್ಲಿ ಸಿಲುಕಿಕೊಂಡಿದ್ದಾರೆ. ವಿಶೇಷ ನೋಡಲ್ ಅಧಿಕಾರಿ ಅಭಿಜಿತ್ ಗೌಡ ಅವರು ನವದೆಹಲಿಯ ವಿದೇಶಾಂಗ ಸಚಿವಾಲಯ ಕಾಠ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿ ಹಾಗೂ ದೆಹಲಿಯ ಕರ್ನಾಟಕ ಭವನದ ಅಧಿಕಾರಿಗಳೊಂದಿಗೆ ನಿರಂತರ ಸಮನ್ವಯ ಸಾಧಿಸಿ ರಕ್ಷಣಾ ಕಾರ್ಯಾಚರಣೆಯನ್ನು ಚುರುಕುಗೊಳಿಸಿದ್ದಾರೆ. ಬಂಧಿತ ಪ್ರವಾಸಿಗರ ರಕ್ಷಣೆಗಾಗಿ ರಾಜ್ಯ ಸರ್ಕಾರವು 24x7 ಕಾರ್ಯನಿರ್ವಹಿಸುವ ಹೆಲ್ಪ್‌ಲೈನ್ ಸಂಖ್ಯೆಗಳನ್ನು (1070 ಮತ್ತು 080–22253707) ಪ್ರಕಟಿಸಿದ್ದು, ಪ್ರತಿಯೊಬ್ಬ ಕನ್ನಡಿಗರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರುವವರೆಗೂ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಸರ್ಕಾರ ಭರವಸೆ ನೀಡಿದೆ.

# ಮೂಡುಬಿದಿರೆ ಜೈನಶ್ರೀಗಳ ಸಮೂಹ ಸಿಎಂ ಡಿ.ಕೆ.ಶಿವಕುಮಾರ್ ಭೇಟಿ



**ಮುಂಬಯಿ, ಆ.31:** ಕರ್ನಾಟಕದ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಮಸ್ತ ಜೈನ ಸಮಾಜದ ಪರವಾಗಿ ಮೂಡುಬಿದಿರೆ ಜಗದ್ಗುರು ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಪಟ್ಟಾಚಾರ್ಯ ಪಂಡಿತಚಾರ್ಯ ವರ್ಯ ಸ್ವಾಮೀಜಿ ಸ್ವಸ್ತಿಶ್ರೀ ಧರ್ಮ ಸೇನ ಭಟ್ಟಾರಕರು ವರೂರು, ಹುಬ್ಬಳ್ಳಿ ಸ್ವಸ್ತಿಶ್ರೀ ಲಕ್ಷ್ಮೀ ಸೇನ ಭಟ್ಟಾರಕರು ಕೊಲ್ಲಾಪುರ, ಭಾನು ಕೀರ್ತಿ ಭಟ್ಟಾರಕರು ಕಂಬದ ಹಳ್ಳಿ. ಸೋಮವಾರ ಬೆಂಗಳೂರು ವಿಧಾನಸೌಧ ಮುಖ್ಯ ಮಂತ್ರಿಗಳ ಕೊಠಡಿಯಲ್ಲಿ ಬೇಟಿಯಾಗಿ ಗೌರವಿಸಿ ಹರಸಿ ಆಶೀರ್ವಾದ ಮಾಡಿದರು. ಸ್ಮರಣಿಕೆಯಾಗಿ ರವಿಷೇಣ ಆಚಾರ್ಯ ರಚಿತ ಜೀವಂಧರ ಕುಮಾರ್ ಹೋತ ಪೇಟೆ ಅನುವಾದಗೊಂಡ ಅಧ್ಯಾತ್ಮ ಯೋಗಿ ಶ್ರೀರಾಮ, ಶಾಸ್ತ್ರ ಸ್ವಾಧ್ಯಯಕ್ಕಾಗಿ ಗ್ರಂಥ ನೀಡಿ ತಮ್ಮ ಆಡಳಿತ ಅವಧಿಯಲ್ಲಿ ನಾಡಿನ ಸರ್ವರಿಗೂ ಒಳಿತಾಗಲಿ ರಾಮ ರಾಜ್ಯವಾಗಲಿ ಎಂದು ಪ್ರಾರ್ಥಿಸಿದರು

ಜೈನ ಸಮಾಜದ ಜೈನ ನಿಗಮ ಮಂಡಳಿ ಸೇರಿದಂತೆ ಕೆಲವು ಬೇಡಿಕೆಗಳು ಈಡೇರಲಿ ಎಂದರು. ಕರ್ನಾಟಕ ಸರ್ಕಾರ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೇಡಿಕೆಗಳ ಪಟ್ಟಿ ಪರಿಶೀಲಿಸಿ ವಿಚಾರಿಸಿ ತಿಳಿಸು ದಾಗಿ ಭರವಸೆ ನೀಡಿದರು.

ಈ ಸಂಧರ್ಭ ಮಾಜಿ ಸಚಿವ ವೀರಕುಮಾರ್ ಪಾಟೀಲ್, ಮಗದಂ, ವಿನೋದ್ ದೊಡ್ಡಣ್ಣವರ್, ರಾಜಕೀರ್ತಿ ಅರುಣ್ ಯಲಗುದ್ರಿ, ಮುನ್ನೊಳಿ ವಕೀಲರು, ಆಶಾಪ್ರಭು, ಹರ್ಷೇಂದ್ರ ಜೈನ್ ಕರ್ನಾಟಕ ಜೈನ ಅಸೋಷಿಯೇಷನ್ ಪದಾಧಿಕಾರಿಗಳು, ಆಶೀಶ್ ನೇಹಾ ಜೈನ್ ಉಪಸ್ಥಿತರಿದ್ದರು.

# ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ ಸಚಿವ ಕೃಷ್ಣ ಬೈರೇಗೌಡ ಪರಿಶೀಲನೆ



**ಬೆಂಗಳೂರು, ಆ.31:** ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಸ್ವಚ್ಛತೆಯನ್ನು ಖಾತ್ರಿಪಡಿಸುವ ಉದ್ದೇಶದಿಂದ ಕೈಗೊಂಡಿರುವ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ ಮತ್ತು ಖಾಲಿ ನಿವೇಶನಗಳ ಸ್ವಚ್ಛತಾ ಕಾರ್ಯಕ್ಕೆ ಸಂಬಂಧಿಸಿದಂತೆ ಸಚಿವ ಕೃಷ್ಣ ಬೈರೇಗೌಡ ಅವರು ತಮ್ಮ ಪರಿಶೀಲನೆಯನ್ನು ಚುರುಕುಗೊಳಿಸಿದ್ದಾರೆ.

ದಾಸರಹಳ್ಳಿ ಕ್ಷೇತ್ರದ ಮಲ್ಲಸಂದ್ರ ಪ್ರದೇಶಕ್ಕೆ ಭೇಟಿ ನೀಡಿದ ಸಚಿವರು, ಕಸ ವಿಲೇವಾರಿ ಕಾರ್ಯದ ಕುರಿತು ಸ್ಥಳದಲ್ಲೇ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳೊಂದಿಗೆ ಸಂವಾದ ನಡೆಸಿದ ಸಚಿವರು, ಕಸ ಸಂಗ್ರಹಣೆ ಹಾಗೂ ದೈನಂದಿನ ಸ್ವಚ್ಛತೆಯ ಕುರಿತಾದ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದರು.

ನಂತರ ಪೌರಕಾರ್ಮಿಕರೊಂದಿಗೆ ಮಾತನಾಡಿದ ಅವರು, ನಗರದ ಸ್ವಚ್ಛತೆಯಲ್ಲಿ ಪೌರಕಾರ್ಮಿಕರ ಪಾತ್ರ ಮಹತ್ವದ್ದು ಎಂದು ಶ್ಲಾಘಿಸಿದರು. ಕೆಲಸದ ಸ್ಥಳದಲ್ಲಿ ಸಿಬ್ಬಂದಿ ಎದುರಿಸುತ್ತಿರುವ ಸಮಸ್ಯೆಗಳನ್ನು ವಿಚಾರಿಸಿ, ಕರ್ತವ್ಯದಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಮತ್ತು ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸಲು ಅಗತ್ಯ ಸೂಚನೆಗಳನ್ನು ನೀಡಿದರು.

ಈ ವೇಳೆ ಸ್ವಚ್ಛತೆಗೆ ಆದ್ಯತೆ ನೀಡುವ ಕುರಿತು ಕಠಿಣ ನಿಲುವು ವ್ಯಕ್ತಪಡಿಸಿದ ಸಚಿವರು, ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಸರಿಯಾಗಿ ಕೆಲಸ ಮಾಡದೆ ಬೇಜವಾಬ್ದಾರಿತನ ತೋರುವ ಕಾಯಂ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತುಕ್ರಮ ಕೈಗೊಳ್ಳಲಾಗುವುದು. ಅದೇ ರೀತಿ, ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ಸಿಬ್ಬಂದಿ ಕರ್ತವ್ಯದಲ್ಲಿ ಲೋಪವೆಸಗಿದರೆ, ಅವರನ್ನು ತಕ್ಷಣವೇ ಕೆಲಸದಿಂದ ವಜಾಗೊಳಿಸಲಾಗುವುದು. ಸ್ವಚ್ಛ ದಾಸರಹಳ್ಳಿ ನಿರ್ಮಾಣಕ್ಕೆ ಸಾರ್ವಜನಿಕರು ಹಾಗೂ ಅಧಿಕಾರಿಗಳು ಕೈಜೋಡಿಸಿ ಸಮನ್ವಯದಿಂದ ಕೆಲಸ ಮಾಡಬೇಕೆಂದು ಅವರು ಕರೆ ನೀಡಿದರು.

# ಲಂಡನ್, ಯುಕೆ ವಿಶ್ವವಿದ್ಯಾಲಯ ಕ್ಯಾಂಪಸ್‌ಗಳಲ್ಲಿ ಕರ್ನಾಟಕ ಉತ್ಸವ

## ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರು ಉಪಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ – ಬ್ರಿಟಿಷ್ ಉಪ ಹೈಕಮಿಷನರ್‌ಜತೆ ಚರ್ಚೆ



**ಬೆಂಗಳೂರು, ಆ. 31:** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸ್. ಈ. ಸುಧೀಂದ್ರ ಅವರು ಇಂದು ಬ್ರಿಟಿಷ್ ಉಪ ಹೈಕಮಿಷನರ್ ಚಂದ್ರು ಅಯ್ಯರ್ ಅವರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಆರೋಗ್ಯ, ಶಿಕ್ಷಣ, ತಂತ್ರಜ್ಞಾನ, ಜೈವಿಕ ಇಂಧನ, ವ್ಯಾಪಾರ ಹಾಗೂ ಜನರ ನಡುವಿನ ಸಂಬಂಧ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಬ್ರಿಟಿಷ್ ಉಪ ಹೈಕಮಿಷನರ್, ಬೆಂಗಳೂರು?ಲಂಡನ್ ನಡುವಿನ ಸಂಪರ್ಕ ಮತ್ತಷ್ಟು ಬಲಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಾರಕ್ಕೆ 35 ವಿಮಾನಗಳ ಸಂಚಾರ ನಡೆಯುತ್ತಿರುವುದನ್ನು ಉಪಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಅಲ್ಲದೆ, ಲಿವರ್‌ಪೂಲ್ ವಿಶ್ವವಿದ್ಯಾಲಯದ ಹೊಸ ಬೆಂಗಳೂರು ಕ್ಯಾಂಪಸ್ ಆರಂಭವಾಗಿರುವ ಬಗ್ಗೆ ಮಾಹಿತಿ ನೀಡಿ, ಮುಂದಿನ ಒಂದು ವರ್ಷದೊಳಗೆ ಇನ್ನೂ ಎರಡು ಬ್ರಿಟಿಷ್ ವಿಶ್ವವಿದ್ಯಾಲಯಗಳು ಬೆಂಗಳೂರಿನಲ್ಲಿ ಕ್ಯಾಂಪಸ್ ಸ್ಥಾಪಿಸಲಿರುವುದಾಗಿ ತಿಳಿಸಿದರು. ಮುಂದಿನ ವರ್ಷ ಲಂಡನ್ನಲ್ಲಿ 'ಕರ್ನಾಟಕೋತ್ಸವ' ಆಚರಿಸುವ ಸಾಧ್ಯತೆ ಹಾಗೂ ಕರ್ನಾಟಕ–ಯುಕೆ ಸಹಯೋಗವನ್ನು ಮತ್ತಷ್ಟು ವಿಸ್ತರಿಸುವ ಬಗ್ಗೆಯೂ ಚರ್ಚೆ ನಡೆಯಿತು. ಎಸ್.ಈ. ಸುಧೀಂದ್ರ ಅವರು ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿ, ವಾಣಿಜ್ಯೀಕರಣ ಮತ್ತು ನೂತನ ಜೈವಿಕ ಇಂಧನ ನೀತಿಯ ಅವಶ್ಯಕತೆ ಕುರಿತು ಉಪಮುಖ್ಯಮಂತ್ರಿಗಳಿಗೆ ವಿವರಿಸಿದರು. ಈ ಸಮಗ್ರ ಮಾಹಿತಿಯನ್ನು ಪಡೆದ ಉಪಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದರು. ರಾಜ್ಯದ ರೇಷ್ಮೆ ಉತ್ಪನ್ನಗಳನ್ನು ಕೇವಲ ಸೀರೆಗಳಿಗೆ ಮಾತ್ರ ಸೀಮಿತಗೊಳಿಸದೆ, ಇತರ ರೇಷ್ಮೆ ವಸ್ತ್ರಗಳನ್ನೂ ಉತ್ಪಾದಿಸಿ ಯುನೈಟೆಡ್ ಕಿಂಗ್‌ಡಮ್ (UK) ಗೆ ರಫ್ತು ಮಾಡುವುದು ಹಾಗೂ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಯಲ್ಲಿನ ಅವಕಾಶಗಳ ಕುರಿತು ಕಾರ್ಯಯೋಜನೆಗಳನ್ನು ರೂಪಿಸುವಂತೆ ಸಲಹೆ ನೀಡಿದರು. ಯುಕೆಯಲ್ಲಿರುವ ಭಾರತೀಯ ಹಾಗೂ ಕನ್ನಡಿಗ ವಲಸಿಗ ಸಮುದಾಯಗಳು ಕರ್ನಾಟಕ–ಯುಕೆ ಸಂಬಂಧಗಳನ್ನು ಗಟ್ಟಿಗೊಳಿಸುವಲ್ಲಿ ವಹಿಸುತ್ತಿರುವ ಪ್ರಮುಖ ಪಾತ್ರ ಹಾಗೂ ಹೆಚ್ಚಿನ ಸಹಕಾರದ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

# ಸುಳ್ಳು ಹೇಳಿಕೊಂಡು ಮಾಡುವ ಪಾದಯಾತ್ರೆಗೆ ಯಾರು ಅಡ್ಡಿಮಾಡ್ತಾರೆ ಡಿಸಿಎಂ ಪರಂ ಕೆಂಡಾಮಂಡಲ

**ತುಮಕೂರು, ಆ.31:** ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಮ್ಮಿಕೊಂಡಿರುವ ಪಾದಯಾತ್ರೆಯ ಕುರಿತು ಗೃಹ ಸಚಿವ ಡಾ. ಜಿ. ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.ಸರ್ಕಾರದ ವೈಫಲ್ಯಗಳ ಬಗ್ಗೆ ಸದನದಲ್ಲಿ ಚರ್ಚಿಸುವುದನ್ನು ಬಿಟ್ಟು ಬೀದಿಯಲ್ಲಿ ಪಾದಯಾತ್ರೆ ನಡೆಸಿ ಜನರಿಗೆ ಮಂಕುಬೂದಿ ಎರಚುವ ಕೆಲಸವನ್ನು ಬಿಜೆಪಿ ಮಾಡುತ್ತಿದೆ ಎಂದು ಅವರು ಖಾರವಾಗಿ ವಾಗ್ದಾಳಿ ನಡೆಸಿದರು.ಪ್ರತಿಪಕ್ಷಗಳಿಗೆ ಧೈರ್ಯವಿದ್ದರೆ ಸದನದಲ್ಲೇ ದಾಖಲೆಗಳನ್ನು ಇಟ್ಟು ಮಾತನಾಡಬೇಕಿತ್ತು. ಸಭಾಧ್ಯಕ್ಷರು ಹಾಗೂ ಸರ್ಕಾರ ಎಷ್ಟು ವಿನಂತಿಸಿದರೂ ಸದನ ನಡೆಸಲು ಬಿಡದೆ, ಈಗ ಜನರನ್ನು ತಪ್ಪು ದಾರಿಗೆ ಎಳೆಯಲು ಹೊರಟಿದ್ದಾರೆ. ಪ್ರತಿಭಟನೆ ಮಾಡುವುದು ಅವರ ಹಕ್ಕು, ಅದಕ್ಕೆ ನಮ್ಮ ಅಭ್ಯಂತರವಿಲ್ಲ ಎಂದು ಪರಮೇಶ್ವರ್ ತಿರುಗೇಟು ನೀಡಿದರು.

# ಬಳ್ಳಾರಿ ಪಾದಯಾತ್ರೆ ಬಳಿಕ ಬೆಂಗಳೂರಿನಾದ್ಯಂತ ಉದ್ಯಾನವನ ಉಳಿಸಿ ಅಭಿಯಾನ: ಬಿ.ವೈ. ವಿಜಯೇಂದ್ರ




**ಬೆಂಗಳೂರು, ಆ.31:** ಉದ್ಯಾನವನಗಳನ್ನು ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ಕಬಳಿಸಲು ಕಾಂಗ್ರೆಸ್ ಸರ್ಕಾರ ನಡೆಸುತ್ತಿರುವ ಪ್ರಯತ್ನದ ವಿರುದ್ಧ ಜನರಲ್ಲಿ ಹೆಚ್ಚುತ್ತಿರುವ ಆಕ್ರೋಶವನ್ನು ಸಂಘಟಿಸಿ, ಜನಾಂದೋಲನದ ರೂಪ ನೀಡುವ ಉದ್ದೇಶದಿಂದ ಬಳ್ಳಾರಿ ಪಾದಯಾತ್ರೆಯ ಬಳಿಕ ಬೆಂಗಳೂರಿನಾದ್ಯಂತ ಬಿಜೆಪಿ ನಗರ ಘಟಕಗಳ ವತಿಯಿಂದ ಉದ್ಯಾನವನ ಉಳಿಸಿ ಅಭಿಯಾನವನ್ನು ಹಮ್ಮಿಕೊಳ್ಳಲಾಗುವುದು ಎಂದು ರಾಜ್ಯ ಬಿಜೆಪಿ ಅಧ್ಯಕ್ಷರಾದ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಉದ್ಯಾನವನಗಳನ್ನು ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ಬಳಸಿಕೊಳ್ಳುತ್ತಿರುವ ಕಾಂಗ್ರೆಸ್ ಸರ್ಕಾರದ ಕ್ರಮದ ವಿರುದ್ಧ ಜನರಲ್ಲಿ ತೀವ್ರ ಆಕ್ರೋಶ ಮತ್ತು ಅಸಮಾಧಾನ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

ಜನರಲ್ಲಿರುವ ಈ ಆಕ್ರೋಶ ಮತ್ತು ಅಸಮಾಧಾನವನ್ನು ಒಗ್ಗೂಡಿಸಿ, ಅದಕ್ಕೆ ಸೂಕ್ತ ದಿಕ್ಕು ನೀಡಿ, ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಯ ವಿರುದ್ಧ ಬಲಿಷ್ಠ ಜನಾಂದೋಲನವನ್ನು ರೂಪಿಸುವುದು ನಮ್ಮ ಉದ್ದೇಶ ಎಂದು ವಿಜಯೇಂದ್ರ ಹೇಳಿದರು.

ಪ್ರತಿಷ್ಠಿತ ಹಾಗೂ ಹಚ್ಚಹಸಿರಿನಿಂದ ಕೂಡಿರುವ ಲಾಲ್‌ಬಾಗ್‌ನ ಪ್ರಮುಖ ಭಾಗವನ್ನು ಸುರಂಗ ರಸ್ತೆ ಯೋಜನೆಗಾಗಿ ಬಳಸಿಕೊಳ್ಳಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಆರೋಪಿಸಿದ ವಿಜಯೇಂದ್ರ, ಈ ಯೋಜನೆಗೆ ಸಂಬಂಧಿಸಿದಂತೆ ಅಂಗೀಕರಿಸಲಾದ ಮಸೂದೆ ಸಂಪೂರ್ಣ ದಾರಿ ತಪ್ಪಿಸುವಂತಿದೆ ಎಂದು ಟೀಕಿಸಿದರು. ನಗರ ಸಾರಿಗೆ ಕ್ಷೇತ್ರದ ತಜ್ಞರು ಈಗಾಗಲೇ ಸುರಂಗ ರಸ್ತೆ ಯೋಜನೆ ಕಾರ್ಯಸಾಧುವಲ್ಲ ಎಂದು ಅಭಿಪ್ರಾಯಪಟ್ಟಿದ್ದರೂ, ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಈ ಯೋಜನೆಯನ್ನು ತಮ್ಮ ವೈಯಕ್ತಿಕ ಪ್ರತಿಷ್ಠೆಯ ವಿಷಯವನ್ನಾಗಿ ಮಾಡಿಕೊಂಡಿದ್ದಾರೆ ಎಂದು ವಿಜಯೇಂದ್ರ ಆರೋಪಿಸಿದರು. ಈ ಜನವಿರೋಧಿ, ಪರಿಸರ ವಿರೋಧಿ ಹಾಗೂ ಪರಿಸರ ವ್ಯವಸ್ಥೆಗೆ ಹಾನಿಕಾರಕ ಯೋಜನೆ ಜಾರಿಯಾಗದಂತೆ ತಡೆಯಲು ಬಿಜೆಪಿ ಬಹು ಆಯಾಮದ ಕಾರ್ಯತಂತ್ರಗಳನ್ನು ರೂಪಿಸಿದೆ ಎಂದು ಅವರು ತಿಳಿಸಿದರು. ಬಲಿಷ್ಠ ಜನಾಂದೋಲನ ನಿರ್ಮಿಸಲು ನಿರಂತರ ಹಾಗೂ ಸತತ ಹೋರಾಟ ನಡೆಸುವುದರ ಜೊತೆಗೆ, ಬಿಜೆಪಿ ರಾಜ್ಯಪಾಲರನ್ನು ಭೇಟಿಯಾಗಿ ಮನವಿ ಸಲ್ಲಿಸಲಿದೆ. ಅಗತ್ಯವಿದ್ದಲ್ಲಿ ಈ ಯೋಜನೆಯ ವಿರುದ್ಧ ಕಾನೂನು ಹೋರಾಟದ ಆಯ್ಕೆಗಳನ್ನೂ ಪರಿಶೀಲಿಸಲಿದೆ ಎಂದು ವಿಜಯೇಂದ್ರ ಹೇಳಿದರು.

ಯೋಜನೆಯನ್ನು ಕೈಬಿಡುವವರೆಗೆ ಸರಣಿ ಹೋರಾಟಗಳು ಮತ್ತು ಅಭಿಯಾನಗಳನ್ನು ರೂಪಿಸಲು ನಗರ ಮಟ್ಟದಲ್ಲಿ ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು ಹಾಗೂ ಹಿರಿಯ ನಾಯಕರನ್ನೊಳ ಗೊಂಡ ಪರಿಶೀಲನಾ ಸಮಿತಿಯನ್ನು ರಚಿಸುವುದಾಗಿ ಅವರು ತಿಳಿಸಿದರು.

# ಮಂಗಳೂರು ಕೆಆರ್‌ಐಡಿಎಲ್: ಸಚಿವರ ಹೆಸರಲ್ಲಿ ಶೇ.7 ಕಮೀಷನ್ ಹಗರಣ



## ಅಧಿಕಾರಿಗಳ ಅಮಾನತು-ಉನ್ನತ ಮಟ್ಟದ ತನಿಖೆಗೆ ಪ್ರತಿಪಕ್ಷ ನಾಯಕ ಅಶೋಕ್ ಆಗ್ರಹ

**ಬೆಂಗಳೂರು, ಆ.31:** ಮಂಗಳೂರು ಕೆಆರ್‌ಐಡಿಎಲ್ ವಿಭಾಗದ ಎಂಜಿನಿಯರ್‌ಗಳು ಉಸ್ತುವಾರಿ ಸಚಿವರು ಹಾಗೂ ಇಲಾಖೆ ಸಚಿವರ ಹೆಸರಿನಲ್ಲಿ ಗುತ್ತಿಗೆದಾರರಿಂದ ಶೇ.7ರಷ್ಟು 'ಶುಲ್ಕ' ವಸೂಲಿ ಮಾಡುತ್ತಿದ್ದಾರೆ ಎಂಬ ಪುತ್ತೂರು ಕಾಂಗ್ರೆಸ್ ಶಾಸಕ ಅಶೋಕ್ ಕುಮಾರ್ ರೈ ಅವರ ಆರೋಪ ಇದೀಗ ರಾಜಕೀಯ ವಾಗ್ವಾದಕ್ಕೆ ಕಾರಣವಾಗಿದೆ.ಈ ವಿಚಾರವಾಗಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್‌ಗೆ ಲಿಖಿತ ದೂರು ನೀಡಿದ್ದರು. ಮಂಗಳೂರು ಕೆಆರ್‌ಐಡಿಎಲ್ ವಿಭಾಗದಲ್ಲಿ ಕಾಮಗಾರಿ ನಡೆಸುವ ಗುತ್ತಿಗೆದಾರರ ಮೇಲೆ ಒತ್ತಡ ಹೇರಿ, ಸಚಿವರ ಹೆಸರಿನಲ್ಲಿ ಹಣ ವಸೂಲಿ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದ್ದರು.

ಈ ವಿಚಾರವನ್ನು ಸಾಮಾಜಿಕ ಮಾಧ್ಯಮದಲ್ಲಿ ಪ್ರಸ್ತಾಪಿಸಿರುವ ಆರ್. ಅಶೋಕ್, ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿದಾಗ ಅದನ್ನು ರಾಜಕೀಯ ಎಂದು ಹೇಳಲಾಗುತ್ತಿತ್ತು. ಆದರೆ, ಇದೀಗ ಆಡಳಿತಾರೂಢ ಕಾಂಗ್ರೆಸ್‌ನ ಶಾಸಕರೇ ಸರ್ಕಾರದ ವ್ಯವಸ್ಥೆಯ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ ಎಂದು ಹೇಳಿದ್ದಾರೆ.

ಅಧಿಕಾರಿಗಳು ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಹೆಸರನ್ನು ಬಳಸಿಕೊಂಡು ಶೇ 7ರಷ್ಟು 'ಪರ್ಸಂಟೇಜ್' ವಸೂಲಿ ಮಾಡುತ್ತಿದ್ದಾರೆ ಎಂಬ ಆರೋಪವನ್ನು ಶಾಸಕ ಅಶೋಕ್ ರೈ ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ. ಈ ಆರೋಪದ ಕುರಿತು ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆರ್. ಅಶೋಕ್ ಆಗ್ರಹಿಸಿದ್ದಾರೆ. ಕಮಿಷನ್ ದಂಧೆ' ತನಿಖೆಗೆ ಆರ್. ಅಶೋಕ್ ಆಗ್ರಹ ಕೆಆರ್‌ಐಡಿಎಲ್‌ನಲ್ಲಿ ಕಮಿಷನ್ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಿ, ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ಆರ್. ಅಶೋಕ್ ಒತ್ತಾಯಿಸಿದ್ದಾರೆ. ಅಲ್ಲದೆ, ಸಚಿವರ ಹೆಸರಿನಲ್ಲಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪ ಇರುವುದರಿಂದ ಸಂಬಂಧಪಟ್ಟ ಇಲಾಖೆ ಸಚಿವರು ಹಾಗೂ ಮಂಗಳೂರು ಜಿಲ್ಲಾ ಉಸ್ತುವಾರಿ ಸಚಿವರ ಪಾತ್ರದ ಬಗ್ಗೆಯೂ ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

## ಕೆಪಿಎಸ್‌ಸಿ ಕುರಿತು ರಾಜ್ಯ ಸರ್ಕಾರದ ವಿರುದ್ಧ ಸತತ ವಾಗ್ದಾಳಿ ಮುಂದುವರಿಸಿದ ಕೇಂದ್ರ ಸಚಿವ ಎಚ್‌ಡಿಕೆ

# ರಾಹುಲ್ ಗಾಂಧಿ ಅವರೇ ಬೆಂಗಳೂರಿಗೆ ಯಾವಾಗ ಬರುತ್ತೀರಿ: ಎಚ್.ಡಿ. ಕುಮಾರ ಸ್ವಾಮಿ ಪ್ರಶ್ನೆ

**ನವದೆಹಲಿ, ಆ.31:** ಕೆಪಿಎಸ್‌ಸಿ ಅಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ನವದೆಹಲಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಕೆಪಿಎಸ್‌ಸಿ ಸಂತ್ರಸ್ಥರ ಜತೆ ಚರ್ಚೆ ನಡೆಸಲು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಯಾವಾಗ ಬೆಂಗಳೂರಿಗೆ ಬರುತ್ತಾರೆ? ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ; ರಾಷ್ಟ್ರೀಯ ಮಟ್ಟದಲ್ಲೂ ಕೂಡ ಕೆಪಿಎಸ್‌ಸಿ ಹಗರಣದಿಂದ ಕರ್ನಾಟಕದ ಬಗ್ಗೆ ನಕಾರಾತ್ಮಕವಾಗಿ ಚರ್ಚೆಯಾಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರದ ವೈಫಲ್ಯ ಕಾರಣ. ಇದರ ಬಗ್ಗೆ ರಾಹುಲ್ ಗಾಂಧಿ ಮಾತನಾಡಬೇಕಾಗುತ್ತದೆ ಎಂದರು.

ಸಂವಿಧಾನದ ಪುಸ್ತಕವನ್ನು ಜೇಬಿನಲ್ಲಿ ಇಟ್ಟುಕೊಂಡು ಓಡಾಡುವ ರಾಹುಲ್ ಗಾಂಧಿ ಕರ್ನಾಟಕದಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ ತುಟಿ ಬಿಚ್ಚಬೇಕಾಗಿದೆ. ಅವರು ಬೆಂಗಳೂರಿಗೆ ಬರಬೇಕು. ಅಲ್ಲಿ ಕೆಪಿಎಸ್‌ಸಿ ಸಂತ್ರಸ್ಥ ಯುವಕರ ಜೊತೆ ಚರ್ಚಿಸಬೇಕು. ಕಾಂಗ್ರೆಸ್ ಪಕ್ಷದ ಅವರ ಸರ್ಕಾರ ಏನೇನು ಅಕ್ರಮಗಳಲ್ಲಿ ಭಾಗಿಯಾಗಿದೆ ಎಂಬುದನ್ನು ಸ್ವತಃ ಅರಿಯಬೇಕು. ರಾಹುಲ್ ಗಾಂಧಿ ಅವರು ನೀಟ್ ವಿಷಯವನ್ನು ಯಾವ ರೀತಿ ಹೇಗೆ ಎತ್ತಿಕೊಂಡು ಹೋರಾಟ ನಡೆಸಿದರೋ ಅದೇ ರೀತಿಯಲ್ಲಿ ಕೆಪಿಎಸ್‌ಸಿ ಹಗರಣದ ಬಗ್ಗೆಯೂ ಹೋರಾಟ ನಡೆಸಬೇಕು ಎಂದು ಆಗ್ರಹಿಸಿದರು.

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದಾಗ ಸಹಾಯಕ ಎಕ್ಸಿಕ್ಯೂಟಿವ್ ಇಂಜಿನಿಯರ್ ಗ್ರೇಟ್ 1 ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಯಲ್ಲಿ ನಡೆದಿರುವ ಅಕ್ರಮದಿಂದ ಪ್ರಿಯಾಂಕ ಖರ್ಗೆ ಅವರು ನುಣುಚಿಕೊಳ್ಳಲು ಸಾಧ್ಯವಿಲ್ಲ. ಅಭ್ಯರ್ಥಿಗಳನ್ನು ರೆಸಾರ್ಟ್‌ನಲ್ಲಿ ಕೂರಿಸಿ ಪ್ರಶ್ನೆ ಪತ್ರಿಕೆಗಳನ್ನು ಕೊಟ್ಟು ಓಎಂಆರ್ ಶೀಟ್ ಗಳಲ್ಲಿ ಗುರುತು ಹಾಕಿಸಿರುವ ಅಕ್ರಮದಿಂದ ಅವರು ಪಾರಾಗಲು ಸಾಧ್ಯವಿಲ್ಲ. ಇದು ನನಗೆ ಸಂಬಂಧವಿಲ್ಲ ಎಂದು ಅವರು ಹೇಗೆ ಹೇಳುತ್ತಾರೆ ಎಂದು ಸಚಿವ ಕುಮಾರಸ್ವಾಮಿ ಪ್ರಶ್ನಿಸಿದರು.

ದೇಶದಲ್ಲಿ ನಡೆಯುವ ಎಲ್ಲಾ ವಿಷಯಗಳ ಬಗ್ಗೆ ಪ್ರಿಯಾಂಕ್ ಖರ್ಗೆ ಅವರಿಗೆ ಮಾಹಿತಿ ಇರುತ್ತದೆ. ಆದರೆ ಸ್ವತಃ ತಾವೇ ನಿರ್ವಹಿಸುತ್ತಿರುವ ಇಲಾಖೆಯಲ್ಲಿ ಏನೇನು ನಡೆಯುತ್ತಿದೆ ಎಂಬುದು ಗೊತ್ತಾಗುವುದಿಲ್ಲ ಎಂದರೆ ಹೇಗೆ? ಇಂತಹ ಅತಿಯಾದ ಜಾಣತನ ಪ್ರದರ್ಶಿಸುವ ಅಗತ್ಯವಿಲ್ಲ. ಜನರು ಬಹಳ ಬುದ್ಧಿವಂತರಿದ್ದಾರೆ. ಎಲ್ಲಾ ವಿಷಯಗಳನ್ನು ಅರ್ಥ ಮಾಡಿಕೊಳ್ಳುತ್ತಿದ್ದಾರೆ ಎಂದು ಸಚಿವರು ಚಾಟಿ ಬೀಸಿದರು.

ಸಹಾಯಕ ಎಕ್ಸಿಕ್ಯೂಟಿವ್ ಇಂಜಿನಿಯರ್ ಗ್ರೇಟ್ 1 ಹುದ್ದೆ ಮತ್ತು ಪಶುವೈದ್ಯಾಧಿಕಾರಿಗಳ ಆಯ್ಕೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ರಾಹುಲ್ ಗಾಂಧಿಯವರು ಬೆಂಗಳೂರಿನಲ್ಲಿ ಬಹಿರಂಗವಾಗಿ ಯುವಜನರ ಜೊತೆ ಸಂವಾದ ನಡೆಸಬೇಕು. ಅವರು ಎಲ್ಲಿದ್ದಾರೋ ಗೊತ್ತಿಲ್ಲ. ದೇಶದಲ್ಲಿಯೇ ಇದ್ದರೆ ಅವರು ತಕ್ಷಣವೇ ಬೆಂಗಳೂರಿಗೆ ಬಂದು ನಿರುದ್ಯೋಗಿ ಯುವಕರ ಮನವಿಗಳನ್ನು ಆಲಿಸಬೇಕು. ಆಗ ಅವರ ಅನುಭವ ಮತ್ತಷ್ಟು ವಿಸ್ತಾರಗೊಳ್ಳುತ್ತದೆ ಎಂದು ಲೇವಡಿ ಮಾಡಿದರು.



ಸಾಮಾನ್ಯವಾಗಿ ಪರೀಕ್ಷೆಗಳು ಶಾಲಾ–ಕಾಲೇಜುಗಳಲ್ಲಿ ನಡೆಯುತ್ತವೆ ಎಂಬುದು ನನಗೆ ಗೊತ್ತಿರುವ ವಿಷಯ. ಆದರೆ ಪ್ರಿಯಾಂಕ ಖರ್ಗೆಯವರ ಇಲಾಖೆಗೆ ನಡೆದ ಪರೀಕ್ಷೆಯಲ್ಲಿ ಅಭ್ಯರ್ಥಿಗಳನ್ನು ರೆಸಾರ್ಟ್ ನಲ್ಲಿ ಕೂರಿಸಿ ಪರೀಕ್ಷೆ ಬರಿಸಲಾಗಿದೆ. ನನಗೆ ಗೊತ್ತಿರುವ ಪ್ರಕಾರ ದೇಶದಲ್ಲಿಯೇ ಇದು ಮೊತ್ತ ಮೊದಲ ಪ್ರಯೋಗ. ಇದಕ್ಕಾಗಿ ಪ್ರಿಯಾಂಕ ಖರ್ಗೆ ಅವರನ್ನು ಭೇಷ್ ಎನ್ನಲೇಬೇಕು. ದುಡ್ಡು ಕೊಟ್ಟ ವಿದ್ಯಾರ್ಥಿಗಳಿಗೆ ಮೊದಲೇ ಪ್ರಶ್ನೆ ಪತ್ರಿಕೆಗಳನ್ನು ಕೊಟ್ಟು ಉತ್ತರ ಬರೆಸಲಾಗಿದೆ. ರಾಜ್ಯ ಸರ್ಕಾರದ ನಿಷ್ಕ್ರಿಯತೆ ಇಲ್ಲಿ ಸ್ಪುಟವಾಗಿ ಕಾಣುತ್ತದೆ. ಸಾಂವಿಧಾನಿಕ ಸಂಸ್ಥೆಯಾದರೂ ಅಕ್ರಮಗಳ ಆಗರವಾಗಿರುವ ಕೆಪಿಎಸ್‌ಸಿ ರಾಜ್ಯ ಸರ್ಕಾರದ ಮೂಗಿನ ನೇರಕ್ಕೆ ಕೆಲಸ ಮಾಡುತ್ತಿದೆ ಎಂದು ಸಚಿವರು ಟೀಕಾಪ್ರಹಾರ ನಡೆಸಿದರು.

ಪ್ರಿಯಾಂಕ್ ಖರ್ಗೆ ಅವರ ವರ್ತನೆಯ ಬಗ್ಗೆ ನನಗೆ ಬಹಳ ಅಚ್ಚರಿ ಆಗುತ್ತಿದೆ. ಅವರಿಗೆ ಗೃಹ ಇಲಾಖೆ ಸಿಕ್ಕಿದ್ದು ಕೂಡಲೇ ಅವರಲ್ಲಿ ಏನೋ ಹೊಕ್ಕಿದೆ. ಅದು ದೆವ್ವದ ಶಕ್ತಿ ಎಂದು ನಾನು ಹೇಳುವುದಿಲ್ಲ. ಆದರೆ ಅವರು ಸಮತೋಲನ ಮೀರಿ ಕೆಲಸ ಮಾಡುತ್ತಿದ್ದಾರೆ ಎನ್ನುವುದು ಸತ್ಯ. ಬೆಳಗ್ಗೆಯಿಂದ ಸಂಜೆಯವರೆಗೆ ಬರೀ ಆರ್ ಎಸ್ ಎಸ್ ಜಪ ಮಾಡುವುದೇ ಆಗಿದೆ. ಕೊಟ್ಟ ಕೆಲಸ ಮಾಡುವುದು ಬಿಟ್ಟು ಇನ್ನೊಬ್ಬರಿಗೆ ಬೋಧನೆ ಮಾಡುವುದೇ ಆಗಿದೆ. ನನಗೇ ಜ್ಞಾನ ಹೇಳಿಕೊಡಲು ಬಂದಿದ್ದಾರೆ ಅವರು ಎಂದು ಸಚಿವರು ಕೆಂಡಕಾರಿದರು.

ನಾನು ಕೆಪಿಎಸ್‌ಸಿ ಹಗರಣಗಳ ಬಗ್ಗೆ ಚರ್ಚೆ ಮಾಡಿರುವ ಎಲ್ಲ ಸಂದರ್ಭಗಳಲ್ಲಿಯೂ ದಾಖಲೆಗಳನ್ನು ಮುಂದಿಟ್ಟೇ ಮಾತನಾಡಿದ್ದೇನೆ. ತನಿಖಾ ವರದಿ, ಕಾರ್ಬನ್‌ನಿಂದ ತಿದ್ದಿದ ಓಎಂಆರ್ ಶೀಟ್‌ಗಳು, ಉಪಸಮಿತಿ ವರದಿ ಇತ್ಯಾದಿಗಳನ್ನು ಬಿಡುಗಡೆ ಮಾಡಿದ್ದೇನೆ. ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಾಯಕ ಎಕ್ಸಿಕ್ಯೂಟಿವ್ ಇಂಜಿನಿಯರ್ ಗ್ರೇಟ್ 1 ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂದು ರಾಜ್ಯದ ಮುಖ್ಯಮಂತ್ರಿಯೇ ಸದನದಲ್ಲಿ ಉತ್ತರ ನೀಡಿದ್ದಾರೆ. ಅದನ್ನು ಕೂಡ ಬಿಡುಗಡೆ ಮಾಡಿದ್ದೇನೆ. ಇದಕ್ಕಿಂತ ಇನ್ನೇನು ದಾಖಲೆಗಳನ್ನು ಒದಗಿಸಬೇಕು? ಒಂದು ವೇಳೆ ಅವರಿಗೆ ಅರ್ಥವಾಗದಿದ್ದರೆ ಎಲ್ಲಾ ದಾಖಲೆಗಳನ್ನು ಅವರು ಮನೆಗೆ ಕಳಿಸುತ್ತೇನೆ ಎಂದು ಸಚಿವರು ಕಿಡಿಕಾರಿದರು.

ಈ ನಿರ್ದಿಷ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ನಲ್ಲಿ ಒಟ್ಟು 12 ಬಾರಿ ವಿಚಾರಣೆ ನಡೆದಿದೆ. ಎಲ್ಲಾ ಸಂದರ್ಭಗಳಲ್ಲಿ ಏನೋ ಒಂದು ನೆಪ ಹೇಳಿ ವಿಚಾರಣೆಯನ್ನು ಮುಂದಕ್ಕೆ ಹಾಕಿಸಿಕೊಳ್ಳುವ ಪ್ರಯತ್ನವನ್ನು ಸರ್ಕಾರ ಮಾಡುತ್ತದೆ. ನ್ಯಾಯಾಲಯಕ್ಕೆ ಸರಿಯಾದ ಮಾಹಿತಿ ನೀಡದೆ ತಪ್ಪು ಮಾಡುತ್ತಿದೆ. ಪಶು ವೈದ್ಯಾಧಿಕಾರಿಗಳ ಅಕ್ರಮದ ಬಗ್ಗೆ ಮಾಧ್ಯಮಗಳಲ್ಲಿ ವರದಿಗಳು ಬಂದಾಗ ಈ ಪ್ರಕರಣ ನನ್ನ ಗಮನಕ್ಕೆ ಬಂದಿತು.

ಅವರ ಬಗ್ಗೆ ಹೇಳಿದ್ದೇನೆ ವಿನಾ ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ವೈಯಕ್ತಿಕ ದ್ವೇಷವಾಗಲಿ ಅಥವಾ ಅಸೂಯೆ ಆಗಲಿ ನನಗೆ ಇಲ್ಲ ಎಂದು ಸಚಿವ ಕುಮಾರಸ್ವಾಮಿ ಹೇಳಿದರು.

ಪ್ರಿಯಾಂಕ್ ಖರ್ಗೆ ಅವರು ರಾಜಕೀಯ ನಿವೃತ್ತಿ ಆಗುತ್ತೇನೆ ಎಂದು ನನಗೆ ಸವಾಲು ಹಾಕಿದ್ದಾರೆ. ನಾನು ಅವರ ರಾಜಕೀಯ ನಿವೃತ್ತಿ ಬಯಸುವುದಿಲ್ಲ. ಆದರೆ ಪಾರದರ್ಶಕವಾಗಿ ತನಿಖೆ ನಡೆಸಿ ತಪ್ಪಿತಸ್ಥರನ್ನು ಶಿಕ್ಷೆಗೆ ಒಳಪಡಿಸಬೇಕು ಎಂಬುದೇ ನನ್ನ ಆಗ್ರಹ. ಸಚಿವರು ಪ್ರಾಮಾಣಿಕವಾಗಿ ಹೇಳಲಿ; ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಂತ್ರಿಯಾಗಿ ನೇಮಕಾತಿ ಆದೇಶಗಳನ್ನು ಕೊಡುವಾಗ ಸಂಬಂಧಪಟ್ಟ ಅಭ್ಯರ್ಥಿಗಳ ಆಯ್ಕೆಯ ನೇಮಕಾತಿ ಕಡತ ನಿಮ್ಮ ಮುಂದೆ ಬಂದಿಲ್ಲವೇ? ಎಂದು ಕುಮಾರಸ್ವಾಮಿ ಅವರು ನೇರವಾಗಿ ಪ್ರಶ್ನಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟೆಂಬರ್ 1 2026 ಮಂಗಳವಾರ

## ಒಳಪುಟಗಳಲ್ಲಿ

ಸಚಿವ ಬಸವರಾಜ ರಾಯರೆಡ್ಡಿಯನ್ನು ಸಂಪುಟದಿಂದ ತಕ್ಷಣ ವಜಾಮಾಡಿ: ಸಿಎಂಗೆ ಅಶೋಕ್ ಒತ್ತಾಯ - ಪು.4

ವಿದ್ಯಾರ್ಥಿಗಳಿಗೆ ಪಠ್ಯೇತರ ಚಟುವಟಿಕೆ ಅತ್ಯಂತ ಅಗತ್ಯ: ನಟ ಶ್ರೀನಾಥ್ - ಪು.5

— ಕಾವೇರಿ ವಿವಾದ —

## 15 ದಿನಕ್ಕೊಮ್ಮೆ ಸಭೆ ನಡೆಸಿ ಪರಿಷ್ಕೃತ ಮಾಹಿತಿ ನೀಡಿ ಸುಪ್ರೀಂ ಸೂಚನೆ



ನವದೆಹಲಿ, ಆ.31: ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ತಮಿಳುನಾಡು ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಇಂದು ಕೈಗೆತ್ತಿಕೊಂಡು ಸುಪ್ರೀಂ ಕೋರ್ಟ್, 15 ದಿನಕ್ಕೊಮ್ಮೆ ಸಭೆ ನಡೆಸಿ ಪರಿಷ್ಕೃತ ಮಾಹಿತಿ ನೀಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿಗೆ ಸೂಚನೆ ನೀಡಿದೆ.

ನ್ಯಾಯಮೂರ್ತಿ ವಿಕ್ರಮ್ ನಾಥ್ ನೇತೃತ್ವದ ದ್ವಿಸದಸ್ಯ ಪೀಠದ ಮುಂದೆ ತಮಿಳುನಾಡು ಸರ್ಕಾರದ ಅರ್ಜಿಯ ವಿಚಾರಣೆಯನ್ನು ಇಂದು ಕೈಗೆತ್ತಿಕೊಳ್ಳಲಾಯಿತು. ಸಿಡಬ್ಲ್ಯೂಎಂಎ ನಿಗದಿಪಡಿಸಿದ ಪ್ರಮಾಣಕ್ಕಿಂತಲೂ ಹೆಚ್ಚಿನ ನೀರನ್ನು ಈಗಾಗಲೇ ಹರಿಸಲಾಗಿದೆ ಎಂದು ಕರ್ನಾಟಕದ ಪರ ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು. ಅಲ್ಲದೆ, ನಮ್ಮ ರಾಜ್ಯದ ಕಾವೇರಿ ಜಲಾನಯನ ಪ್ರದೇಶದ ಹಲವು ಭಾಗಗಳು ಈಗಾಗಲೇ ಬರಪೀಡಿತ ಪ್ರದೇಶಗಳೆಂದು ಘೋಷಣೆ ಯಾಗಿವೆ ಎಂಬ ಅಂಶವನ್ನೂ ಪ್ರಸ್ತಾಪಿಸಿದರು.

ಮತ್ತೊಂದೆಡೆ, ತಮಿಳುನಾಡು ಕಡೆಯಿಂದ ವಾದ ಮಂಡಿಸಿದ ವಕೀಲರು, ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ನೀರಿನ ಸಂಗ್ರಹ ಹೆಚ್ಚುತ್ತಿದ್ದರೂ ತಮಗೆ ಬೇಕಾದಷ್ಟು ನೀರು ಹರಿದುಬರುತ್ತಿಲ್ಲ ಎಂದು ಅಳಲು ತೋಡಿಕೊಂಡರು. ಒಟ್ಟು 35 ಟಿಎಂಸಿ ನೀರು ಬರಬೇಕಿತ್ತಾದರೂ ಪೂರ್ಣ ಪ್ರಮಾಣದಲ್ಲಿ ನೀರು ಬಿಟ್ಟಿಲ್ಲವಾದ್ದರಿಂದ ಬಾಕಿ ಉಳಿದಿರುವ ನೀರನ್ನೂ ಕೂಡಲೇ ಬಿಡಿಸಿಕೊಡಬೇಕು ಎಂದು ಪಟ್ಟು ಹಿಡಿದರು.

ಆದರೆ, ತಮಿಳುನಾಡಿನ ಈ ವಾದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಕರ್ನಾಟಕ ಈಗಾಗಲೇ ನಿಗದಿತ ಪ್ರಮಾಣದ ನೀರನ್ನು ಹರಿಸುತ್ತಿದೆಯಲ್ಲವೇ ಎಂದು ಪ್ರಶ್ನಿಸಿತು. ಅಲ್ಲದೆ, ಬಾಕಿ ನೀರನ್ನು ಬಿಡುವಂತೆ ಕೋರಿ ನೇರವಾಗಿ ಸುಪ್ರೀಂ ಕೋರ್ಟ್‌ಗೆ ಬರುವ ಬದಲು ಸಿಡಬ್ಲ್ಯುಆರ್‌ಸಿ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಸೂಚನೆ ನೀಡಿತು. ಇದರ ಜೊತೆಗೆ, ಸಿಡಬ್ಲ್ಯೂಆರ್‌ಸಿ ಪ್ರತಿ ಹದಿನೈದು ದಿನಗಳಿಗೊಮ್ಮೆ ತಪ್ಪದೆ ಸಭೆ ನಡೆಸಿ, ವಾಸ್ತವ ಪರಿಸ್ಥಿತಿಯ ಪರಿಷ್ಕೃತ ಮಾಹಿತಿಯನ್ನು ಆಧರಿಸಿ ನೀರು ಹರಿಸುವ ಕುರಿತು ಸೂಕ್ತ ನಿರ್ದೇಶನ ನೀಡಬೇಕೆಂದು ತಿಳಿಸಿ ವಿಚಾರಣೆಯನ್ನು ಸೆಪ್ಟೆಂಬರ್ 15ಕ್ಕೆ ಮುಂದೂಡಿತು.

# ಬೆಂಗಳೂರು ದಾಟಿದ 'ಭೂಗ್ಯಾರಂಟಿ'; ಭೂತ್ಯಾಗಿಗಳಿಗೆ ರಕ್ಷಣೆ

### ನಾನೂ ರೈತನ ಮಗ; ನಿಮ್ಮ ನೋವನ್ನು ಕಡಿಮೆ ಮಾಡುತ್ತೇನೆ: ಸಿಎಂ ಡಿ.ಕೆ.ಶಿವಕುಮಾರ್ ವಾಲ್ ಆಫ್ ಗ್ರಾಟಿಟ್ಯೂಡ್; 3200 ರೈತರ ಹೆಸರು



ಬೆಂಗಳೂರು, ಆ.31: ನಾನೊಬ್ಬ ರೈತರ ಮಗ, ನಮ್ಮದೂ ದೊಡ್ಡ ಚರಿತ್ರೆ ಇದೆ. ರೈತ ಆಸ್ತಿ ಕಳೆದುಕೊಳ್ಳಬೇಕಾದರೆ ಆಗುವ ನೋವಿನ ಅರಿವಿದೆ. ಆ ನೋವನ್ನು ಕಡಿಮೆ ಮಾಡಬೇಕೆನ್ನುವ ಉದ್ದೇಶವೂ ಇದೆ" ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ಡಾ.ಕೆ.ಶಿವರಾಮ ಕಾರಂತ ಬಡಾವಣೆಗೆ ಭೂಮಿ ನೀಡಿದ ಭೂಮಾಲೀಕರು, ರೈತರಿಗೆ ನೆಹರು ತಾರಾಲಯದಲ್ಲಿ ಶಿವಕುಮಾರ್ ಸೋಮವಾರ ಭೂ ಪರಿಹಾರ ವಿತರಣೆ ಮಾಡಿ ಮಾತನಾಡಿದರು.

"ಮೂರು ವರ್ಷಗಳಿಂದಲೇ ಪರಿಹಾರ ನೀಡುವ ಪ್ರಯತ್ನ ಮಾಡಿ ಅರ್ಜಿಗಳನ್ನು ಕರೆಯಲಾಗಿತ್ತು. ನ್ಯಾಯಾಲಯ ತಡೆಯಾಜ್ಞೆ ನೀಡಿದ್ದರಿಂದ ಶಿವರಾಮ ಕಾರಂತ ಬಡಾವಣೆಯ ಭೂ ಮಾಲೀಕರಿಗೆ ಪರಿಹಾರ ನೀಡುವುದು ತಡವಾಯಿತು. ನಿವೇಶನ ಹಂಚಿಕೆಗೆ ಅರ್ಜಿ ಹಾಕಲು ಆಹ್ವಾನ ನೀಡಲು ಮುಂದಾದಾಗ ಕೋರ್ಟ್ ತಡೆಯಾಜ್ಞೆ ನೀಡಿತ್ತು. ಇದರಿಂದ ಸರ್ಕಾರಕ್ಕೆ ಪ್ರತಿವರ್ಷ 1000 ಕೋಟಿ ನಷ್ಟವಾಗಿದೆ" ಎಂದು ತಿಳಿಸಿದರು.

**ಬೆಂಗಳೂರಿನ ಬಡಾವಣೆಗಳ ನಿರ್ಮಾಣಕ್ಕೆ ಎಲ್ಲ ಸರ್ಕಾರಗಳಿಂದ ಕೊಡುಗೆ**

"ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬಿಡದಿ ಕೈಗಾರಿಕಾ ಟೌನ್ ಮಾಡಲು ಮಾಜಿ ಮುಖ್ಯಮಂತ್ರಿ ದೇವೇಗೌಡರು ಹೊರಟರು. ಆಗ ರೈತರ ಬಳಿ ಚರ್ಚಿಸಿ 5-6 ಲಕ್ಷ ರೂ. ಗಳಂತೆ ಪ್ರತಿ ಎಕರೆಯಂತೆ ಜಮೀನು ಪಡೆಯಲಾಗಿತ್ತು. ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿಯವರು ಬಿಡದಿಯಲ್ಲಿಯೇ ಟೌನ್‌ಶಿಪ್ ಮಾಡಲು ಅಧಿಸೂಚನೆ ಹೊರಡಿಸಿದ್ದ ಸ್ಥಳದಲ್ಲಿಯೇ ಜಪಾನ್ ಟೌನ್‌ಶಿಪ್ ಮಾಡಲು ಮುಂದಾದ ಸಂದರ್ಭದಲ್ಲಿ ವಿರೋಧ ವ್ಯಕ್ತವಾದ ಕಾರಣಕ್ಕೆ ಅದನ್ನು ಕೈಬಿಡಲಾಯಿತು" ಎಂದರು.

"ಅರ್ಕಾವತಿ, ಕೆಂಪೇಗೌಡ ಬಡಾವಣೆ, ಶಿವರಾಮ ಕಾರಂತ ಬಡಾವಣೆ ಇವೆಲ್ಲ ಈಗ ಆಗಿದೆ. ಬೆಂಗಳೂರು ಸುತ್ತಮುತ್ತ ಬಡಾವಣೆಗಳು ನಿರ್ಮಾಣಗೊಳ್ಳಲು ಎಲ್ಲಾ ಸರ್ಕಾರಗಳು ಕೊಡುಗೆ ನೀಡಿವೆ" ಎಂದರು.

**ವಾಲ್ ಆಫ್ ಗ್ರಾಟಿಟ್ಯೂಡ್**

"ಶಿವರಾಮ ಕಾರಂತ ಬಡಾವಣೆಗೆ ಜಮೀನುಕೊಟ್ಟ 3200 ರೈತರ ಹೆಸರುಗಳನ್ನು ವಾಲ್ ಆಫ್ ಗ್ರಾಟಿಟ್ಯೂಡ್ ಮೇಲೆ ಬರೆಸಲಾಗುವುದು ಎಂದರು.

**ಶಿವರಾಮ ಕಾರಂತ ಬಡಾವಣೆ ನಿರ್ಮಾಣಕ್ಕೆ 16 ಸಾವಿರ ಕೋಟಿ ಹೂಡಿಕೆ**

"ಅರ್ಕಾವತಿ, ಕೆಂಪೇಗೌಡ ಬಡಾವಣೆಗಳ ವಿಚಾರದಲ್ಲಿ ತಕರಾರು ನಡೆಯಿತು. ಡಾ. ಕೆ. ಶಿವರಾಮ ಕಾರಂತ ಬಡಾವಣೆಯ ಪ್ರಕ್ರಿಯೆಯೂ ಹಲವು ವರ್ಷಗಳ ಕಾನೂನು ಮತ್ತು ಆಡಳಿತಾತ್ಮಕ ಸಮಸ್ಯೆಗಳನ್ನು ಒಳಗೊಂಡಿತ್ತು. ಬಡಾವಣೆ ನಿರ್ಮಾಣಕ್ಕೆ 16 ಸಾವಿರ ಕೋಟಿ ಹೂಡಿಕೆಯಾಗಿದೆ. ಭೂಸ್ವಾಧೀನಕ್ಕೆ ಸಂಬಂಧಿಸಿದ ವಿಚಾರಗಳು ಕರ್ನಾಟಕ ಹೈಕೋರ್ಟ್ ಏಕಸದಸ್ಯ ಪೀಠ ಹಾಗೂ ವಿಭಾಗೀಯ ಪೀಠದ ಹಂತಗಳನ್ನು ದಾಟಿ ಸುಪ್ರೀಂ ಕೋರ್ಟ್ ವರೆಗೂ ಸಾಗಿದ್ದವು. ನ್ಯಾಯಾಲಯಗಳ ನಿರ್ದೇಶನಗಳು ಹಾಗೂ ಸರ್ಕಾರದ ಆದೇಶಗಳ ಹಿನ್ನೆಲೆಯಲ್ಲಿ ಬಿಡಿಎ ಭೂಸ್ವಾಧೀನ ಮತ್ತು ಬಡಾವಣೆಯ ಅಭಿವೃದ್ಧಿ ಪ್ರಕ್ರಿಯೆಯನ್ನು ಮುಂದುವರಿಸಿದೆ" ಎಂದರು.

"ಖಾಸಗಿಯವರಿಗೆ 55% ನಿವೇಶನ ನೀಡಲು ಸಾಧ್ಯವಾಗುತ್ತದೆ. ಆದರೆ ನಾವು ಅತ್ಯುತ್ತಮ ರಸ್ತೆಗಳು, ಸಾರ್ವಜನಿಕ ಸೌಲಭ್ಯ ಕಲ್ಪಿಸಿದ್ದು, 42% ಮಾತ್ರ ನಿವೇಶನಗಳನ್ನು ನೀಡಲು ಸಾಧ್ಯವಾಗಿದೆ. ಎಕರೆಗೆ ಶೇ. 40% ಕೊಡಲು ಭೂ ಮಾಲೀಕರಿಗೆ ನಿವೇಶನ ಕೊಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

**ಎಲ್ಲರನ್ನು ಆಕರ್ಷಿಸುತ್ತಿರುವ ಬೆಂಗಳೂರು**

"ಕೆಂಪೇಗೌಡರು ಕಟ್ಟಿದ ಬೆಂಗಳೂರಿನಲ್ಲಿ ಮಲ್ಲೇಶ್ವರ, ಚಾಮರಾಜಪೇಟೆ, ಜಯನಗರ, ಇಂದಿರಾನಗರದ ಸ್ವಲ್ಪ ಭಾಗ ಬಿಟ್ಟರೆ ಬೇರೆ ಪ್ರದೇಶಗಳು ಯೋಜಿತ ಬಡಾವಣೆಗಳಲ್ಲ. ಎಲ್ಲಿಯೂ ನೂರು ಅಡಿ ರಸ್ತೆಗಳಿಲ್ಲ. ಕೆಂಗಲ್ ಹನುಮಂತಯ್ಯನವರು ಮುಖ್ಯಮಂತ್ರಿಗಳಾಗಿದ್ದಾಗ 8 ಲಕ್ಷ ಇದ್ದ ಬೆಂಗಳೂರು ಜನಸಂಖ್ಯೆ ಈಗ ಒಂದೂವರೆ ಕೋಟಿ ಆಗಿದೆ. 60 ಲಕ್ಷ ಜನ ನಿತ್ಯ ಬೆಂಗಳೂರಿಗೆ ಓಡಾಡುತ್ತಾರೆ. ಬೆಂಗಳೂರು ಸುತ್ತಮುತ್ತಲ ಜಿಲ್ಲೆಗಳಾದ ಕೋಲಾರ, ರಾಮನಗರ, ಚನ್ನಪಟ್ಟಣ, ತುಮಕೂರು, ಮಾಗಡಿ, ಕುಣಿಗಲ್, ಮದ್ದೂರು, ಮಂಡ್ಯ ಕ್ಷೇತ್ರದಿಂದ 30-50 ಸಾವಿರ ಜನ ಬೆಂಗಳೂರು ಸೇರಿದ್ದಾರೆ. ಈಶಾನ್ಯ ರಾಜ್ಯಗಳಿಂದ 11 ಲಕ್ಷ ಜನ ಉದ್ಯೋಗ ಅರಸಿ ಬಂದಿದ್ದಾರೆ. 1.40 ಕೋಟಿ ವಾಹನಗಳಿವೆ. ರಸ್ತೆಗಳು ಮಾತ್ರ ಹಾಗೇ ಇದೆ. ಅಕ್ಕಪಕ್ಕದ ಕಟ್ಟಡಗಳನ್ನು ಒಡೆದು ಈ ರಸ್ತೆಗಳನ್ನು ಅಗಲೀಕರಣ ಮಾಡಲು ಸಾಧ್ಯವಿಲ್ಲ" ಎಂದರು.

**ನಿವೇಶನ ಮಾರಿಕೊಳ್ಳಬೇಡಿ; ಸಿಎಂ ಸಲಹೆ**

"ರೈತರು ಅಲೆಯಬಾರದು, ಲಂಚ ಕೊಡಬಾರದು ಎಂಬ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತಮ್ಮ ಭೂಮಿಯಲ್ಲಿಯೇ ನಿವೇಶನಗಳನ್ನು ಕೋರಿದವರಿಗೆ ನಿವೇಶನಗಳನ್ನು ಅಲ್ಲಿಯೇ ನೀಡಲಾಗುತ್ತಿದೆ. ಆದರೆ ನಿವೇಶನಗಳನ್ನು ಮಾರಿಕೊಳ್ಳಬೇಡಿ. ಕಷ್ಟ ಎಲ್ಲರಿಗೂ ಬರುತ್ತದೆ. ನಂತರದ ದಿನಗಳಲ್ಲಿ ಈ ನಿವೇಶನಗಳ ಬೆಲೆ ನೀವು ಊಹಿಸಲು ಸಾಧ್ಯವಿಲ್ಲ" ಎಂದು ಕಿವಿಮಾತು ಹೇಳಿದರು.

**ತೇಗದ ಸಿರಿ**

"ಒಂದು ವರ್ಷಕ್ಕೆ ಕನಿಷ್ಠ 1 ಕೋಟಿ ತೇಗದ ಸಸಿ ನೆಡುವ ಕಾರ್ಯಕ್ರಮ ರೂಪಿಸಲಾಗಿದ್ದು, ಸಸಿಯನ್ನು ಸರ್ಕಾರವೇ ನೀಡುತ್ತದೆ. ಗಿಡವನ್ನು ರೈತರೇ ಕಾಪಾಡಿಕೊಳ್ಳಬೇಕು.

25 ವರ್ಷಗಳನ್ನು ಗುರಿಯಾಗಿಟ್ಟುಕೊಂಡು ಈ ಯೋಜನೆ ತರಲಾಗಿದೆ.

ಒಂದು ಚದರ ಅಡಿ ತೇಗದ ಬೆಲೆ 7500 ಆಗಿದೆ. ಇದರಿಂದ ಬರುವ ಲಾಭಾಂಶದಲ್ಲಿ 70% ರೈತರಿಗೆ 30% ಸರ್ಕಾರಕ್ಕೆ ಹಂಚಿಕೆಯಾಗುವುದು" ಎಂದರು.

### ಸಂಚಾರ ದಟ್ಟಣೆ ಕಡಿಮೆ ಮಾಡಲು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ನಿರ್ಮಾಣ

"ಬಡಾವಣೆಯು 3,700 ಎಕರೆಯಲ್ಲಿ ನಿರ್ಮಾಣವಾಗಿದೆ. 3 ಕೋಟಿಯಷ್ಟು ಚದರ ಅಡಿ ನಿವೇಶನವನ್ನು ರೈತರಿಗೆ ಹಂಚಿಕೆ ಮಾಡಲಾಗುತ್ತಿದೆ. 2008ರಿಂದೀಚೆಗೆ ಸಮಯ ವ್ಯರ್ಥವಾಗಿದೆ. ಪ್ರತಿಯೊಂದರ ಬೆಲೆಯೂ ಹೆಚ್ಚಳವಾಗಿದೆ. ಹಾಗಾಗಿ ಮೂಲೆ ನಿವೇಶನಗಳ ಹರಾಜು ಪ್ರಕ್ರಿಯೆ ಸಮಯಾವಕಾಶ ಅಗತ್ಯವಿದೆ. 26,000 ಕೋಟಿ ಸಾಲ ಪಡೆದು ಸಂಚಾರ ದಟ್ಟಣೆ ಕಡಿಮೆ ಮಾಡಲು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ನಿರ್ಮಾಣವಾಗುತ್ತಿದೆ" ಎಂದರು.

"ಬಿಡಿಎಗಾಗಿ ಜಮೀನು ಕಳೆದುಕೊಂಡರೆ ಹಳೆ ದರವೇ ಕೊಡಬೇಕೆಂದಿದೆ. ಆದರೆ ರೈತರಿಗೆ ಅನ್ಯಾಯವಾಗಬಾರದೆಂದು ಇದನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ ಗೈಡೆನ್ಸ್ ವ್ಯಾಲ್ಯೂ ದುಪ್ಪಟ್ಟು ಪರಿಹಾರ, ದುಪ್ಪಟ್ಟು ಟಿಡಿಆರ್, ಇಲ್ಲದಿದ್ದರೆ ಶೇ.35 ರಷ್ಟು ವಾಣಿಜ್ಯ ನಿವೇಶನ, ಎಫ್ಎಆರ್ ಅಥವಾ ಶೇ. 40 ರಷ್ಟು ಅಭಿವೃದ್ಧಿಪಡಿಸಿದ ಭೂಮಿ ನೀಡಲು ಮುಂದಾಗಿದ್ದೇವೆ. ದೇಶದಲ್ಲಿಯೇ ಹೆಚ್ಚು ಪರಿಹಾರ ನೀಡಲಾಗಿದೆ. ಪೆರಿಫೆರಲ್ ರಸ್ತೆಗೆ ಟೆಂಡರ್ ಕರೆದಿದ್ದು, ಕೋಗಿಲು ತನಕ ಕಾಮಗಾರಿ ನಡೆಯುತ್ತಿದೆ. ಶೇ 80ರಷ್ಟು ಭೂ ಸ್ವಾಧೀನಕ್ಕೆ ಒಪ್ಪಿಗೆ ನೀಡಲಾಗಿದೆ. ಈ ರಸ್ತೆ ಪೂರ್ಣವಾದ ಬಳಿಕ ನಿಮ್ಮ ಆಸ್ತಿಯ ಬೆಲೆ ದುಪ್ಪಟ್ಟಾಗಲಿದೆ" ಎಂದರು.

"ದೇವರು ಕೊಟ್ಟು ಹೋಗುವುದು ಅಥವಾ ಬಿಟ್ಟುಹೋಗುವುದು ಎಂಬ ಎರಡು ಆಯ್ಕೆಗಳನ್ನು ಮಾತ್ರ ಕೊಟ್ಟಿದ್ದಾನೆ. ದೇವರು ಕೊಟ್ಟ ಅವಕಾಶವನ್ನು ಪ್ರಾಮಾಣಿಕವಾಗಿ ಬಳಸಿಕೊಳ್ಳಬೇಕು. ಮುಂದೆ ಯಾವುದೇ ಸಮಸ್ಯೆಗಳಿಲ್ಲದೇ ನಿಮ್ಮ ದಾಖಲೆಗಳನ್ನು ಪಡೆಯಬಹುದು. ಇದು ಉತ್ತಮ ಬಡಾವಣೆ, ಮುಂದಕ್ಕೆ ಇಂತಹ ಬಡಾವಣೆ ನಿರ್ಮಾಣ ಸಾಧ್ಯವಿಲ್ಲ" ಎಂದರು.

### ರೈತರ ಮಕ್ಕಳು ಎಂದು ಹೇಳಿಕೊಳ್ಳುವವರ ಕಾಲದಲ್ಲಿಯೇ ಅಧಿಸೂಚನೆ

"ನಾನು ಬರುವ ಮೊದಲು ಬಿಡಿಎ ಎಂದರೆ ಬ್ರೋಕರ್ ಅಭಿವೃದ್ಧಿ ಪ್ರಾಧಿಕಾರವಾಗಿತ್ತು. 2008 ರಲ್ಲಿಯೇ ಶಿವರಾಮ ಕಾರಂತ ಬಡಾವಣೆಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದರು. ತಮ್ಮ ಭೂಮಿ ಕಳೆದುಕೊಳ್ಳುವಾಗ ರೈತರು ಲಂಚ ಕೊಡಬೇಕಾದ ಪರಿಸ್ಥಿತಿ ಇತ್ತು. ಆಗ ರೈತರ ಮಕ್ಕಳು ಎಂದು ಹೇಳಿಕೊಳ್ಳುವವರ ಕಾಲದಲ್ಲಿಯೇ 2008 ರಲ್ಲಿಯೇ ಅಧಿಸೂಚನೆ ಹೊರಡಿಸಿದ್ದು, ಅವರ ಕಾಲದಲ್ಲಿಯೇ ಇದು ನಡೆದದ್ದು. ಈಗ ಮಾತನಾಡಲು ಅವರಿಗೆ ಧಮ್ ಇಲ್ಲವೇ ಬೆಂಗಳೂರಿನ ಸುತ್ತಮುತ್ತ ಅವರ ಜಮೀನುಗಳಿವೆ ಅವುಗಳನ್ನು ಯೋಜನೆಗಳ ಸ್ವಾಧೀನಕ್ಕೆ ಕೊಟ್ಟಿದ್ದಾರೆಯೇ? ಅವರ ಜಮೀನನ್ನು ಮಾತ್ರ ಬಿಡಿಸಿಕೊಂಡರು. ಅವರದ್ದು ಎಷ್ಟು ಎಕರೆ ಇದೆ ಎಂಬುದು ನನಗೆ ಅರಿವಿದೆ" ಎಂದು ಮುಖ್ಯಮಂತ್ರಿ ಪರೋಕ್ಷವಾಗಿ ಕುಟುಕಿದರು.

# ಸಿಎಂ, ಡಿಸಿಎಂ ಪ್ರತ್ಯೇಕ ಬರ ಪ್ರವಾಸ, ಪರಿಸ್ಥಿತಿ ಪರಾಮರ್ಶೆಗೆ ಸಿದ್ಧತೆ

ಬೆಂಗಳೂರು. ಆ.31: ಕರ್ನಾಟಕದಲ್ಲಿ ಬರದ ಪರಿಸ್ಥಿತಿ ತೀವ್ರಗೊಂಡ ನಡುವೆಯೇ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಪ್ರತ್ಯೇಕ ಜಿಲ್ಲಾ ಪ್ರವಾಸ ಆರಂಭಿಸಲಿದ್ದಾರೆ. ಸೆ.1ರ ಮಂಗಳವಾರದಿಂದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರು ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ಬೆಳಗ್ಗೆ 10ಕ್ಕೆ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ಹೊರಟು ಹುಬ್ಬಳ್ಳಿಗೆ ತಲುಪುವರು, ಅಲ್ಲಿಂದ ಹೆಲಿಕಾಪ್ಟರ್ ಮೂಲಕ ಗದಗಕ್ಕೆ ತೆರಳುವರು. ಬೆಳಿಗ್ಗೆ 11.30ರಿಂದ ಗದಗ ಜಿಲ್ಲೆ ವಿವಿಧ ಬರಪೀಡಿತ ಪ್ರದೇಶಗಳಿಗೆ ತೆರಳಿ ಅಲ್ಲಿನ ಪರಿಸ್ಥಿತಿಯನ್ನು ಪರಾಮರ್ಶೆ ನಡೆಸಲಿದ್ದಾರೆ. ಇದಾದ ಬಳಿಕ ಗದಗಕ್ಕೆ ಮರಳಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಬರಪರಿಸ್ಥಿತಿ ಕುರಿತು ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದುಕೊಳ್ಳಲಿದ್ಧಾರೆ. ಐದು ಗಂಟೆಗಳ ಕಾಲ ಗದಗ ಜಿಲ್ಲೆಯಲ್ಲಿ ಮುಖ್ಯಮಂತ್ರಿ ಇರಲಿದ್ದಾರೆ. ಸಂಜೆ 4.30ಕ್ಕೆ ಹೆಲಿಕಾಪ್ಟರ್ ನಿಂದ ಹೊರಟು ಹುಬ್ಬಳ್ಳಿಗೆ ಮರಳುವರು.

ಅಲ್ಲಿಂದ ವಿಶೇಷ ವಿಮಾನದಲ್ಲಿ ಬೆಂಗಳೂರಿಗೆ ಮರಳುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಉಪಮುಖ್ಯ ಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ ಅವರು ಸೆ.1 ಹಾಗೂ 2ರಂದು ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಮಂಗಳವಾರ ಬೆಳಗ್ಗೆ 10ರಿಂದ ಮೈಸೂರು ಜಿಲ್ಲೆ ಕೃಷ್ಣರಾಜನಗರ, ಹುಣಸೂರು ಹಾಗೂ ತಿ.ನರಸೀಪುರ ತಾಲ್ಲೂಕುಗಳ ಬರಪೀಡಿತ ಸ್ಥಳಗಳ ಪರಿಶೀಲನೆ ನಡೆಸುವರು. ಸಂಜೆ 5ರಿಂದ ಮೈಸೂರು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬರ ಕುರಿತು ಅಧಿಕಾರಿಗಳ ಸಭೆಯನ್ನು ನಡೆಸಲಿದ್ದಾರೆ.

ಬುಧವಾರದಂದು ಬೆಳಗ್ಗೆ 10ರಿಂದ ಗುಂಡ್ಲುಪೇಟೆ, ಚಾಮರಾಜನಗರ, ಯಳಂದೂರು ಹಾಗೂ ಹನೂರು ತಾಲ್ಲೂಕನ ಬರ ಪರಿಸ್ಥಿತಿ ಪರಾಮರ್ಶೆ ಮಾಡುವರು. ಮಧ್ಯಾಹ್ನ 4.30ರಿಂದ ಹನೂರಿನ ಅಂಬೇಡ್ಕರ್ ಭವನದಲ್ಲಿ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸುವರು ಎಂದು ಪ್ರಕಟಣೆ ತಿಳಿಸಿದೆ.

# ನೇಮಕಾತಿ ಹಗರಣಕ್ಕೆ ಭಾರಿ ತಿರುವು ಬೀದರ್ ಬಿಜೆಪಿ ಮುಖಂಡನ ಬಂಧನ



ಬೆಂಗಳೂರು. ಆ.31: ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿನ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ತನಿಖೆ ಚುರುಕುಗೊಂಡಿದೆ. ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಬಂಧನದ ಬೆನ್ನಲ್ಲೇ, ಪ್ರಕರಣದ ಮತ್ತೊಬ್ಬ ಪ್ರಮುಖ ಆರೋಪಿಯಾಗಿರುವ ಬಸವರಾಜ್ ಕನ್ನಾಳೆಯನ್ನು ಸಿಐಡಿ ಅಧಿಕಾರಿಗಳು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಡೋಣಗಾಪುರ ಗ್ರಾಮದ ನಿವಾಸಿಯಾಗಿರುವ ಬಸವರಾಜ್ ಕನ್ನಾಳೆ, ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿದ್ದು, ಬಿಜೆಪಿ ಮುಖಂಡ. ಬಂಧನದ ಬಳಿಕ ಕನ್ನಾಳೆ ಅವರ ಭಾಲ್ಕಿ ತಾಲೂಕಿನ ಡೋಣಗಾಪುರ ಗ್ರಾಮದಲ್ಲಿರುವ ಮನೆ ಹಾಗೂ ಭಾಲ್ಕಿ ನಗರದ ಲೆಕ್ಚರರ್ ಕಾಲನಿಯಲ್ಲಿರುವ ಮತ್ತೊಂದು ನಿವಾಸದಲ್ಲಿ ಸಿಐಡಿ ಅಧಿಕಾರಿಗಳು ಶೋಧ ನಡೆಸಿದ್ದಾರೆ ಎನ್ನಲಾಗಿದೆ. ಸೋರಿಕೆಯಾದ ಪ್ರಶ್ನೆಪತ್ರಿಕೆಗಳನ್ನು ಮಧ್ಯವರ್ತಿಯಾಗಿದ್ದ ಬಸವರಾಜ್ ಕನ್ನಾಳೆ ಅಭ್ಯರ್ಥಿಗಳಿಗೆ ಮಾರಾಟ ಮಾಡಿದ್ದರು ಎನ್ನಲಾಗಿದ್ದು, ಪ್ರತಿ ಅಭ್ಯರ್ಥಿಯಿಂದ 40 ಲಕ್ಷ ರೂಪಾಯಿ ಪಡೆಯಲಾಗಿತ್ತು ಎಂಬ ಆರೋಪವಿದೆ.

ಇದಲ್ಲದೇ ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯಗಳನ್ನು ನಾಶಪಡಿಸಲು ಓಎಂಆರ್ ಶೀಟ್‌ಗಳಲ್ಲಿ ತಿದ್ದುಪಡಿ ಮಾಡಿರುವುದು ಹಾಗೂ ಸ್ಟ್ರಾಂಗ್ ರೂಮ್ನ ಸಿಸಿಟಿವಿ ದೃಶ್ಯಾವಳಿಗಳನ್ನು ಅಳಿಸಲು ಪ್ರಯತ್ನಿಸಿರುವ ಆರೋಪ ಕೂಡ ಕೇಳಿ ಬಂದಿದೆ. ಸದ್ಯ ಇಬ್ಬರು ಆರೋಪಿಗಳನ್ನು ಸಿಐಡಿ ಅಧಿಕಾರಿಗಳ ಕಸ್ಟಡಿಗೆ ನೀಡಲಾಗಿದ್ದು, ವಿಚಾರಣೆ ಮುಂದುವರಿದಿದೆ.

### ಬಿಜೆಪಿ ಇರಬಾರದು ಎಂದು ಕುಮಾರಸ್ವಾಮಿ ಹೋರಾಟ ಮಾಡುತ್ತಿದ್ದಾರೆ: ಸಿಎಂ ಡಿ.ಕೆ.ಶಿವಕುಮಾರ್



ಕೆಪಿಎಸ್ ಸಿ ಹಗರಣದಲ್ಲಿ ಸರ್ಕಾರ ಭಾಗಿಯಾಗಿದೆ ಎಂದು ಕುಮಾರಸ್ವಾಮಿ ಹೇಳಿದ್ದು, ಮತ್ತೊಂದೆಡೆ ಅವರ ಮೈತ್ರಿ ನಾಯಕರೇ ಬಂಧನವಾಗುತ್ತಿದ್ದಾರೆ ಎಂದು ಕೇಳಿದಾಗ, "ಕುಮಾರಸ್ವಾಮಿ ಅವರು ನಮ್ಮ ವಿರುದ್ಧ ಹೋರಾಟ ಮಾಡುತ್ತಿಲ್ಲ. ಬಿಜೆಪಿ ವಿರುದ್ಧ ಹೋರಾಟ ಮಾಡುತ್ತಿದ್ದಾರೆ. ಕೆಪಿಎಸ್ ಸಿ ಹಗರಣದಲ್ಲಿ ಬಿಜೆಪಿ ನಾಯಕರ ಬಂಧನ ಬಗ್ಗೆ ಕೇಳಿದಾಗ, "ನಾನು ತನಿಖೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಮಾಹಿತಿ ಪಡೆಯುತ್ತೇನೆ. ಬಿಜೆಪಿಯಲ್ಲಿ ಆಂತರಿಕ ಕಲಹ ನಡೆಯುತ್ತಿದೆ. ಕೆಪಿಎಸ್ ಸಿಗೆ ನೇಮಕ ಮಾಡಿದವರು ಯಾರು? ಸಂಪೂರ್ಣ ವರದಿ ಬರುವವರೆಗೂ ನಾನು ಸಂಪೂರ್ಣ ಮಾಹಿತಿ ಬಹಿರಂಗಪಡಿಸಲು ಸಾಧ್ಯವಿಲ್ಲ.ಯಾರು ಏನೇನು ಮಾತನಾಡುತ್ತಾರೋ ಮಾತಾಡಲಿ. ಅವರಿಗೆ ಕಾಲವೇ ಉತ್ತರಿಸುತ್ತದೆ" ಎಂದು ತಿಳಿಸಿದರು.

# ಅಂತಾರಾಷ್ಟ್ರೀಯ ಫುಟ್‌ಬಾಲ್‌ಗೆ ಮೆಸ್ಸಿ ವಿದಾಯ



ಬ್ಯೂನಸ್ ಐರಿಸ್, ಆ.31: ಎರಡು ದಶಕಗಳಿಗೂ ಹೆಚ್ಚು ಕಾಲ ಅರ್ಜೆಂಟಿನಾ ಫುಟ್ಬಾಲ್ ತಂಡದ ನೀಲಿ-ಬಿಳಿ ಜೆರ್ಸಿಯಲ್ಲಿ ಮಿಂಚಿದ್ದ ದಿಗ್ಗಜ ಆಟಗಾರ' ಲಿಯೋನೆಲ್ ಮೆಸ್ಸಿ ಅಂತರರಾಷ್ಟ್ರೀಯ ಫುಟ್ಬಾಲ್‌ಗೆ ವಿದಾಯ ಘೋಷಿಸಿದ್ದಾರೆ. ಅರ್ಜೆಂಟಿನಾ ತಂಡದ ಪರ ಇನ್ನು ಮುಂದೆ ಕಣಕ್ಕಿಳಿಯುವುದಿಲ್ಲ ಎಂದು ಮೆಸ್ಸಿ ಸೋಮವಾರ ಇನ್‌ಸ್ಟಾಗ್ರಾಂ ಪೋಸ್ಟ್ ಮೂಲಕ ಖಚಿತಪಡಿಸಿದ್ದಾರೆ.

ಅರ್ಜೆಂಟಿನಾ ತಂಡದೊಂದಿಗಿನ ತಮ್ಮ ಪಯಣದ ಅಂತ್ಯಕ್ಕೆ ತಂದೆಯ ನಿಧನ ಕೂಡ ಪ್ರಮುಖ ಕಾರಣವಾಗಿದೆ ಎಂದು ಮೆಸ್ಸಿ ಬಹಿರಂಗಪಡಿಸಿದ್ದಾರೆ. ಈ ತಿಂಗಳ ಆರಂಭದಲ್ಲೇ ಮೆಸ್ಸಿ ಅವರ ತಂದೆ ನಿಧನರಾಗಿದ್ದರು. ಅವರ ಸಾವಿನ ಬಳಿಕವೇ ಫುಟ್ಬಾಲ್‌ನಿಂದ ದೂರ ಸರಿಯುವ ಬಗ್ಗೆ ಮೆಸ್ಸಿ ಚಿಂತಿಸಿದ್ದರು.

ಸ್ಪೇನ್ ವಿರುದ್ಧದ ವಿಶ್ವಕಪ್ ಫೈನಲ್‌ನಲ್ಲಿ ಅರ್ಜೆಂಟಿನಾ ಸೋಲು ಅನುಭವಿಸಿದ ಕೇವಲ ಎರಡು ದಿನಗಳ ಬಳಿಕವೇ ಅಂತರರಾಷ್ಟ್ರೀಯ ಫುಟ್ಬಾಲ್‌ನಿಂದ ನಿವೃತ್ತಿಯಾಗುವ ನಿರ್ಧಾರ ಕೈಗೊಂಡಿದ್ದಾಗಿ ಮೆಸ್ಸಿ ತಿಳಿಸಿದ್ದಾರೆ. ಜುಲೈ 21ರಂದೇ ತಮ್ಮ ನಿವೃತ್ತಿ ಕುರಿತ ಬರಹವನ್ನು ಸಿದ್ಧಪಡಿಸಿದ್ದಾಗಿ ಅವರು ಹೇಳಿದ್ದಾರೆ.

ನಿರ್ಧಾರ ಸುಲಭವಲ್ಲ, ನೋವುಂಟು ಮಾಡುತ್ತಿದೆ

ಅರ್ಜೆಂಟಿನಾ ಪರ ಆಡುವುದನ್ನು ತಾನು ಸದಾ ಆನಂದಿಸಿದ್ದರೂ, ತಂಡದಿಂದ ಹಿಂದೆ ಸರಿಯುವ ನಿರ್ಧಾರ ಸುಲಭವಾಗಿರಲಿಲ್ಲ ಎಂದು ಮೆಸ್ಸಿ ಹೇಳಿದ್ದಾರೆ. ?ಅರ್ಜೆಂಟಿನಾ ಪರ ಆಡುವುದನ್ನು ನಿಲ್ಲಿಸುವ ನಿರ್ಧಾರ ನನಗೆ ಸುಲಭವಲ್ಲ. ಈ ನಿರ್ಧಾರ ನನಗೆ ಸಾಕಷ್ಟು ನೋವುಂಟು ಮಾಡುತ್ತಿದೆ ಎಂದು ಅವರು ತಿಳಿಸಿದ್ದಾರೆ.

ತಂಡಕ್ಕೆ ಇನ್ನು ತನ್ನಿಂದ ನೀಡಲು ಏನೂ ಉಳಿದಿಲ್ಲ ಎಂಬ ಭಾವನೆ ಮೂಡಿದೆ. ಹೀಗಾಗಿ ಯುವ ಪ್ರತಿಭೆಗಳಿಗೆ ಅವಕಾಶ ಮಾಡಿಕೊಟ್ಟು ತಾನು ಹಿಂದೆ ಸರಿಯುವ ಸಮಯ ಬಂದಿದೆ ಎಂದು ಮೆಸ್ಸಿ ಹೇಳಿದ್ದಾರೆ.

# ಭಾರತ-ಕಿರ್ಗಿಝಿಸ್ತಾನ್ ಆಯಕಟ್ಟಿನ ಭಾಗಸ್ವಾಮ್ಯ, ಆರ್ಥಿಕ ಬಾಂಧವ್ಯ ಬಲಪಡಿಸಲು ಪ್ರಧಾನಿ ಮೋದಿ-ಅಧ್ಯಕ್ಷ ಜಾಪರೋವ್ ನಿರ್ಧಾರ



ನವದೆಹಲಿ, ಆ.31: ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಹಾಗೂ ಸರಣಿ ದ್ವಿಪಕ್ಷೀಯ ಚರ್ಚೆಗಳನ್ನು ನಡೆಸಲು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸೋಮವಾರ-ಮಂಗಳವಾರ ಕಿರ್ಗಿಝಿಸ್ತಾನ್‌ಗೆ ಎರಡು ದಿನಗಳ ಭೇಟಿ ನೀಡಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕಿರ್ಗಿಝ್ ಗಣರಾಜ್ಯದ ಅಧ್ಯಕ್ಷ ಸದಿರ್ ಜಾಪರೋವ್ ಅವರು ಸೋಮವಾರ ಭಾರತ ಮತ್ತು ಕಿರ್ಗಿಝಿಸ್ತಾನ್ ನಡುವಿನ ಸುದೀರ್ಘ ಆಯಕಟ್ಟಿನ ಭಾಗಸ್ವಾಮ್ಯವನ್ನು ಮತ್ತಷ್ಟು ಆಳವಾಗಿಸಲು ನಿರ್ಧರಿಸಿದ್ದಾರೆ. ಆರ್ಥಿಕ ಮತ್ತು ವಾಣಿಜ್ಯ ಸಹಕಾರ ವಿಸ್ತರಣೆ, ಜನರ ನಡುವಿನ ಬಾಂಧವ್ಯ ಬಲಪಡಿಸುವಿಕೆ ಹಾಗೂ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ವಿನಿಮಯವನ್ನು ಉತ್ತೇಜಿಸುವ ಕುರಿತು ಉಭಯ ನಾಯಕರು ವಿಶೇಷ ಗಮನಹರಿಸಿದ್ದಾರೆ.

ಬಿಷ್ಕೆಕ್‌ನಲ್ಲಿ ನಡೆಯುತ್ತಿರುವ 26ನೇ ಶಾಂಘೈ ಸಹಕಾರ ಸಂಸ್ಥೆಯ (ಎಸ್‌ಸಿಒ) ಶೃಂಗಸಭೆಯ ಹೊರತಾಗಿ ನಡೆದ ಈ ದ್ವಿಪಕ್ಷೀಯ ಸಭೆಯಲ್ಲಿ ಉಭಯ ನಾಯಕರು ಭಾರತ-ಕಿರ್ಗಿಝಿಸ್ತಾನ್ ಸಂಬಂಧಗಳ ಸಂಪೂರ್ಣ ಸ್ಥಿತಿಗತಿಗಳ ಪರಿಶೀಲನೆ ನಡೆಸಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಈ ದ್ವಿಪಕ್ಷೀಯ ಸಭೆಯಲ್ಲಿ ಭಾಗವಹಿಸಿದ್ದ ಭಾರತೀಯ ನಿಯೋಗದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ (ಪಶ್ಚಿಮ) ಸಿಬಿ ಜಾರ್ಜ್ ಉಪಸ್ಥಿತರಿದ್ದರು. 2025-26ರ ಅವಧಿಗೆ ಕಿರ್ಗಿಝಿಸ್ತಾನ್ ಶಾಂಘೈ ಸಹಕಾರ ಸಂಸ್ಥೆಯ ಅಧ್ಯಕ್ಷತೆಯನ್ನು ವಹಿಸಿ ಶೃಂಗ ಸಭೆಯನ್ನು ಆಯೋಜಿಸುತ್ತಿರುವುದರಿಂದ ಈ ಮಾತುಕತೆಗಳು ಪ್ರಮುಖ ಪ್ರಾಮುಖ್ಯ ಪಡೆದುಕೊಂಡಿವೆ. ಎಸ್‌ಸಿಒ ಸಂಸ್ಥೆಯ ಯಶಸ್ವಿ ಅಧ್ಯಕ್ಷತೆ ಮತ್ತು ಬಿಷ್ಕೆಕ್‌ನಲ್ಲಿ ಶೃಂಗಸಭೆಯನ್ನು ಯಶಸ್ವಿಯಾಗಿ ಆಯೋಜಿಸಿದ್ದಕ್ಕಾಗಿ ಪ್ರಧಾನಿ ಮೋದಿ ಅವರು ಅಧ್ಯಕ್ಷ ಜಾಪರೋವ್ ಅವರಿಗೆ ಅಭಿನಂದನೆ ಸಲ್ಲಿಸಿದರು.

ಭಾರತ ಮತ್ತು ಕಿರ್ಗಿಝಿಸ್ತಾನ್ ನಡುವಿನ ಬಾಂಧವ್ಯದಲ್ಲಿ ಆರ್ಥಿಕ ಸಹಕಾರವು ಪ್ರಮುಖ ಘಟಕವಾಗಿ ಹೊರಹೊಮ್ಮುತ್ತಿದ್ದು, ಉಭಯ ದೇಶಗಳು ವ್ಯಾಪಾರ, ಹೂಡಿಕೆ ಮತ್ತು ಉದ್ಯಮಿಗಳ ನಡುವಿನ ನೇರ ಸಂವಹನವನ್ನು (B2B) ಹೆಚ್ಚಿಸಲು ಹೊಸ ಮಾರ್ಗಗಳನ್ನು ಕಂಡುಕೊಳ್ಳುತ್ತಿವೆ. ಕಿರ್ಗಿಝ್ ಗಣರಾಜ್ಯದ ಅಧ್ಯಕ್ಷತೆಯಲ್ಲಿ ನಡೆದ ವಿವಿಧ ಎಸ್‌ಸಿಒ ಸಭೆಗಳಲ್ಲಿ ಭಾರತದ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉಲ್ಲೇಖಿಸಿದ ಪ್ರಧಾನಿ ಮೋದಿ, ಇದು ಉಭಯ ದೇಶಗಳ ನಡುವಿನ ನಿಕಟ ಹಾಗೂ ಸುದೀರ್ಘ ಬಾಂಧವ್ಯವನ್ನು ವ್ಯಾಖ್ಯಾನಿಸುವ "ಪರಸ್ಪರ ಗೌರವ, ನಂಬಿಕೆ ಮತ್ತು ಬೆಂಬಲವನ್ನು" ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

### ಪ್ರತಿಭಟನಾ ಮೆರವಣಿಗೆಯಿಂದ ಅಹಿತಕರ ಘಟನೆ ಬಗ್ಗೆ ಊಹಿಸಲು ಸಾಧ್ಯವಿಲ್ಲ

# ಸೆ.5ರ ಸಿಜೆಪಿ ಹೋರಾಟಕ್ಕೆ ತಡೆ ಇಲ್ಲ: ಸುಪ್ರೀಂ ಕೋರ್ಟ್




ನವದೆಹಲಿ, ಆ.31: ಸೆಪ್ಟೆಂಬರ್ 5ರಂದು ದೆಹಲಿಯಲ್ಲಿ ನಡೆಯಲಿರುವ ಕಾಕ್ರೋಚ್ ಜನತಾ ಪಾರ್ಟಿಯ ಪ್ರತಿಭಟನಾ ಮೆರವಣಿಗೆಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಮೂರ್ತಿಗಳಾದ ಜಾಯ್‌ಮಾಲ್ಯ ಬಾಗ್ಚಿ ಹಾಗೂ ವಿ. ಮೊಹನಾ ಅವರನ್ನೊಳಗೊಂಡ ಪೀಠವು ಅರ್ಜಿಯ ವಿಚಾರಣೆ ನಡೆಸಿತು. ಸೆ.5ರ ಮೆರವಣಿಗೆಯಿಂದ ಯಾವುದೇ ಅಹಿತಕರ ಘಟನೆ ಸಂಭವಿಸಲಿದೆ ಎಂದು ಊಹಿಸಲು ಸದ್ಯ ಯಾವುದೇ ಕಾರಣವಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿತು.

ಮೆರವಣಿಗೆಗೆ ನಿರ್ಬಂಧ ವಿಧಿಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿದಾರರಿಗೆ, ಈ ವಿಚಾರದಲ್ಲಿ ನೇರವಾಗಿ ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸುವ ಬದಲು ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸುವಂತೆ ನ್ಯಾಯಾಲಯ ಸೂಚಿಸಿತು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಸರ್ಕಾರ ಹಾಗೂ ಪೊಲೀಸ್ ಅಧಿಕಾರಿಗಳ ಜವಾಬ್ದಾರಿ ಎಂದು ಪೀಠ ಸ್ಪಷ್ಟಪಡಿಸಿದೆ. ಈ ಪ್ರಕರಣವನ್ನು ವಿದ್ಯಾರ್ಥಿಗಳ ವಿರುದ್ಧ ನಡೆದ ಪೊಲೀಸ್ ಹಿಂಸಾಚಾರದ ಆರೋಪಗಳ ತನಿಖೆಗಾಗಿ ಸುಪ್ರೀಂ ಕೋರ್ಟ್ ರಚಿಸಿರುವ ಉನ್ನತ ಮಟ್ಟದ ಸಮಿತಿಯ ಮುಂದೆ ಸಲ್ಲಿಸುವಂತೆಯೂ ನ್ಯಾಯಾಲಯ ಸೂಚಿಸಿದೆ. ಈ ಸಂಬಂಧದ ಇತರ ಬಾಕಿ ಅರ್ಜಿಗಳೊಂದಿಗೆ ಪ್ರಕರಣವನ್ನು ಸೆಪ್ಟೆಂಬರ್ 10ರಂದು ವಿಚಾರಣೆಗೆ ಪಟ್ಟಿ ಮಾಡುವಂತೆ ಪೀಠ ನಿರ್ದೇಶಿಸಿದೆ. ಸಿಜೆಪಿ ಸೆಪ್ಟೆಂಬರ್ 5ರಂದು ದೆಹಲಿಯ ಇಂಡಿಯಾ ಗೇಟ್‌ನಿಂದ ನವದೆಹಲಿ ಪೊಲೀಸ್ ಪ್ರಧಾನ ಕಚೇರಿವರೆಗೆ ಶಾಂತಿಯುತ ಪ್ರತಿಭಟನಾ ಮೆರವಣಿಗೆ ನಡೆಸಲು ಕರೆ ನೀಡಿದೆ. ಜುಲೈ 25ರಂದು ಯುವ ಪ್ರತಿಭಟನಾಕಾರರಿಗೆ ನೀಡಿದ್ದ ಭರವಸೆಗಳನ್ನು ಸರ್ಕಾರ ಈಡೇರಿಸಿಲ್ಲ ಎಂದು ಆರೋಪಿಸಿ ಈ ಮೆರವಣಿಗೆಗೆ ಕರೆ ನೀಡಲಾಗಿದೆ.

ವಿಶೇಷವಾಗಿ ವಿದ್ಯಾರ್ಥಿಗಳು ಹಾಗೂ ಪ್ರತಿಭಟನಾಕಾರರ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ಗಳನ್ನು ಹಿಂಪಡೆಯುವ ವಿಚಾರದಲ್ಲಿ ಸರ್ಕಾರ ವಿಳಂಬ ಮಾಡುತ್ತಿದೆ ಎಂದು ಸಿಜೆಪಿ ಆರೋಪಿಸಿದೆ. ರವಣಿಗೆಯಲ್ಲಿ ವಿದ್ಯಾರ್ಥಿಗಳು, ಯುವ ಸಂಘಟನೆಗಳು ಹಾಗೂ ಯುವಜನರು ಭಾಗವಹಿಸುವ ನಿರೀಕ್ಷೆಯಿದೆ.

# ಬಿಜೆಪಿ ಸಂಸದೀಯ ಮಂಡಳಿಯಿಂದ ಮಾಜಿ ಸಿಎಂ ಯಡಿಯೂರಪ್ಪಗೆ ಕೊಕ್ ಸಾಧ್ಯತೆ



**ಬೆಂಗಳೂರು, ಆ.31:** ಮಹತ್ವದ ಬೆಳವಣಿಗೆಯೊಂದರಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ. ಎಸ್. ಯಡಿಯೂರಪ್ಪ ಅವರನ್ನು ಪಕ್ಷದ ಸಂಸದೀಯ ಮಂಡಳಿಯಿಂದ ಕೈಬಿಡುವ ಸಾಧ್ಯತೆ ಇದೆ ಎನ್ನಲಾಗಿದೆ.

ಯಡಿಯೂರಪ್ಪ ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಬಳಿಕ ಬಿಜೆಪಿಯ ಪರಮೋಚ್ಚ ನಿರ್ಧಾರಕ ಸಂಸ್ಥೆಯಾಗಿರುವ ಸಂಸದೀಯ ಮಂಡಳಿಯಲ್ಲಿ ಅವರಿಗೆ ಸ್ಥಾನ ಕಲ್ಪಿಸಲಾಗಿತ್ತು. ಇದೀಗ ಬದಲಾಗಿರುವ ರಾಜಕೀಯ ಪರಿಸ್ಥಿತಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಅಧಿಕಾರ ವಹಿಸಿಕೊಂಡ ಬಳಿಕ ಪಕ್ಷದ ಸಂಘಟನೆಯಲ್ಲಿ ಹಲವು ಬದಲಾವಣೆ ಕೈಗೊಳ್ಳಲು ಮುಂದಾಗಿದ್ದಾರೆ. ಇದರ ಭಾಗವಾಗಿ ಸಂಸದೀಯ ಮಂಡಳಿಯನ್ನೂ ಪುನರ್ರಚಿಸುವ ಸಾಧ್ಯತೆ ಇದ್ದು, ಈ ವೇಳೆ ಯಡಿಯೂರಪ್ಪ ಅವರನ್ನು ಸಮಿತಿಯಿಂದ ಕೈಬಿಡುವ ಸಾಧ್ಯತೆ ಹೆಚ್ಚಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಈಗಾಗಲೇ ಕರ್ನಾಟಕದ ಮಾ. ನಾಗರಾಜ್ ಅವರಿಗೆ ರಾಷ್ಟ್ರೀಯ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಬಿ.ಎಲ್. ಸಂತೋಷ್ ಅವರು ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿಯಾಗಿದ್ದಾರೆ. ರಾಷ್ಟ್ರಮಟ್ಟದಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಕೆಲ ಹಿರಿಯ ನಾಯಕರಿಗೆ ಸಂಘಟನಾ ಜವಾಬ್ದಾರಿಗಳಿಂದ ವಿಶ್ರಾಂತಿ ನೀಡಲು ಬಿಜೆಪಿ ಚಿಂತನೆ ನಡೆಸಿದೆ ಎನ್ನಲಾಗಿದೆ.

**ಪ್ರಮುಖ ನಿರ್ಧಾರಗಳ ಕೇಂದ್ರ:** 12 ಸದಸ್ಯರ ಬಿಜೆಪಿ ಸಂಸದೀಯ ಮಂಡಳಿ ಲೋಕಸಭೆ ಹಾಗೂ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ಅಭ್ಯರ್ಥಿಗಳ ಆಯ್ಕೆ, ಟಿಕೆಟ್ ಹಂಚಿಕೆ ಸೇರಿದಂತೆ ಪಕ್ಷದ ಪ್ರಮುಖ ರಾಜಕೀಯ ನಿರ್ಧಾರಗಳನ್ನು ಕೈಗೊಳ್ಳುತ್ತದೆ. ಈ ಮಹತ್ವದ ಸಮಿತಿಯಲ್ಲಿ ಯಡಿಯೂರಪ್ಪ ಅವರು ಕರ್ನಾಟಕವನ್ನು ಪ್ರತಿನಿಧಿಸುತ್ತಿದ್ದರು.

ಆದರೆ ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಗೆ ಅನುಗುಣವಾಗಿ ಹೊಸ ಚಿಂತನೆ ಹಾಗೂ ಹೊಸ ನಾಯಕತ್ವಕ್ಕೆ ಅವಕಾಶ ಕಲ್ಪಿಸಲು ಬಿಜೆಪಿ ಹೈಕಮಾಂಡ್ ಮುಂದಾಗಿದೆ ಎನ್ನಲಾಗಿದೆ. ಸಂಘಟನಾತ್ಮಕ ಪುನರ್ವ್ಯವಸ್ಥೆಯ ಭಾಗವಾಗಿ ಸಂಸದೀಯ ಮಂಡಳಿಯಲ್ಲೂ ಬದಲಾವಣೆ ತರಲು ಚಿಂತನೆ ನಡೆದಿದ್ದು, ಯಡಿಯೂರಪ್ಪ ಅವರಿಗೆ ಈ ಕುರಿತು ಈಗಾಗಲೇ ಪರೋಕ್ಷ ಸಂದೇಶ ರವಾನೆಯಾಗಿದೆ ಎಂದು ಪಕ್ಷದ ಮೂಲಗಳು ಹೇಳಿವೆ.

ಸಂಸದೀಯ ಮಂಡಳಿಯಲ್ಲಿ ಕರ್ನಾಟಕದ ಪ್ರಬಲ ನಾಯಕನಾಗಿದ್ದ ಯಡಿಯೂರಪ್ಪ ಅವರನ್ನು ಕೈಬಿಡುವ ಸಾಧ್ಯತೆಯ ಸುದ್ದಿ ರಾಜ್ಯ ಬಿಜೆಪಿಯೊಳಗೆ ಹೊಸ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ರಾಜ್ಯ ರಾಜಕಾರಣದ ಮೇಲೂ ಇದರ ಪರಿಣಾಮ ಬೀರಬಹುದೇ ಎಂಬ ಕುತೂಹಲ ಮೂಡಿದೆ.



ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ ರೇವಣ್ಣ ಸೋಮವಾರ ವಿಧಾನಸೌಧದಲ್ಲಿ ಭೇಟಿಮಾಡಿ ಚರ್ಚೆ ನಡೆಸಿದರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಪಿ.ಟಿ. ಪರಮೇಶ್ವರ ನಾಯ್ಕ್ , ಡಾ. ಪುಷ್ಪಾ ಅಮರನಾಥ್, ದಿನೇಶ್ ಗೂಳಿಗೌಡ, ಪ್ರಜಾಸೇವಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಆರೋಪ ಸಾಬೀತುಪಡಿಸಿದರೆ ರಾಜಕೀಯ ನಿವೃತ್ತಿ ಎಚ್.ಡಿ.ಕೆಗೆ ಸಚಿವ ಪ್ರಿಯಾಂಕ್ ಖರ್ಗೆ ಸವಾಲು



**ಬೆಂಗಳೂರು,ಆ.31:** ಕೆಪಿಎಸ್‌ಸಿ ಹಗರಣದಲ್ಲಿ ನನ್ನ ಪಾತ್ರ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಕಂಡುಬಂದರೆ ನಾನು ರಾಜಕೀಯ ನಿವೃತ್ತಿ ಪಡೆಯಲು ಸಿದ್ಧನಾಗಿದ್ದೇನೆ. ಆದರೆ ಬಿಜೆಪಿ ಅಥವಾ ಜೆಡಿಎಸ್‌ನವರ ಪಾತ್ರವಿದ್ದರೆ ಅವರು ರಾಜಕೀಯ ನಿವೃತ್ತಿ ಪಡೆಯಲು ಸಿದ್ಧರಿದ್ದಾರೆಯೇ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಸವಾಲೆಸೆದಿದ್ದಾರೆ.

ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರು, ಪ್ರಿಯಾಂಕ್ ಖರ್ಗೆ ಅವರು ಈ ಹಿಂದೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದ ಅವಧಿಯಲ್ಲಿ ನಡೆದ ಸಹಾಯಕ ಎಕ್ಸಿಕ್ಯೂಟೀವ್ ಎಂಜಿನಿಯರ್ ಹುದ್ದೆಗಳ ನೇಮಕಾತಿಯಲ್ಲಿ ಓಎಂಆರ್ ಶೀಟ್ ತಿದ್ದುಪಡಿ ಸೇರಿದಂತೆ ಭಾರೀ ಅಕ್ರಮ ನಡೆದಿದೆ ಎಂದು ಆರೋಪಿಸಿದ್ದರು.

ಈ ಬಗ್ಗೆ ಪತ್ರಿಕಾಗೋಷ್ಠಿ ನಡೆಸಿರುವ ಪ್ರಿಯಾಂಕ್ ಖರ್ಗೆ ಅವರು, ಎಚ್‌ಡಿಕೆ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರು ಸರ್ಕಾರದ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಮಾಡಿದ್ದಾರೆ. ದಾಖಲೆ ಇಲ್ಲದೆ, ಪುರಾವೆಗಳೇ ಇಲ್ಲದೆ ಹಿಟ್ ಅಂಡ್ ರನ್ ಮಾಡುವುದು ಅವರಿಗೆ ಅಭ್ಯಾಸವಾಗಿದೆ. ಮಾಜಿ ಮುಖ್ಯಮಂತ್ರಿಯಾಗಿ, ಕೇಂದ್ರ ಸಚಿವರಾಗಿ ಯಾವ ತೂಕದಲ್ಲಿ ಮಾತನಾಡಬೇಕೋ ಹಾಗೆ ಮಾತನಾಡುತ್ತಿಲ್ಲ ಎಂದಿದ್ದಾರೆ.

ಇತ್ತೀಚೆಗೆ ಕುಮಾರಸ್ವಾಮಿ ಅವರು ಆರ್‌ಎಸ್‌ಎಸ್ ಕಚೇರಿಗೆ ಹೋಗಿದ್ದರು ಎಂಬ ಸುದ್ದಿಯಿದೆ. ಅಲ್ಲಿ ಅವರಿಗೆ ಬಹುಶಃ ಗುತ್ತಿಗೆ ನೀಡಿರಬೇಕು. ಇಲ್ಲಿನ ಬಿಜೆಪಿ ಮುಖಂಡರಿಗೆ ಸರ್ಕಾರವನ್ನು ಯಾವುದೇ ವಿಷಯದಲ್ಲಿ ಸಿಕ್ಕಿಹಾಕಿಸಲು ಆಗುತ್ತಿಲ್ಲ. ನಮ್ಮವರೂ ಯಾಕೋ ಆಸಕ್ತಿಯೂ ತೋರಿಸುತ್ತಿಲ್ಲ. ಆದ್ದರಿಂದ ನೀವು ಈ ಕೆಲಸ ಮಾಡಿ ಎಂದು ಗುತ್ತಿಗೆ ನೀಡಿರಬೇಕು. ಆರ್‌ಎಸ್‌ಎಸ್ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಮ್ಮನ್ನು ಅಥವಾ ನನ್ನನ್ನೇ ಗುರಿ ಮಾಡಲು ಗುತ್ತಿಗೆ ನೀಡಿದ್ದಂತಿದೆ ಎಂದು ದೂರಿದ್ದಾರೆ.

ಕೆಪಿಎಸ್‌ಸಿ ಹಗರಣದಲ್ಲಿ ಸಾಕಷ್ಟು ಅಕ್ರಮಗಳು ಆಗಿರುವುದು ಜಗಜ್ಜಾಹೀರು. ಆದರೆ ವಿಶೇಷವಾಗಿ 24 ಎಡಬ್ಲ್ಯು ಅಭ್ಯರ್ಥಿಗಳ ಆಯ್ಕೆಯ ಬಗ್ಗೆ ಎಚ್‌ಡಿಕೆ ಅವರು ಸಾಕಷ್ಟು ಅಪಪ್ರಚಾರ ಮಾಡುತ್ತಿದ್ದಾರೆ. ದೂರು ಇರುವುದು ಓಎಂಆರ್ ಶೀಟ್ ತಿದ್ದಲಾಗಿದೆ ಎಂಬುದು. ಓಎಂಆರ್ ಶೀಟ್‌ಗಳ ಕಸ್ಟಡಿ ಗ್ರಾಮೀಣಾಭಿವೃದ್ಧಿ ಇಲಾಖೆ, ಸಚಿವರು, ನಮ್ಮ ಕಾರ್ಯದರ್ಶಿಗಳ ಹತ್ತಿರ ಇರುತ್ತದೆಯೇ ಒಎಂಆರ್ ಶೀಟ್ ಕೆಪಿಎಸ್ಸಿ ವಶದಲ್ಲಿರುತ್ತದೆ ಎಂಬ ಸಾಮಾನ್ಯ ಪ್ರಜ್ಞೆಯೂ ಜೆಡಿಎಸ್ ನಾಯಕರಿಗೆ ಇಲ್ಲವೇ ಅದಕ್ಕೂ ನಮಗೂ ಏನು ಸಂಬಂಧ ಎಂದು ಪ್ರಶ್ನಿಸಿದ್ದಾರೆ.

ನಮಗೆ ಈ ವಿಚಾರದಲ್ಲಿ ಸಂಶಯ ಬಂದಾಗ ನಮ್ಮ ಕರ್ನಾಟಕ ಪೊಲೀಸರೇ ಆರೋಪಿಗಳನ್ನು ವಶಕ್ಕೆ ಪಡೆದಿರುವುದು. ನಿಮ್ಮ ಸಿಬಿಐ, ಇಡಿ ಅಲ್ಲ. ಹೀಗಿರುವಾಗ ಸುಮ್ಮನೆ ಹಿಟ್ ಅಂಡ್ ರನ್ ಮಾಡುವ ಮುನ್ನ ಆಲೋಚನೆ ಮಾಡಿ. ತನಿಖೆ ಆಳವಾಗುತ್ತಾ ಹೋದಂತೆ ಬಿಜೆಪಿ, ಜೆಡಿಎಸ್‌ನವರು ದಿನ ಪತ್ರಿಕಾಗೋಷ್ಠಿ ನಡೆಸಿ ನಾವಲ್ಲ, ನಾವಲ್ಲ ಎಂದು ಹೇಳಿಕೊಳ್ಳಬಹುದು ಎಂದು ವ್ಯಂಗ್ಯವಾಡಿದ್ದಾರೆ.

ಕೆಪಿಎಸ್‌ಸಿ ಭ್ರಷ್ಟಾಚಾರದಲ್ಲಿ ತುಂಬಿ ತುಳಿಕಿರುವವರೆಲ್ಲರನ್ನೂ ಸದಸ್ಯರನ್ನು ನೇಮಕಾತಿ ಮಾಡಿರುವುದು ಮಾಜಿ ಸಿಎಂ ಯಡಿಯೂರಪ್ಪನವರು. ಯಾಕೆ ಇಂತಹ ಜನರನ್ನು ಆಯ್ಕೆ ಮಾಡಿದ್ದೀರಿ ಎಂದು ಕುಮಾರಸ್ವಾಮಿ ಒಂದು ಬಾರಿಯಾದರೂ ಪ್ರಶ್ನಿಸಿದ್ದಾರೆಯೇ ಅವರ ಬಗ್ಗೆ ನೀವು ಮಾತನಾಡಲೂ ಸಿದ್ದರಿಲ್ಲ ಅಲ್ವ ಎಂದು ಕೇಳಿದ್ದಾರೆ.

# ನಾನು ಯಾವುದೇ ಧರ್ಮವನ್ನು ಕೀಳಾಗಿ ಕಂಡಿಲ್ಲ: ಬಸವಣ್ಣನ ವಚನ ಉಲ್ಲೇಖಿಸಿ ವಿವಾದಕ್ಕೆ ತೆರೆ ಎಳೆದ ಸಚಿವ ಬಸವರಾಜ ರಾಯರೆಡ್ಡಿ



**ಕೊಪ್ಪಳ,ಆ.31:** ಇಸ್ಲಾಂ ಧರ್ಮದ ಕುರಿತು ತಾವು ನೀಡಿದ್ದ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾದ ಬೆನ್ನಲ್ಲೇ ಸಚಿವ ಬಸವರಾಜ ರಾಯರೆಡ್ಡಿ ಅವರು ಈ ಕುರಿತು ಸ್ಪಷ್ಟನೆ ನೀಡಿದ್ದಾರೆ. ಯಲಬುರ್ಗಾ ಪಟ್ಟಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ನಾನು ಯಾವುದೇ ಧರ್ಮವನ್ನು ಕೀಳಾಗಿ ಕಂಡಿಲ್ಲ.ಎಲ್ಲ ಧರ್ಮಗಳಲ್ಲೂ ಉತ್ತಮ ವಿಚಾರಗಳಿವೆ" ಎಂದು ಸ್ಪಷ್ಟಪಡಿಸಿದರು."ಎಲ್ಲ ಧರ್ಮಗಳೂ ಶ್ರೇಷ್ಠವೇ. ಇಸ್ಲಾಂ ಧರ್ಮದಲ್ಲೂ ಒಳ್ಳೆಯ ವಿಚಾರಗಳಿವೆ ಎಂದು ಹೇಳಿದ್ದೇನೆಯೇ ಹೊರತು, ಬೇರೆ ಧರ್ಮಗಳು ಕಡಿಮೆ ಎಂದು ನಾನು ಎಲ್ಲೂ ಹೇಳಿಲ್ಲ" ಎಂದಿದ್ದಾರೆ. ವಿವಾದದ ನಡುವೆ ಬಸವಣ್ಣನ ವಚನವನ್ನು ಉಲ್ಲೇಖಿಸಿದ ರಾಯರೆಡ್ಡಿ, "ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ" ಎಂಬ ಶರಣ ತತ್ವವನ್ನು ಪ್ರಸ್ತಾಪಿಸಿದರು. ಮನುಷ್ಯತ್ವ ಮತ್ತು ಉತ್ತಮ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯ ಎಂಬ ನಿಲುವನ್ನು ಅವರು ವ್ಯಕ್ತಪಡಿಸಿದರು. ತಾವು ಮಠ–ಮಾನ್ಯಗಳಿಗೆ ನಿಯಮಿತವಾಗಿ ಹೋಗುವುದಿಲ್ಲ. ಆದರೆ ತಮ್ಮೊಂದಿಗೆ ಇರುವವರು ಅಥವಾ ಕುಟುಂಬದವರು ಆಹ್ವಾನಿಸಿದಾಗ ಅವರ ಒತ್ತಾಯದ ಮೇರೆಗೆ ಹೋಗುವುದಾಗಿ ಹೇಳಿದ್ದಾರೆ. ಕುಕನೂರಿನಲ್ಲಿ ಮುಸ್ಲಿಂ ಸಮಾಜದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಸಚಿವ ಬಸವರಾಜ ರಾಯರೆಡ್ಡಿ, ಇಸ್ಲಾಂ ಧರ್ಮದ ಕುರಿತು ಮೆಚ್ಚುಗೆಯ ಮಾತುಗಳನ್ನಾಡಿದ್ದರು. ಇಸ್ಲಾಂ ಮಾನವೀಯ ಮೌಲ್ಯಗಳನ್ನು ಒಳಗೊಂಡ ಶ್ರೇಷ್ಠ ಧರ್ಮವಾಗಿದ್ದು, ಕುರಾನ್ ಅಧ್ಯಯನಕ್ಕೂ ತಾವು ಸಿದ್ಧ ಎಂದು ಹೇಳಿದ್ದರು. ಹಜ್ ಯಾತ್ರೆಗೆ ತೆರಳುವ ಆಸೆಯನ್ನೂ ವ್ಯಕ್ತಪಡಿಸಿದ್ದರು. ಇದೀಗ ಪ್ರಪಂಚದ ಪ್ರತಿಯೊಂದು ಧರ್ಮದಲ್ಲಿರುವ ಮಾನವೀಯ ಮೌಲ್ಯ ಹಾಗೂ ಶ್ರೇಷ್ಠ ತತ್ವಗಳನ್ನು ತಾವು ಸದಾ ಗೌರವಿಸುವುದಾಗಿ ತಿಳಿಸುವ ಮೂಲಕ ರಾಯರೆಡ್ಡಿ ಅವರು ವಿವಾದಕ್ಕೆ ತೆರೆ ಎಳೆಯಲು ಯತ್ನಿಸಿದ್ದಾರೆ.

> ಎಲ್ಲಾ ಧರ್ಮಗಳಿಗಿಂತ ಇಸ್ಲಾಂ ಧರ್ಮ ಶ್ರೇಷ್ಠ ಎಂಬ ಹೇಳಿಕೆ ಭಾರೀ ಚರ್ಚೆಗೆ ಗ್ರಾಸವಾದ ಬೆನ್ನಲ್ಲೇ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ಟೆಂಪಲ್ ರನ್ ನಡೆಸಿದ್ದಾರೆ.

# ಗೃಹಜ್ಯೋತಿ ಮರುಪರಿಶೀಲನೆ: ಸೆ.30ರವರೆಗೆ ಗಡುವು ವಿಸ್ತರಿಸಿದ ರಾಜ್ಯ ಸರ್ಕಾರ




**ಬೆಂಗಳೂರು:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಗೃಹಜ್ಯೋತಿ' ಯೋಜನೆಯ ಫಲಾನುಭವಿಗಳ ಮರು ಪರಿಶೀಲನೆಗೆ ಇಂಧನ ಇಲಾಖೆಯು ಇದೀಗ ಮತ್ತೊಂದು ತಿಂಗಳು ಕಾಲಾವಕಾಶ ವಿಸ್ತರಿಸಿದೆ. ಈ ಮೊದಲು ನೀಡಲಾಗಿದ್ದ ಗಡುವು ಇಂದಿಗೆ ಮುಕ್ತಾಯಗೊಳ್ಳಬೇಕಿತ್ತು. ಆದರೆ, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ಸೇರಿದಂತೆ ರಾಜ್ಯದ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಇನ್ನು ಶೇ.30 ರಷ್ಟು ಪರಿಶೀಲನಾ ಕಾರ್ಯ ಬಾಕಿ ಉಳಿದಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಸೆಪ್ಟೆಂಬರ್ 30 ರವರೆಗೆ ಗಡುವನ್ನು ವಿಸ್ತರಿಸಿ ಇಲಾಖೆ ಅಧಿಕೃತ ಆದೇಶ ಹೊರಡಿಸಿದೆ.

ಕಳೆದ ಜುಲೈ 1 ರಿಂದ ರಾಜ್ಯಾದ್ಯಂತ ಗೃಹಜ್ಯೋತಿ ಯೋಜನೆ ದುರುಪಯೋಗ ತಡೆಯಲು ಹಾಗೂ ಅರ್ಹರಿಗೆ ಮಾತ್ರ ಸೌಲಭ್ಯ ತಲುಪಿಸಲು ಈ ಮರು ಪರಿಶೀಲನಾ ಕಾರ್ಯವನ್ನು ಆರಂಭಿಸಲಾಗಿತ್ತು. ನಿಗದಿತ ಸಮಯದೊಳಗೆ ಕಾರ್ಯ ಪೂರ್ಣಗೊಳ್ಳದ ಕಾರಣ, ಬಾಕಿ ಉಳಿದಿರುವ ಶೇ.30ರಷ್ಟು ಗ್ರಾಹಕರ ದಾಖಲೆಗಳು ಮತ್ತು ಸಂಪರ್ಕಗಳ ಪರಿಶೀಲನೆಯನ್ನು ಸೆ.30ರ ಒಳಗೆ ಕಡ್ಡಾಯವಾಗಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ವಿಸ್ತರಣೆಯಿಂದಾಗಿ ಇನ್ನು ಪರಿಶೀಲನೆಗೆ ಒಳಪಡದ ಸಾರ್ವಜನಿಕರಿಗೆ ದೊಡ್ಡ ಸಮಾಧಾನ ಸಿಕ್ಕಂತಾಗಿದೆ.

# ಸಚಿವ ಬಸವರಾಜ ರಾಯರೆಡ್ಡಿಯನ್ನು ಸಂಪುಟದಿಂದ ತಕ್ಷಣ ವಜಾಮಾಡಿ: ಸಿಎಂಗೆ ಅಶೋಕ್ ಒತ್ತಾಯ



**ಬೆಂಗಳೂರು,ಆ.31:** "ಇಸ್ಲಾಂ ಧರ್ಮವೇ ಶ್ರೇಷ್ಠ, ನಾನು ಮಠಕ್ಕೆ ಹೋಗುವುದಿಲ್ಲ" ಎಂಬ ಸಚಿವ ಬಸವರಾಜ ರಾಯರೆಡ್ಡಿ ಅವರ ಹೇಳಿಕೆಗೆ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್ ತೀವ್ರವಾಗಿ ಕಿಡಿಕಾರಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದ ಈ ಧೋರಣೆಯನ್ನು "ಹಿಂದೂಗಳಿಗೆ ಸುನ್ನತ್ ಗ್ಯಾರಂಟಿ" ಎಂದು ಲೇವಡಿ ಮಾಡಿರುವ ಅವರು, ಸಚಿವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸುವಂತೆ ಆಗ್ರಹಿಸಿದ್ದಾರೆ.ಸಚಿವ ರಾಯರೆಡ್ಡಿ ಅವರ ಪ್ರಚೋದನಾಕಾರಿ ಹೇಳಿಕೆಯನ್ನು ಖಂಡಿಸಿ ಆರ್. ಅಶೋಕ್ ಅವರು ತಮ್ಮ 'ಎಕ್ಸ್' ಖಾತೆಯಲ್ಲಿ ಸಾಲು ಸಾಲು ಪ್ರಶ್ನೆಗಳನ್ನು ಎಸೆದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಹಿಂದೂಗಳ ಮತ ಬೇಕಾದಾಗ ದೇವಸ್ಥಾನಗಳಿಗೆ ಅಲೆಯುವ ನಾಟಕ ಆಡುವ ಕಾಂಗ್ರೆಸ್ ನಾಯಕರು, ಅಧಿಕಾರ ಸಿಕ್ಕ ಮೇಲೆ ಸಂಪುಟದ ಸಚಿವರೇ ಹಿಂದೂ ಧರ್ಮವನ್ನು ಅವಹೇಳನ ಮಾಡಿದರೂ ಮೌನವಾಗಿರುವುದು ಏಕೆ ಎಂದು ಅಶೋಕ್ ಪ್ರಶ್ನಿಸಿದ್ದಾರೆ."ಜವಾಬ್ದಾರಿಯುತ ಸಚಿವ ಸ್ಥಾನದಲ್ಲಿದ್ದುಕೊಂಡು ಸನಾತನ ಪರಂಪರೆ, ಮಠ–ಮಾನ್ಯಗಳು ಹಾಗೂ ಕೋಟ್ಯಂತರ ಹಿಂದೂಗಳ ಆರಾಧನೆಯ ಬಗ್ಗೆ ಹಗುರವಾಗಿ ಮಾತನಾಡುವುದು ಅಹಂಕಾರದ ಪರಮಾವಧಿ. ರಾಯರೆಡ್ಡಿ ಹೇಳಿಕೆಗಿಂತ ಸಿಎಂ ಡಿ.ಕೆ. ಶಿವಕುಮಾರ್ ಅವರ ಜಾಣಮೌನವೇ ರಾಜ್ಯದ ಜನರಲ್ಲಿ ಹೆಚ್ಚಿನ ಆಕ್ರೋಶ ತರಿಸಿದೆ. ಓಲೈಕೆ ರಾಜಕಾರಣಕ್ಕಾಗಿ ಸಚಿವರನ್ನು ರಕ್ಷಿಸುತ್ತಿರುವ ಕಾಂಗ್ರೆಸ್‌ನ ಹಿಂದೂ ವಿರೋಧಿ ಮನಸ್ಥಿತಿ ಇದರಿಂದ ಬಯಲಾಗಿದೆ" ಎಂದು ಅವರು ಆಕ್ರೋಶ ಹೊರಹಾಕಿದ್ದಾರೆ.

**ರಾಯರೆಡ್ಡಿ ಕ್ಷಮೆ ಕೇಳಲಿ, ಇಲ್ಲವೇ ಸಂಪುಟದಿಂದ ವಜಾ ಮಾಡಿ:** ಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಇದು ಅಗ್ನಿಪರೀಕ್ಷೆಯ ಸಮಯ ಎಂದಿರುವ ಪ್ರತಿಪಕ್ಷ ನಾಯಕರು, ರಾಜ್ಯ ಸರ್ಕಾರಕ್ಕೆ ಎರಡು ಸ್ಪಷ್ಟ ಷರತ್ತುಗಳನ್ನು ವಿಧಿಸಿದ್ದಾರೆ:ಬಹಿರಂಗ ಕ್ಷಮೆಯಾಚನೆ: ಸಚಿವ ಬಸವರಾಜ ರಾಯರೆಡ್ಡಿ ಅವರು ಕೋಟ್ಯಂತರ ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತಂದಿದ್ದಕ್ಕಾಗಿ ತಕ್ಷಣವೇ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು. ಕ್ಷಮೆ ಕೇಳಲು ಸಿದ್ಧರಿಲ್ಲದಿದ್ದರೆ, ಅವರನ್ನು ತಕ್ಷಣವೇ ಸಚಿವ ಸಂಪುಟದಿಂದ ವಜಾಗೊಳಿಸಬೇಕು.ಹಿಂದೂಗಳ ಮತ ಪಡೆದು ಅಧಿಕಾರಕ್ಕೇರಿ, ಪ್ರತಿದಿನ ಅವರ ಧಾರ್ಮಿಕ ಭಾವನೆಗಳನ್ನು ತುಚ್ಛವಾಗಿ ನಿಂದಿಸುವ ನೀಚ ರಾಜಕಾರಣವನ್ನು ಕರ್ನಾಟಕದ ಜನತೆ ಎಂದಿಗೂ ಸಹಿಸುವುದಿಲ್ಲ. ಸಚಿವರ ಈ ಧಾರ್ಮಿಕ ನಿಂದನೆಯ ಸಂಪೂರ್ಣ ಹೊಣೆಗಾರಿಕೆಯನ್ನು ಮುಖ್ಯಮಂತ್ರಿಗಳೇ ಹೊರಬೇಕಾಗುತ್ತದೆ ಎಂದು ಆರ್. ಅಶೋಕ್ ಎಚ್ಚರಿಸಿದ್ದಾರೆ.

# ಸರ್ಕಾರಿ ಕಟ್ಟಡಗಳ ಸೌರೀಕರಣಕ್ಕೆ ಆದ್ಯತೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ




**ಬೆಂಗಳೂರು, ಆ.31:** ಪ್ರಧಾನಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆಯಡಿ ಸರ್ಕಾರಿ ಕಟ್ಟಡಗಳ ಮೇಲೆ ಸೋಲಾರ್ ರೂಫ್ಟಾಪ್ ಫೋಟೋವೋಲ್ಟಾಯಿಕ್ ವ್ಯವಸ್ಥೆಗಳನ್ನು ಅಳವಡಿಸುವ ಕಾರ್ಯವನ್ನು ರಾಜ್ಯ ಸರ್ಕಾರ ತ್ವರಿತಗೊಳಿಸಲಿದೆ.

ಬೆಸ್ಕಾಂ ಕಾರ್ಪೊರೇಟ್ ಕಚೇರಿಯಲ್ಲಿ ವಿವಿಧ ಸರ್ಕಾರಿ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಪಿಎಂ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆಯಡಿ ಸರ್ಕಾರಿ ಕಟ್ಟಡಗಳ ಸೌರೀಕರಣ, ಪಾವತಿ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿದರು.

ಸರ್ಕಾರಿ ಕಟ್ಟಡಗಳ ಸಮೀಕ್ಷೆ ನಡೆಸಲು ಲೋಕೋಪಯೋಗಿ ಇಲಾಖೆಯನ್ನು ಹಾಗೂ ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಸರ್ಕಾರಿ ಕಟ್ಟಡಗಳ ಮೇಲೆ ಸೋಲಾರ್ ರೂಫ್‌ಟಾಪ್ ಯೋಜನೆ ಅನುಷ್ಠಾನಗೊಳಿಸಲು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವನ್ನು ನೋಡಲ್ ಏಜೆನ್ಸಿಗಳನ್ನಾಗಿ ನೇಮಿಸಲಾಗಿದೆ. ಸೌರಫಲಕ ಅಳವಡಿಸಲು ಅನುಕೂಲಕರವಾದ ಮೇಲ್ಛಾವಣಿ ಸ್ಥಳಾವಕಾಶ ಹೊಂದಿರುವ ಜಿಲ್ಲಾಧಿಕಾರಿಗಳ ಕಚೇರಿಗಳು ಸೇರಿದಂತೆ ಇತರೆ ಸರ್ಕಾರಿ ಕಟ್ಟಡಗಳಲ್ಲಿ ನವೀಕರಿಸಬಹುದಾದ ಇಂಧನ ಬಳಕೆಗೆ ಒತ್ತು ನೀಡಲು ಆದ್ಯತೆ ನೀಡಲಾಗುವುದು ಎಂದು ಸಭೆಯಲ್ಲಿ ಗೌರವ್ ಗುಪ್ತ ತಿಳಿಸಿದರು.

ಯೋಜನೆ ಅನುಷ್ಠಾನಕ್ಕೆ ರೆಸ್ಕೋ ಮತ್ತು ಕ್ಯಾಪೆಕ್ಸ್ ಮಾದರಿಗಳನ್ನು ವಿವರಿಸಿದ ಗೌರವ್ ಗುಪ್ತ, ನವೀಕರಿಸಬಹುದಾದ ಇಂಧನ ಸೇವಾ ಸಂಸ್ಥೆ (ರೆಸ್ಕೋ) ಮಾದರಿಯಲ್ಲಿ ಸರ್ಕಾರಿ ಇಲಾಖೆಗಳು ಯಾವುದೇ ಆರಂಭಿಕ ಬಂಡವಾಳ ಹೂಡಿಕೆ ಮಾಡುವ ಅಗತ್ಯವಿರುವುದಿಲ್ಲ. ಯೋಜನೆಯ ಸಂಪೂರ್ಣ ವೆಚ್ಚವನ್ನು ಡೆವಲಪರ್‌ಗಳು ಭರಿಸಲಿದ್ದಾರೆ. ಒಪ್ಪಂದದ ಅವಧಿಯಲ್ಲಿ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆ, ಉಪಕರಣಗಳ ಬದಲಾವಣೆ ಹಾಗೂ ಕಾರ್ಯಕ್ಷಮತೆ ಮೇಲ್ವಿಚಾರಣೆಯ ಜವಾಬ್ದಾರಿಯನ್ನೂ ಡೆವಲಪರ್‌ಗಳೇ ನಿರ್ವಹಿಸಲಿದ್ದಾರೆ. ಇದರಿಂದ ಸರ್ಕಾರಿ ಇಲಾಖೆಗಳ ವಿದ್ಯುತ್ ವೆಚ್ಚ ಕಡಿಮೆಯಾಗಲಿದ್ದು, ಹೆಚ್ಚುವರಿ ವಿದ್ಯುತ್ ಅನ್ನು ಗ್ರಿಡ್‌ಗೆ ಮಾರಾಟ ಮಾಡುವ ಮೂಲಕ ಆದಾಯ ಗಳಿಸಲು ಸಾಧ್ಯವಾಗುತ್ತದೆ, ಎಂದು ಹೇಳಿದರು.

ಕ್ಯಾಪೆಕ್ಸ್ (ಕಟ್ಟಡಗಳು, ಯಂತ್ರೋಪಕರಣಗಳದಂತಹ ಸ್ವತ್ತು ಖರೀದಿಗೆ ಮಾಡುವ ಖರ್ಚು–ಬಂಡವಾಳ ವೆಚ್ಚ) ಮಾದರಿಯಲ್ಲಿ ಸಂಬಂಧಪಟ್ಟ ಸಚಿವಾಲಯ ಅಥವಾ ಇಲಾಖೆಯು ತನ್ನ ಸ್ವಂತ ನಿಧಿಯನ್ನು ಬಳಸಿಕೊಂಡು ಅಥವಾ ಬ್ಯಾಂಕ್‌ಗಳು ಹಾಗೂ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಮೇಲ್ಛಾವಣಿ ಸೌರ ಯೋಜನೆಯ ಮಾಲೀಕತ್ವವನ್ನು ಹೊಂದಲಿದೆ. ಬಿಡ್ಡಿಂಗ್ ಪ್ರಕ್ರಿಯೆಯ ಮೂಲಕ ಇಪಿಸಿ ಡೆವಲಪರ್ ಆಯ್ಕೆ ಮಾಡಲಾಗುವುದು. ನಿರ್ಮಾಣ, ಕಾರ್ಯಾರಂಭ ಹಾಗೂ ನಿಗದಿತ ಅವಧಿಯವರೆಗೆ ಕಾರ್ಯಾಚರಣೆ ಮತ್ತು ನಿರ್ವಹಣೆಯ ಜವಾಬ್ದಾರಿಯನ್ನು ಇಪಿಸಿ ಡೆವಲಪರ್ ವಹಿಸಲಿದ್ದು, ನಂತರ ವ್ಯವಸ್ಥೆಯನ್ನು ಸಂಬಂಧಪಟ್ಟ ಇಲಾಖೆಗೆ ಹಸ್ತಾಂತರಿಸಲಾಗುವುದು, ಎಂದು ಅವರು ವಿವರಿಸಿದರು.

ಉತ್ಪಾದನೆಯಾಗುವ ವಿದ್ಯುತ್ ಅನ್ನು ಮೊದಲು ಕಟ್ಟಡದ ಸ್ವಂತ ವಿದ್ಯುತ್ ಬಳಕೆಗೆ ವಿನಿಯೋಗಿಸಲಾಗುತ್ತದೆ. ಹೆಚ್ಚುವರಿ ವಿದ್ಯುತ್ ಅನ್ನು ಗ್ರಿಡ್‌ಗೆ ರವಾನಿಸಲಾಗುವುದು. ಗ್ರಿಡ್‌ನಿಂದ ಬಳಸಲಾದ ವಿದ್ಯುತ್ ಆಧರಿಸಿ ವಿದ್ಯುತ್ ವಿತರಣಾ ಕಂಪನಿಗಳು ಮಾಸಿಕ ವಿದ್ಯುತ್ ಬಿಲ್ ನೀಡಲಿದ್ದು, ಮೇಲ್ಛಾವಣಿ ಸೌರ ವ್ಯವಸ್ಥೆಯಿಂದ ಗ್ರಿಡ್‌ಗೆ ರಫ್ತು ಮಾಡಲಾದ ಹೆಚ್ಚುವರಿ ವಿದ್ಯುತ್‌ಗೆ ಪ್ರೋತ್ಸಾಹಧನವನ್ನೂ ಒದಗಿಸಲಿವೆ, ಎಂದು ಅವರು ಹೇಳಿದರು. ಮೇಲ್ಛಾವಣಿ ಸೌರ ಯೋಜನೆಗಳಿಗೆ ಗ್ರಿಡ್ ಸಂಪರ್ಕ, ಮೀಟರಿಂಗ್ ಹಾಗೂ ನಿಯಂತ್ರಣಾತ್ಮಕ ನಿಯಮಗಳ ಪಾಲನೆಗೆ ಬೆಸ್ಕಾಂ ಮತ್ತು ಇತರ ಎಸ್ಕಾಂಗಳು ಅಗತ್ಯ ಸಹಕಾರ ನೀಡಲಿವೆ. ಈ ಸಮನ್ವಯವು ಸೌರ ವ್ಯವಸ್ಥೆಗಳನ್ನು ವಿದ್ಯುತ್ ಗ್ರಿಡ್‌ನೊಂದಿಗೆ ಸುಗಮವಾಗಿ ಸಂಯೋಜಿಸಲು ನೆರವಾಗಲಿದೆ, ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ ಹೇಳಿದರು. ಸಭೆಯಲ್ಲಿ ಕೆಪಿಟಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ಡಾ.ರಾಮ್ ಪ್ರಸಾತ್ ಮನೋಹರ್, ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕಿ ದಿವ್ಯಾ ಪ್ರಭು, ಜೆ.ಆರ್.ಜೆ. ಹಾಗೂ ಇಂಧನಇಲಾಖೆ ಹಾಗೂ ಇತರ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

> ನವೀಕರಿಸಬಹುದಾದದ ಇಂಧನ ಬಳಕೆಯಲ್ಲಿ ನಮ್ಮ ರಾಜ್ಯ ಮುಂಚೂಣಿಯಲ್ಲಿದೆ. ಸರ್ಕಾರಿ ಕಟ್ಟಡಗಳ ಸೌರೀಕರಣವು ಸಾಂಪ್ರದಾಯಿಕ ವಿದ್ಯುತ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ನವೀಕರಿಸಬಹುದಾದದ ಇಂಧನದ ಬಳಕೆಯನ್ನು ಸರ್ಕಾರ ಉತ್ತೇಜಿಸಲಿದೆ. ಇಂಗಾಲದ ಹೊರಸೂಸು ವಿಕೆಯನ್ನು ತಗ್ಗಿಸುವಲ್ಲಿ ನೆರವಾಗಲಿರುವ ಈ ಉಪಕ್ರಮವು, ಸರ್ಕಾರಿ ಕಟ್ಟಡಗಳಲ್ಲಿ ಇಂಧನ ಸುಸ್ಥಿರತೆಯನ್ನು ಮತ್ತಷ್ಟು ಬಲಪಡಿಸುವುದರ ಜತೆಗೆ ಇಂಧನ ಭದ್ರತೆ ಕಾಯ್ದುಕೊಳ್ಳಲು ನೆರವಾಗಲಿದೆ."
>
> -ಕೆ.ಜೆ.ಜಾರ್ಜ್ । ಸಚಿವರು

# ಅದಾನಿಗೆ ಲಾಭವಾಗುವಂತೆ ಸಮುದ್ರ ಮಂಥನ ಯೋಜನೆ ಮೋದಿ ಸರ್ಕಾರ ರೂಪಿಸುತ್ತಿದೆ: ಕಾಂಗ್ರೆಸ್ ಆರೋಪ

**ನವದೆಹಲಿ, ಆ.31:** ನರೇಂದ್ರ ಮೋದಿ ಸರ್ಕಾರದ ಮೇಲೆ ಕಾಂಗ್ರೆಸ್ ಸೋಮವಾರ ಹೊಸ ದಾಳಿ ನಡೆಸಿದ್ದು, ಹೊಸದಾಗಿ ಅನುಮೋದಿಸಲಾದ 'ಸಮುದ್ರ ಮಂಥನ' ಯೋಜನೆಯನ್ನು ಅದಾನಿ ಗ್ರೂಪ್ಗೆ ಲಾಭವಾಗುವಂತೆ ರಚಿಸಲಾಗಿದೆ ಮತ್ತು ಸಾರ್ವಜನಿಕ ವಲಯದ ತೈಲ ಮತ್ತು ನೈಸರ್ಗಿಕ ಅನಿಲ ನಿಗಮ ನಿರ್ಲಕ್ಷ್ಯವನ್ನು ಬಹಿರಂಗಪಡಿಸಿದೆ ಎಂದು ಆರೋಪಿಸಿದೆ.

ಈ ಯೋಜನೆಯನ್ನು ರದ್ದುಗೊಳಿಸಬೇಕು ಅಥವಾ ಅದರ ಉದ್ದೇಶಿತ 84,084 ಕೋಟಿ ರೂ.ಗಳ ಸಂಪೂರ್ಣ ವೆಚ್ಚವನ್ನು ಕಡಲಾಚೆಯ ಪರಿಶೋಧನೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಗಾಗಿ ಔಓಉಅಗೆ ವರ್ಗಾಯಿಸಬೇಕು ಎಂದು ವಿರೋಧ ಪಕ್ಷ ಒತ್ತಾಯಿಸಿದೆ.

ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಹಿರಿಯ ನಾಯಕ ಮತ್ತು ವಕ್ತಾರ ಶಕ್ತಿಸಿಂಗ್ ಗೋಹಿಲ್, ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯ ಕೇಂದ್ರ ಸಚಿವ ಸಂಪುಟವು ರಾಷ್ಟ್ರೀಯ ಕಡಲಾಚೆಯ ಪರಿಶೋಧನಾ ಯೋಜನೆ ಎಂದು ವಿವರಿಸಲಾದ ಸಮುದ್ರ ಮಂಥನ ಯೋಜನೆಗೆ ಅನುಮೋದನೆ ನೀಡಿದೆ ಎಂದು ಆರೋಪಿಸಿದರು, ಇದರ ಅಡಿಯಲ್ಲಿ ಪರಿಶೋಧನಾ ಅಪಾಯಗಳನ್ನು ಕಡಿಮೆ ಮಾಡಲು ಮತ್ತು ಹೈಡ್ರೋಕಾರ್ಬನ್ ವಲಯದಲ್ಲಿ ಹೂಡಿಕೆಯನ್ನು ಉತ್ತೇಜಿಸಲು ಸರ್ಕಾರವು ಶೇಕಡಾ 50 ರಷ್ಟು ಆರ್ಥಿಕ ಬೆಂಬಲವನ್ನು ನೀಡುತ್ತದೆ.

"ಪ್ರಧಾನಿ ನರೇಂದ್ರ ಮೋದಿ ಹೊಸ ನೀತಿಯನ್ನು ಘೋಷಿಸಿದಾಗಲೆಲ್ಲಾ, ಅದು ಅದಾನಿಗೆ ಲಾಭ ತರುವ ಉದ್ದೇಶ ಹೊಂದಿದೆ" ಎಂದು ಗೋಹಿಲ್ ಆರೋಪಿಸಿದರು. "ಹೊಸ ಯೋಜನೆ, ಹೊಸ ವಲಯ, ಆದರೆ ಯಾವಾಗಲೂ ಒಂದೇ ಫಲಾನುಭವಿ, ಅದು ಅದಾನಿ."

ಈ ಕಾರ್ಯಕ್ರಮದ ಮೊದಲ ಹಂತವು 84,084 ಕೋಟಿ ರೂ.ಗಳ "ಬೃಹತ್ ವೆಚ್ಚ"ವನ್ನು ಒಳಗೊಂಡಿತ್ತು ಮತ್ತು ಅದಾನಿ ವೆಲ್ಸ್ಪನ್ ಎಕ್ಸ್‌ಪ್ಲೋರೇಶನ್‌ಗೆ ಗಣನೀಯ ಸರ್ಕಾರಿ ಬೆಂಬಲವನ್ನು ಒದಗಿಸುವ ರೀತಿಯಲ್ಲಿ ಈ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ಗೋಹಿಲ್ ಆರೋಪಿಸಿದರು. "ನರೇಂದ್ರ ಮೋದಿ ಸರ್ಕಾರವು ಸಮುದ್ರ ಮಂಥನ ಯೋಜನೆಯಡಿಯಲ್ಲಿ ಅದಾನಿಗೆ ಬೆಂಬಲ ನೀಡುವ ಚೌಕಟ್ಟನ್ನು ವಿನ್ಯಾಸಗೊಳಿಸಿದೆ" ಎಂದು ಅವರು ಆರೋಪಿಸಿದರು. ಈ ಯೋಜನೆಯು AWEL ಗೆ ಸರ್ಕಾರದ ಗಮನಾರ್ಹ ಆರ್ಥಿಕ ಬೆಂಬಲದೊಂದಿಗೆ ದುಬಾರಿ ಕಡಲಾಚೆಯ ಪರಿಶೋಧನೆಯನ್ನು ಕೈಗೊಳ್ಳಲು ಅನುವು ಮಾಡಿಕೊಡುತ್ತದೆ ಎಂದು ಗೋಹಿಲ್ ಆರೋಪಿಸಿದರು. "ಸಮುದ್ರ ಮಂಥನ ಯೋಜನೆಯಡಿಯಲ್ಲಿ, ಪ್ರತಿ ಆಳ ಸಮುದ್ರ ಬಾವಿ ಕೊರೆಯುವಿಕೆ, 2ಆ ಮತ್ತು 3ಆ ಭೂಕಂಪನ ಸಮೀಕ್ಷೆಗಳು, ಕೃತಕ ಬುದ್ಧಿಮತ್ತೆ ನೇತೃತ್ವದ ಅಸ್ತಿತ್ವದಲ್ಲಿರುವ ಭೂವೈಜ್ಞಾನಿಕ ದತ್ತಾಂಶದ ಮರು ಸಂಸ್ಕರಣೆ, ಕಡಲಾಚೆಯ ಮೂಲಸೌಕರ್ಯ ಅಭಿವೃದ್ಧಿ ಮತ್ತು ಅದಾನಿ ನೇತೃತ್ವದ AWEL ಮಾಡುವ ಎಲ್ಲಾ ಸಂಬಂಧಿತ ವ್ಯವಹಾರ ಚಟುವಟಿಕೆಗಳಿಗೆ ಭಾರತ ಸರ್ಕಾರವು ಶೇ.50ರಷ್ಟು ವೆಚ್ಚವನ್ನು ಭರಿಸುತ್ತದೆ" ಎಂದು ಅವರು ಪ್ರತಿಪಾದಿಸಿದರು. "ಅದಾನಿಯ AWEL ತೆಗೆದುಕೊಳ್ಳುವ ಎಲ್ಲಾ ಅಪಾಯಗಳಿಗೆ ಭಾರತ ಸರ್ಕಾರವು ಪಾವತಿಸುತ್ತದೆ ಆದರೆ ಎಲ್ಲಾ ಲಾಭಗಳು ಅದಾನಿಯದ್ದಾಗಿರುತ್ತದೆ" ಎಂದು ಗೋಹಿಲ್ ಆರೋಪಿಸಿದರು. "ಸಮುದ್ರ ಮಂಥನ ಯೋಜನೆಯನ್ನು ರದ್ದುಗೊಳಿಸಬೇಕು ಅಥವಾ ಉದ್ಯೋಗಗಳನ್ನು ಸೃಷ್ಟಿಸಲು ಮತ್ತು ಪರಿಶೋಧನೆಗೆ ಅನುಕೂಲವಾಗುವಂತೆ ಸರ್ಕಾರದ ಸ್ವಂತ ಸಾರ್ವಜನಿಕ ವಲಯದ ಇಂಧನ ದೈತ್ಯ ONGC ಗೆ ಸಂಪೂರ್ಣ ಮೊತ್ತವನ್ನು ತಿರುಗಿಸಬೇಕು" ಎಂದು ಗೋಹಿಲ್ ಹೇಳಿದರು. ಸರ್ಕಾರದ ನೀತಿಯ ಮೇಲೆ ರಾಜಕೀಯ ದಾಳಿಯೊಂದಿಗೆ ಅವರು ಮುಕ್ತಾಯಗೊಳಿಸಿದರು, "ಸಮುದ್ರ ಮಂಥನವನ್ನು ಮಾಡಬೇಕು" ಎಂದು ಹೇಳಿದರು. ಭಾರತಕ್ಕಾಗಿ ಸಾಗರವನ್ನೇ ಮಂಥನ ಮಾಡಿ – ಒಂದು ಖಾಸಗಿ ಕಂಪನಿಗೆ ಲಾಭ ಖಚಿತಪಡಿಸಿಕೊಳ್ಳಲು ತೆರಿಗೆದಾರರ ಹಣವನ್ನು ಮಂಥನ ಮಾಡಬೇಡಿ. ಸಮುದ್ರ ಮಂಥನವು ಅದಾನಿಗೆ ಮಾತ್ರವಲ್ಲ, ಪ್ರತಿಯೊಬ್ಬ ಭಾರತೀಯನಿಗೂ ಪ್ರಯೋಜನವನ್ನು ನೀಡಬೇಕು.

# 6ನೇ ಭೂ ಗ್ಯಾರಂಟಿ: ಕಾನೂನು ಪ್ರಕಾರ ದಾಖಲೆ ಸರಿ ಇದ್ದವರಿಗೆ ಭೂ ಗ್ಯಾರಂಟಿ– ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಆ. 31:** ಕಾನೂನು ಪ್ರಕಾರ ದಾಖಲೆ ಸರಿ ಇದ್ದವರಿಗೆ ಭೂ ಗ್ಯಾರಂಟಿ– ಸರ್ಕಾರ ಆರನೇ ಗ್ಯಾರಂಟಿಯಾಗಿ ಭೂ ಗ್ಯಾರಂಟಿ ನೀಡುತ್ತಿರುವುದರ ಬಗ್ಗೆ ಕೇಳಿದಾಗ, "ಈ ಭೂಮಿ ಗ್ಯಾರಂಟಿ ಕೇವಲ ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ ಎಂದರು.

ಸಿಎಂ ಡಿ ಕೆ ಶಿವಕುಮಾರ್. ಸರ್ಕಾರಕ್ಕಾಗಿ ತಮ್ಮ ಆಸ್ತಿಯನ್ನು ತ್ಯಾಗ ಮಾಡುವ ಎಲ್ಲರಿಗೂ ಇದು ಅನ್ವಯವಾಗಲಿದೆ. ಅವರ ಹೆಸರುಗಳನ್ನು ಶಾಶ್ವತವಾಗಿ ದಾಖಲಿಸಬೇಕು. ಅವರಿಗೆ ಸೂಕ್ತ ಪರಿಹಾರ ನೀಡಬೇಕು. ಅಲ್ಲದೆ, ಅವರು ಹೊಂದಿರುವ ಭೂಮಿಯಲ್ಲಿಯೇ ಅವರಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸಬೇಕು. ಇದು ರಾಜ್ಯದ ಎಲ್ಲಾ ಭೂ ಮಾಲೀಕರಿಗೂ ಅನ್ವಯವಾಗಬೇಕು" ಎಂದರು.

"ಫಲಾನುಭವಿಗಳ ಭಾವಚಿತ್ರ ಸೇರಿದಂತೆ ಎಲ್ಲಾ ಅಗತ್ಯ ವಿವರಗಳನ್ನು ಒಳಗೊಂಡ ಸೂಕ್ತ ದಾಖಲೆಗಳನ್ನು ನೀಡಲು ನಾವು ವ್ಯವಸ್ಥೆ ಮಾಡುತ್ತಿದ್ದೇವೆ. ದಾಖಲೆಗಳು ಎಂದರೆ ಎಲ್ಲವೂ ಕಾನೂನುಬದ್ಧವಾಗಿ ಮಾನ್ಯವಾಗಿರಬೇಕು ಎಂಬುದು ನನ್ನ ಅರ್ಥ. ಬಿ ಖಾತಾದಿಂದ ಎ ಖಾತಾಗೆ ಪರಿವರ್ತಿಸುವಾಗಲೂ ಕಾನೂನು ಬದ್ಧತೆ ಇರಬೇಕು. ದಾಖಲೆಗಳು ಕಾನೂನುಬದ್ಧವಾಗಿರಬೇಕು. ಬೋಗಸ್ ನೋಂದಣಿ ಇದ್ದರೆ ಮಾಡಲು ಸಾಧ್ಯವಿಲ್ಲ" ಎಂದು ಸ್ಪಷ್ಟಪಡಿಸಿದರು.



"ಕಾನೂನಿನ ಚೌಕಟ್ಟಿನೊಳಗೆ ಅವರಿಗೆ ಸೂಕ್ತ ದಾಖಲೆಗಳನ್ನು ಒದಗಿಸಲು ನಾವು ವ್ಯವಸ್ಥೆ ಮಾಡಿದ್ದೇವೆ. ಏಕೆಂದರೆ ಭವಿಷ್ಯದಲ್ಲಿ ಅವರ ಆಸ್ತಿ ವರ್ಗಾವಣೆ ಮಾಡಬೇಕಾಗಬಹುದು, ಸಾಲ ಪಡೆಯಬೇಕಾಗಬಹುದು ಅಥವಾ ಕುಟುಂಬದ ಸದಸ್ಯರ ನಡುವೆ ಆಸ್ತಿಯನ್ನು ಹಂಚಿಕೆ ಮಾಡಬೇಕಾಗಬಹುದು. ಇಂತಹ ಹಲವು ಸಾಧ್ಯತೆಗಳಿವೆ. ಸರ್ಕಾರವು ಅವರ ಹಕ್ಕುಗಳು ಮತ್ತು ಆಸ್ತಿಗಳು ಸುರಕ್ಷಿತವಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು" ಎಂದರು.

"ಕೃಷ್ಣ ಬೈರೇಗೌಡ ಅವರು ಕಂದಾಯ ಸಚಿವರಾಗಿದ್ದಾಗ, ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ ಆರಂಭವಾಗಿ ಈ ಸರ್ಕಾರ ಮುಂದುವರಿಸಿಕೊಂಡು ಹೋಗುತ್ತಿದೆ" ಎಂದರು.



ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕರ್ನಾಟಕ ಮತ್ತು ಕೇರಳ ಸಬ್ ಏರಿಯಾ ಜನರಲ್ ಆಫೀಸರ್ ಕಮಾಂಡಿಂಗ್ ಮೇಜರ್ ಜನರಲ್ ಭರತ್ ಮೆಹ್ತಾನಿ ಅವರು ವಿಧಾನಸೌಧದಲ್ಲಿ ಸೋಮವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಈ ವೇಳೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಹಾಗೂ ಇತರರು ಹಾಜರಿದ್ದರು.

## ಹಾಸನ ಜಿಲ್ಲಾಧಿಕಾರಿ ಕಚೇರಿಯ ಸಂಕೀರ್ಣ, ವಿಮಾನ ನಿಲ್ದಾಣದ ಕಾಮಗಾರಿಗಳಿಗೆ ಕ್ರಮ ಸಚಿವ ಕೆ.ಎಂ. ಶಿವಲಿಂಗೇಗೌಡ ಬೆಂಬಲ

**ಬೆಂಗಳೂರು, ಆ.31:** ನ್ಯಾಯಾಂಗ ಶ್ರೇಷ್ಠ. ನ್ಯಾಯಮೂರ್ತಿಗಳನ್ನು ಗೌರವದಿಂದ ನಡೆಸಿಕೊಳ್ಳಬೇಕು. ನ್ಯಾಯಮೂರ್ತಿಗಳಿಗೆ ಆಭಾಸವಾಗದಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಬಾಕಿಯಿರುವ ಕಾಮಗಾರಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸಬೇಕು ಎಂದು ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇ ಗೌಡ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಕಾಸಸೌಧದ ಸಭಾಂಗಣದಲ್ಲಿ ಸೋಮವಾರ ಕೆ.ಎಂ. ಶಿವಲಿಂಗೇಗೌಡ ಅವರ ಅಧ್ಯಕ್ಷತೆಯಲ್ಲಿ ಹೊಸ ನ್ಯಾಯಾಲಯ ಸಂಕೀರ್ಣ ಅರಸಿಕೆರೆ ಮತ್ತು ಚನ್ನರಾಯಪಟ್ಟಣ ತಾಲ್ಲೂಕು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಆವರಣದಲ್ಲಿ ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ಸಂಕೀರ್ಣ ಕಟ್ಟಡ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆ ನಡೆಯಿತು.




20ನೇ ತಾರೀಕು ಅರಸೀಕೆರೆ ಕೋರ್ಟ್ ಉದ್ಘಾಟನೆಗೆ ನಿರ್ದೇಶನ ನೀಡಿದ ಸಚಿವರು, ಅರಸಿಕೆರೆ ಇತಿಹಾಸದಲ್ಲೇ ಒಂದು ಒಳ್ಳೆ ಕೋರ್ಟ್ ನಿರ್ಮಾಣವಾಗುತ್ತಿರುವುದು ಸಂತಸದ ವಿಚಾರ. ಶೀಘ್ರದಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ತ್ವರಿತಗತಿಯಲ್ಲಿ ಕೆಲಸಗಳನ್ನು ಮಾಡಬೇಕು. ಈಗಾಗಲೇ ಸಾಕಷ್ಟು ತಡವಾಗಿದೆ. ವಿಳಂಬ ಧೋರಣೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ವಿದ್ಯುತ್ ಸಂಪರ್ಕ, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳ ಗುಣಮಟ್ಟವನ್ನು ಕಾಪಾಡುವ ನಿಟ್ಟಿನಲ್ಲಿ ಕ್ರಮವಹಿಸಬೇಕು. ಗುತ್ತಿಗೆದಾರರ ಸಮಸ್ಯೆ ಬಗೆಹರಿಸಲು ಸಿದ್ಧನಿದ್ದೇನೆ ಎಂದರು.

ಉದ್ಘಾಟನೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಸಿದ್ಧತೆ ನಡೆಸಿ, ಅಗತ್ಯ ಸಹಕಾರ ಮಾಡಲು ಸಿದ್ಧನಿದ್ದೇನೆ. ಕಾರ್ಯಕ್ರಮವನ್ನು ಬಹಳ ಚೆನ್ನಾಗಿ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ಇದೇ ವೇಳೆ, ಹಾಸನ ಜಿಲ್ಲೆಯ ಜ್ವಲಂತ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಆದ್ಯತೆ ನೀಡಿದ್ದೇನೆ. ಪ್ರಮುಖವಾಗಿ ವಿಮಾನ ನಿಲ್ದಾಣ, ಜಿಲ್ಲಾಧಿಕಾರಿ ಕಚೇರಿ ಉದ್ಘಾಟನೆ ಮತ್ತಿತರ ಮಹತ್ವದ ಕಾರ್ಯಕ್ರಮಗಳನ್ನು ನಡೆಸುವ ನಿಟ್ಟಿನಲ್ಲಿ ಗಮನಹರಿಸಬೇಕಿದೆ ಎಂದರು.

ಸಭೆಯಲ್ಲಿ ಹಾಸನ ಜಿಲ್ಲಾಧಿಕಾರಿ ಕೆ. ಎಸ್. ಲತಾಕುಮಾರಿ, ನ್ಯಾಯವಾದಿಗಳ ಪ್ರತಿನಿಧಿಗಳು ಸೇರಿದಂತೆ ಇತರೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

## ಸಚಿವ ರಾಯರೆಡ್ಡಿಯಿಂದ ಸಂವಿಧಾನಕ್ಕೆ ಅಪಚಾರ ಸಂಸದ ಬೊಮ್ಮಾಯಿ ಟೀಕೆ



**ಬೆಂಗಳೂರು, ಆ. 31:** ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದಲ್ಲಿ ಅತಿ ಬುದ್ದಿವಂತ ಸಚಿವ ಬಸವರಾಜ ರಾಯರೆಡ್ಡಿ ಮತ್ತೊಮ್ಮೆ ವಿವಾದಾತ್ಮಕ ಹೇಳಿಕೆ ನೀಡಿ ತಾವು ಪ್ರಮಾಣ ವಚನ ಮಾಡಿರುವ ಸಂವಿಧಾನಕ್ಕೆ ಅಪಚಾರ ಮಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿ ಸಿದ್ದಾರೆ.

ಈ ಕುರಿತು ಎಕ್ಸ್ ಮಾಡಿರುವ ಅವರು, ಸಂವಿಧಾನದ ಮೂಲ ಆಶಯ ಧರ್ಮ ನಿರಪೇಕ್ಷತೆಯನ್ನು ಹೇಳಿದೆ. ಒಬ್ಬ ಸಚಿವರಾಗಿ ಒಂದು ಧರ್ಮ ಇನ್ನೊಂದು ಧರ್ಮಕ್ಕಿಂತ ಶ್ರೇಷ್ಠ ಎನ್ನುವ ಮಾತನಾಡುವ ಮುಖಾಂತರ ಇಸ್ಲಾಂ ಅಲ್ಲದ ಇತರರ ಧರ್ಮಿಯರ ಮನಸಿಗೆ ನೋವು ಉಂಟು ಮಾಡಿದೆ ಎಂದು ತಿಳಿಸಿದ್ದಾರೆ.

ರಾಯರೆಡ್ಡಿಯವರು ಸಮಾಜದಲ್ಲಿ ಕೋಮು ಸೌಹಾರ್ದತೆ ಕೆದಕಿದ್ದಾರೆ. ಇದು ಒಬ್ಬ ಸಚಿವರು ಮಾಡುವ ಕೆಲಸವಲ್ಲ. ಕೂಡಲೇ ಅವರು ಕ್ಷಮಾಪಣೆ ಕೇಳಬೇಕು ಇಲ್ಲದಿದ್ದರೆ, ಸಿಎಂ ಡಿ.ಕೆ. ಶಿವಕುಮಾರ ಅವರ ಮೇಲೆ ಕ್ರಮ ಜರುಗಿಸಬೇಕೆಂದು ರಾಜ್ಯದ ಜನತೆಯ ಆಗ್ರಹವಾಗಿದೆ ಎಂದು ತಿಳಿಸಿದ್ದಾರೆ.

## ಜನರ ಮನೆಬಾಗಿಲಿಗೆ ಸೇವೆ; ಪ್ರಜಾಸೇವಾ ಅಭಿಯಾನಕ್ಕೆ ಸೆ.5 ರಂದು ಚಾಲನೆ: ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್

**ಬೆಂಗಳೂರು, ಆ.31–** ಸರ್ಕಾರಿ ಕಚೇರಿಗಳಿಗೆ ಅಲೆದಾಡದೆ ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ರಾಜ್ಯ ಸರ್ಕಾರ 'ಪ್ರಜಾ ಸೇವಾ ಅಭಿಯಾನ' ಆರಂಭಿಸುತ್ತಿದೆ. ಆಡಳಿತವನ್ನು ಜನರ ಬಳಿಗೆ ಕೊಂಡೊಯ್ಯುವ ಉದ್ದೇಶದ ಈ ಅಭಿಯಾನಕ್ಕೆ ಸೆ.5ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಲ್ಲಿ ಚಾಲನೆ ದೊರೆಯಲಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಕುಂದು ಕೊರತೆ, ಅರ್ಜಿ ಹಾಗೂ ದೂರುಗಳನ್ನು ನೇರವಾಗಿ ಸ್ವೀಕರಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹರಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಹೆಚ್ಚಿನ ಸಮಯ ಬೇಕಾಗುವ ಸಮಸ್ಯೆಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಮೂಲಕ



ಅಧಿಕಾರಿಗಳ ಹೊಣೆಗಾರಿಕೆಯನ್ನು ಹೆಚ್ಚಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸಣ್ಣಪುಟ್ಟ ಕೆಲಸಗಳಿಗೂ ತಾಲೂಕು ಕಚೇರಿ, ಗ್ರಾಮ ಪಂಚಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಿಗೆ ಪದೇಪದೆ ಅಲೆದಾಡಬೇಕಾದ ಪರಿಸ್ಥಿತಿಯನ್ನು ತಪ್ಪಿಸಿ, ಆಡಳಿತವನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಅಭಿಯಾನದ ಆಶಯವಾಗಿದೆ.

ಸಾರ್ವಜನಿಕರ ಅಹವಾಲುಗಳನ್ನು ಆಲಿಸುವುದರ ಜತೆಗೆ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಲು ಸಭೆಗಳಲ್ಲಿ ಇಲಾಖಾವಾರು ಮಳಿಗೆಗಳನ್ನು ಸ್ಥಾಪಿಸಲಾಗುತ್ತದೆ.

ಅರ್ಹ ಫಲಾನುಭವಿಗಳಿಗೆ ವಿವಿಧ ಸರ್ಕಾರಿ ಯೋಜನೆಗಳ ಮಂಜೂರಾತಿ ಪತ್ರಗಳನ್ನು ಸ್ಥಳದಲ್ಲಿಯೇ ವಿತರಿಸುವ ವ್ಯವಸ್ಥೆ ಇರಲಿದೆ. ಈಗಾಗಲೇ ಪರಿಹಾರಗೊಂಡ ಪ್ರಕರಣಗಳಿಗೆ ಸಂಬಂಧಿಸಿದ ಅನುಮೋದನೆ ಅಥವಾ ದೃಢೀಕರಣ ಪತ್ರವನ್ನೂ ಸ್ಥಳದಲ್ಲಿಯೇ ನೀಡಲಾಗುತ್ತದೆ. ಅರ್ಜಿ ಹಾಗೂ ಅಹವಾಲುಗಳ ಪ್ರಗತಿಯನ್ನು ಸಾರ್ವಜನಿಕರು ನೈಜ ಸಮಯದಲ್ಲಿ ಪರಿಶೀಲಿಸಲು ಅವಕಾಶ ಕಲ್ಪಿಸಲಾಗುತ್ತದೆ.

ಈ ಮೂಲಕ ದೂರುಗಳ ತ್ವರಿತ ವಿಲೇವಾರಿ, ಸ್ಥಳದಲ್ಲಿಯೇ ಸೇವೆ, ನಿರಂತರ ಪರಿಶೀಲನೆ ಹಾಗೂ ಅಧಿಕಾರಿಗಳ ಹೊಣೆಗಾರಿಕೆಯನ್ನು ಖಚಿತಪಡಿಸುವ ಗುರಿಯನ್ನು ಪ್ರಜಾಸೇವಾ ಅಭಿಯಾನ ಹೊಂದಿದೆ.

## ಮುಂಬರುವ ಸಾಲು ಸಾಲು ನೇಮಕಾತಿ ಪರೀಕ್ಷೆಗಳಿಗೆ ಕೆಇಎ ಸಿದ್ಧತೆ

**ಬೆಂಗಳೂರು,ಆ.31:** ಮುಂದಿನ ದಿನಗಳಲ್ಲಿ ಸಾಲು ಸಾಲು ನೇಮಕಾತಿ ಪರೀಕ್ಷೆಗಳು ಇರುವ ಕಾರಣ, ಈ ನಿಟ್ಟಿನಲ್ಲಿ ಸಿದ್ಧತೆ ನಡೆಸಿರುವ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಜಿಲ್ಲಾ ಮಟ್ಟದಲ್ಲಿ ಕೆಇಎ ಮತ್ತು ಜಿಲ್ಲಾಡಳಿತದ ನಡುವೆ ಸಂಪರ್ಕ ಸೇತುವೆಯಾಗಿ ಸಮರ್ಪಕವಾಗಿ ಕಾರ್ಯನಿರ್ವಹಿಸುವ ಪರೀಕ್ಷಾ ಮಾಸ್ಟರ್ ತರಬೇತುದಾರರನ್ನು ನೇಮಿಸಿ, ತರಬೇತಿಯನ್ನೂ ನೀಡಿತು.

ಪರೀಕ್ಷಾ ಪ್ರಾಧಿಕಾರದಲ್ಲಿ ಸೋಮವಾರ ನಡೆದ ತರಬೇತುದಾರರ ಕಾರ್ಯಾಗಾರವನ್ನು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಜ್ಯೋತಿ ಅವರು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಜ್ಯೋತಿ ಅವರು ನೇಮಕಾತಿ ಪರೀಕ್ಷೆಗಳನ್ನು ನಡೆಸಲು ಉಪಯೋಗವಾಗುವ ಮಾರ್ಗದರ್ಶಿ ಕೈಪಿಡಿಯನ್ನು ಬಿಡುಗಡೆ ಮಾಡಿದರು.

ಕೆಇಎ ಕೋರಿಕೆ ಮೇರೆಗೆ, ಜಿಲ್ಲೆಗೆ ಇಬ್ಬರು ಹಿರಿಯ ಉಪನ್ಯಾಸಕರನ್ನು ಮಾಸ್ಟರ್ ತರಬೇತುದಾರರಾಗಿ ಎಲ್ಲ ಜಿಲ್ಲಾಧಿಕಾರಿಗಳು ನಿಯೋಜಿಸಿದ್ದು, ಅವರಿಗೆ ಇಡೀ ದಿನ ತರಬೇತಿ ನೀಡಲಾಯಿತು.




ನಂತರ ಮಾತನಾಡಿದ ಜ್ಯೋತಿ ಅವರು, 'ಇವತ್ತು ಪರೀಕ್ಷೆ ಬರೆಯುವ ಅಭ್ಯರ್ಥಿಗಳಲ್ಲಿ ವಿಶ್ವಾಸ ಮೂಡಿಸುವ ದೊಡ್ಡ ಜವಾಬ್ದಾರಿ ನಮ್ಮ ಮೇಲೆ ಇದ್ದು, ಅದಕ್ಕೆ ಪೂರಕವಾಗಿ ಮಾಸ್ಟರ್ ತರಬೇತುದಾರರು ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸಬೇಕು' ಎಂದು ಸಲಹೆ ನೀಡಿದರು.

'ರಾಜ್ಯ ಸರ್ಕಾರ, 72 ಸಾವಿರ ಹುದ್ದೆಗಳ ನೇಮಕಾತಿಗೆ ತೀರ್ಮಾನ ಮಾಡಿದ್ದು, ಈ ನಿಟ್ಟಿನಲ್ಲಿ ಕೆಇಎ ಸಿಂಹಪಾಲು ಹುದ್ದೆಗಳ ನೇಮಕಾತಿಯನ್ನು ಮಾಡುತ್ತಿದೆ. ಹೀಗಾಗಿ ಇಲ್ಲಿ ತರಬೇತಿ ಪಡೆಯುವ ತರಬೇತುದಾರರು, ಯಾವುದೇ ಲೋಪ ಇಲ್ಲದೆ ಪರೀಕ್ಷೆಗಳನ್ನು ನಡೆಸುವ ಕೆಲಸ ಮಾಡಬೇಕು' ಎಂದು ಹೇಳಿದರು. ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಮಾತನಾಡಿ, 'ಪರೀಕ್ಷೆ ನಡೆಸುವುದು ಅತ್ಯಂತ ಸೂಕ್ಷ್ಮ ವಿಚಾರ. ಒಂದು ವರ್ಗ ಗಂಭೀರವಾಗಿ ಓದಿ ಉದ್ಯೋಗ ಪಡೆಯುವ ನಿಟ್ಟಿನಲ್ಲಿ ಯೋಚನೆ ಮಾಡುತ್ತಿದ್ದರೆ ಮತ್ತೊಂದು ವರ್ಗ ಹೇಗಾದರು ಮಾಡಿ ನೇಮಕ ಆಗಬೇಕು ಎಂದು ಅಕ್ರಮ ಮಾರ್ಗಗಳನ್ನು ಹುಡುಕುತ್ತಿರುತ್ತದೆ. ಹೀಗಾಗಿ ಪ್ರತಿಯೊಬ್ಬರೂ ತಮಗೆ ವಹಿಸಿರುವ ಕೆಲಸವನ್ನು ಪ್ರಾಮಾಣಿಕವಾಗಿ, ಅಚ್ಚುಕಟ್ಟಾಗಿ ಮಾಡಬೇಕು' ಎಂದು ಸಲಹೆ ನೀಡಿದರು.

'ಜಿಲ್ಲಾಧಿಕಾರಿಗಳೇ ಜಿಲ್ಲೆಗೆ ಇಬ್ಬರು ಹಿರಿಯ ಉಪನ್ಯಾಸಕರನ್ನು ಮಾಸ್ಟರ್ ತರಬೇತುದಾರರಾಗಿ ನಿಯೋಜಿಸಿದ್ದಾರೆ. ಒಂದು ರೀತಿ ಇವರು ಕೆಇಎ ರಾಯಭಾರಿಗಳು. ಪರೀಕ್ಷೆ ಪೂರ್ವ ಮತ್ತು ನಂತರದ ಕಾರ್ಯಗಳನ್ನು ಕೆಇಎ ಮಾಡುತ್ತದೆ. ಆದರೆ ಪರೀಕ್ಷೆ ಸಂದರ್ಭದ ಕೆಲಸಗಳನ್ನು ಅಚ್ಚುಕಟ್ಟಾಗಿ ಯಾವುದೇ ಗೊಂದಲ ಇಲ್ಲದೆ ನಿಭಾಯಿಸಲು ನಿಮ್ಮೆಲ್ಲರ ಸಹಕಾರ ಬೇಕಾಗುತ್ತದೆ. ಕಾಲಕಾಲಕ್ಕೆ ಕೆಇಎ ತೆಗೆದುಕೊಳ್ಳುವ ತೀರ್ಮಾನಗಳನ್ನು ತಮಗೆ ತಲುಪಿಸುವ ಕೆಲಸ ಮಾಡಲಾಗುವುದು. ನಂತರ ತರಬೇತುದಾರರು ಜಿಲ್ಲೆಯಲ್ಲಿನ ಇತರ ಸಿಬ್ಬಂದಿ ಜತೆಗೆ ಸಮನ್ವಯ ಸಾಧಿಸಿ, ಯಶಸ್ವಿಯಾಗಿ ಪರೀಕ್ಷೆಗಳನ್ನು ನಡೆಸಲು ಸಹಕರಿಸಬೇಕು' ಎಂದು ಹೇಳಿದರು.

ಕೆಇಎ ಆಡಳಿತಾಧಿಕಾರಿ ಇಸ್ಲಾವುದ್ದೀನ್ ಗದ್ಯಾಳ ಅವರು ಪ್ರಾತ್ಯಕ್ಷಿಕೆ ಮೂಲಕ ಮಾಸ್ಟರ್ ತರಬೇತುದಾರರಿಗೆ ಮಾಹಿತಿ ನೀಡಿದರು. ಹಿರಿಯ ಉಪನ್ಯಾಸಕರು ಹಲವು ಪ್ರಶ್ನೆಗಳನ್ನು ಕೇಳಿ ತಮ್ಮ ಅನುಮಾನಗಳನ್ನು ದೂರ ಮಾಡಿಕೊಂಡರು.

## ವಿದ್ಯಾರ್ಥಿಗಳಿಗೆ ಪಠ್ಯೇತರ ಚಟುವಟಿಕೆ ಅತ್ಯಂತ ಅಗತ್ಯ: ನಟ ಶ್ರೀನಾಥ್



**ಬೆಂಗಳೂರು, ಆ. 31:** ಎಪಿಎಸ್ ಪಿಯು ಕಾಲೇಜು ಆಫ್ ಆರ್ಟ್ಸ್, ಸೈನ್ಸ್ ಅಂಡ್ ಕಾಮರ್ಸ್‌ನ ಜ್ಞಾನ ದೇಗುಲ ಕ್ಯಾಂಪಸ್‌ನಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ಹಿರಿಯ ನಟ ಹಾಗೂ ಎಪಿಎಸ್ ಶಿಕ್ಷಣ ಸಂಸ್ಥೆಯ ಹಳೆಯ ವಿದ್ಯಾರ್ಥಿ ಪ್ರಣಯರಾಜ ಡಾ. ಶ್ರೀನಾಥ್ ಪ್ರತಿಭಾ ದಿನಾಚರಣೆ ಯಲ್ಲಿ ಪಾಲ್ಗೊಂಡು ವಿದ್ಯಾರ್ಥಿ ಗಳೊಂದಿಗೆ ಸಂವಾದ ನಡೆಸಿದರು.

ನಂತರ ಮಾತನಾಡಿ, ಎಪಿಎಸ್ ಶಿಕ್ಷಣದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗೆ ಸದಾ ಬೆಂಬಲವಾಗಿ ನಿಂತಿತ್ತು. ಇದರ ಪರಿಣಾಮ ಸೂಪರ್ ಸ್ಟಾರ್ ರಜನಿಕಾಂತ್, ಉಪೇಂದ್ರ, ಕಲ್ಯಾಣ್ ಕುಮಾರ್, ಟೆನಿಸ್ ಕೃಷ್ಣ, ಸಿ. ಅಶ್ವತ್ಥ್ ಸೇರಿದಂತೆ ಇನ್ನೂ ಅನೇಕ ಪ್ರತಿಭೆಗಳು ಬೆಳಗಲು ಸಾಧ್ಯವಾಯಿತು. ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಯೂ ಅತ್ಯಂತ ಅಗತ್ಯ ಎಂದರು.

ಸಂಸ್ಥೆಯ ಅಧ್ಯಕ್ಷ ಸಿ.ಎ ಡಾ. ವಿಷ್ಣು ಭರತ್ ಆಲಂಪಲ್ಲಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಸಾಮರ್ಥ್ಯವನ್ನು ಗುರುತಿಸಿಕೊಂಡು, ತನ್ನಲ್ಲಿರುವ ಪ್ರತಿಭೆಯನ್ನು ಬೆಳೆಸಿಕೊಂಡು, ಜವಾಬ್ದಾರಿಯುತ ನಾಗರಿಕನಾಗಿ ಹಾಗೂ ದೇಶದ ಆಸ್ತಿಯಾಗಿ ರೂಪುಗೊಳ್ಳಲು ಅತ್ಯುತ್ತಮ ಪ್ರಯತ್ನ ಮಾಡಬೇಕು. ಆತ್ಮವಿಶ್ವಾಸದಿಂದ ಶಿಸ್ತು ಮೈಗೂಡಿಸಿಕೊಂಡು ಉತ್ತಮ ಚಾರಿತ್ರ್ಯ ಹೊಂದಬೇಕು ಎಂದರು. ಕಾಲೇಜಿನ ಅಧ್ಯಕ್ಷ ಟಿ.ವಿ. ಪ್ರಭು, ಪ್ರಧಾನ ಕಾರ್ಯದರ್ಶಿ ಎ. ಪ್ರಕಾಶ್ ಹಾಗೂ ಪ್ರಾಂಶುಪಾಲ ನಾಗರಾಜ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ 7 ತಿಂಗಳಲ್ಲಿ 558 ಕೋಟಿ ರೂ. ಸೈಬರ್ ವಂಚನೆ, ಸಂತ್ರಸ್ತರಿಗೆ ವಾಪಸ್ ಬಂದಿದ್ದು ಕೇವಲ 1.9 ರೂ. ಕೋಟಿ ಮಾತ್ರ

**ಬೆಂಗಳೂರು, ಆ.31–** ರಾಜ್ಯದಲ್ಲಿ ದಿನದಿಂದ ದಿನಕ್ಕೆ ಸೈಬರ್ ವಂಚನೆಯ ಜಾಲ ವಿಸ್ತರಿಸುತ್ತಿದ್ದು, ಕೇವಲ ಏಳು ತಿಂಗಳ ಅವಧಿಯಲ್ಲಿ ಕರ್ನಾಟಕದ ಜನರು ಬರೋಬ್ಬರಿ 558 ಕೋಟಿ ಕಳೆದುಕೊಂಡಿದ್ದಾರೆ. ಆದರೆ, ಗೃಹ ಇಲಾಖೆಯ ಅಧಿಕೃತ ಅಂಕಿಅಂಶಗಳ ಪ್ರಕಾರ, ಸಂತ್ರಸ್ತರಿಗೆ ವಾಪಸ್ ದೊರೆತಿರುವುದು ಕೇವಲ ರೂ.1.9 ಕೋಟಿ ಮಾತ್ರ.

ಈ ವರ್ಷದ ಜನವರಿಯಿಂದ ಜುಲೈ ಅಂತ್ಯದವರೆಗೆ ಸೈಬರ್ ವಂಚನೆಯ ಮೂಲಕ ಜನರು ಕಳೆದುಕೊಂಡಿರುವ ರೂ558 ಕೋಟಿಯಲ್ಲಿ ಅಧಿಕಾರಿಗಳು ರೂ35.9 ಕೋಟಿಯನ್ನು ಮಧ್ಯಂತರ ಹಂತದಲ್ಲಿ ಸ್ಥಗಿತಗೊಳಿಸುವಲ್ಲಿ ಯಶಸ್ವಿ ಯಾಗಿದ್ದಾರೆ. ಆದರೆ, ಸಂತ್ರಸ್ತರಿಗೆ ವಾಸ್ತವಿಕವಾಗಿ ಮರಳಿರುವ ಮೊತ್ತವು ಸ್ಥಗಿತಗೊಳಿಸಿದ ಹಣದ ಕೇವಲ ಶೇ.5ರಷ್ಟಿದ್ದು, ಒಟ್ಟು ವಂಚನೆಯ ಮೊತ್ತದ ಶೇ.0.4ಕ್ಕಿಂತಲೂ ಕಡಿಮೆಯಾಗಿದೆ. ಇದು ಸೈಬರ್ ಅಪರಾಧ ನಿಯಂತ್ರಣ ಹಾಗೂ ವಂಚನೆಯಾದ ಹಣವನ್ನು ಮರುಪಡೆಯುವಲ್ಲಿ ಎದುರಾಗುತ್ತಿರುವ ಸವಾಲುಗಳನ್ನು ಎತ್ತಿ ತೋರಿಸಿದೆ.

ಸಿಬ್ಬಂದಿ ಕೊರತೆ ದೊಡ್ಡ ಸವಾಲು–ರಾಜ್ಯದ ಸೈಬರ್ ಅಪರಾಧ ಪೊಲೀಸ್ ವ್ಯವಸ್ಥೆಯು ತೀವ್ರ ಮಾನವಶಕ್ತಿ ಕೊರತೆಯನ್ನು ಎದುರಿಸುತ್ತಿರುವುದು ಹಣ ಮರುಪಡೆಯುವ ಪ್ರಕ್ರಿಯೆಯ ಮೇಲೂ ಪರಿಣಾಮ ಬೀರಿದೆ.

ಲಭ್ಯವಿರುವ ಮಾಹಿತಿಯ ಪ್ರಕಾರ, ಬೆಂಗಳೂರು ಆಯುಕ್ತರ ಕಚೇರಿ ಯಲ್ಲಿರುವ ಸೈಬರ್ ಅಪರಾಧ ಪೊಲೀಸ್ ಠಾಣೆಯೊಂದರಲ್ಲೇ 200 ಹುದ್ದೆಗಳು ಸೇರಿದಂತೆ ಒಟ್ಟು



320 ಹುದ್ದೆಗಳು ಇನ್ನೂ ಖಾಲಿ ಉಳಿದಿವೆ. ಸಿಬ್ಬಂದಿಯ ಭಾರಿ ಕೊರತೆಯಿಂದ ಪ್ರಕರಣಗಳ ತನಿಖೆಯ ವೇಗ ಹಾಗೂ ಗುಣಮಟ್ಟದ ಮೇಲೆ ನೇರ ಪರಿಣಾಮ ಬೀರುತ್ತಿದೆ.

ಪ್ರಕರಣಗಳು ಇಳಿಕೆ, ನಷ್ಟದ ಮೊತ್ತ ಏರಿಕೆ –ಹಿಂದಿನ ವರ್ಷಗಳಿಗೆ ಹೋಲಿಸಿದರೆ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ಇಳಿಕೆಯಾಗಿದ್ದರೂ, ಪ್ರತಿ ಪ್ರಕರಣದಲ್ಲಿ ವಂಚನೆಯಾಗುತ್ತಿರುವ ಸರಾಸರಿ ಮೊತ್ತ ಗಣನೀಯವಾಗಿ ಹೆಚ್ಚಾಗಿದೆ.

2024: ರಾಜ್ಯದಲ್ಲಿ 17,890 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿದ್ದು, ಒಟ್ಟು 1,841 ಕೋಟಿ ನಷ್ಟವಾಗಿತ್ತು. ಈ ಪೈಕಿ 257.8 ಕೋಟಿಯನ್ನು ಸ್ಥಗಿತಗೊಳಿಸಲಾಗಿದ್ದು, 183.6 ಕೋಟಿಯನ್ನು ಸಂತ್ರಸ್ತರಿಗೆ ವಾಪಸ್ ನೀಡಲಾಗಿತ್ತು.

**ಪ್ರತಿ ಪ್ರಕರಣದ ಸರಾಸರಿ ನಷ್ಟ 10.3 ಲಕ್ಷ. 2025:** ಒಟ್ಟು 10,703 ಪ್ರಕರಣಗಳು ವರದಿಯಾಗಿದ್ದು, 1,756.6 ಕೋಟಿ ನಷ್ಟ ಉಂಟಾಗಿತ್ತು. 158.5 ಕೋಟಿಯನ್ನು ಸ್ಥಗಿತಗೊಳಿಸಲಾಗಿದ್ದು, 76.7 ಕೋಟಿಯನ್ನು ಸಂತ್ರಸ್ತರಿಗೆ ಮರಳಿಸಲಾಗಿತ್ತು. ಪ್ರತಿ ಪ್ರಕರಣದ ಸರಾಸರಿ ನಷ್ಟ 16.4 ಲಕ್ಷ. ಇದರಿಂದ ಪ್ರಕರಣಗಳ ಸಂಖ್ಯೆ ಕಡಿಮೆಯಾಗುತ್ತಿದ್ದರೂ, ವಂಚಕರು ದೊಡ್ಡ ಮೊತ್ತದ ಹಣಕ್ಕೆ ಕನ್ನ ಹಾಕುತ್ತಿರುವುದು ಸ್ಪಷ್ಟವಾಗುತ್ತದೆ.

3 ವರ್ಷದಲ್ಲಿ 3,932 ಕೋಟಿ ವಂಚನೆ –2024ರಿಂದ 2026ರವರೆಗೆ ಕೇವಲ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಸೈಬರ್ ವಂಚನೆಯಿಂದ 3,932 ಕೋಟಿ ನಷ್ಟವಾಗಿದೆ. ಇದರಲ್ಲಿ ಇದುವರೆಗೆ ಕೇವಲ 262 ಕೋಟಿ ಮಾತ್ರ ಸಂತ್ರಸ್ತರಿಗೆ ಮರಳಿ ತಲುಪಿದೆ.

ಸೈಬರ್ ಅಪರಾಧ ಘಟಕಗಳು, ಪೊಲೀಸ್ ಇಲಾಖೆ, ಬ್ಯಾಂಕ್‌ಗಳು, ಹಣಕಾಸು ಸಂಸ್ಥೆಗಳು ಹಾಗೂ ಸಂಬಂಧಿತ ಇಲಾಖೆಗಳ ನಡುವಿನ ಸಮನ್ವಯವನ್ನು ಬಲಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಇತ್ತೀಚೆಗೆ ವಿಧಾನಸಭೆಗೆ ತಿಳಿಸಿದ್ದರು.

ತನಿಖಾಧಿಕಾರಿಗಳಿಗೆ ಅಗತ್ಯವಿರುವ ದಾಖಲೆಗಳನ್ನು ಹಣಕಾಸು ಸಂಸ್ಥೆಗಳು ಯಾವುದೇ ವಿಳಂಬವಿಲ್ಲದೆ ಒದಗಿಸುವಂತೆ ಮಾಡುವುದು ಸಮನ್ವಯದ ಪ್ರಮುಖ ಉದ್ದೇಶವಾಗಿದೆ.

ಜತೆಗೆ ಬಾಕಿ ಪ್ರಕರಣಗಳ ಪರಿಶೀಲನೆ, ವಿಳಂಬಕ್ಕೆ ಕಾರಣಗಳ ಪರಾಮರ್ಶೆ ಹಾಗೂ ದೀರ್ಘಕಾಲದಿಂದ ನನೆಗುದಿಗೆ ಬಿದ್ದಿರುವ ಪ್ರಕರಣ ಗಳಿಗೆ ಆದ್ಯತೆ ನೀಡಿ ನಿಯತಕಾಲಿಕವಾಗಿ ಪರಿಶೀಲನೆ ನಡೆಸುವುದಾಗಿ ಸರ್ಕಾರ ಭರವಸೆ ನೀಡಿದೆ.

ಸೈಬರ್ ವಂಚನೆಗೆ ಬಲಿಯಾಗುವವರ ಸಂಖ್ಯೆ ಹಾಗೂ ಕಳೆದುಕೊಳ್ಳುತ್ತಿರುವ ಹಣದ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸೈಬರ್ ಕಳ್ಳರ ವಿರುದ್ಧ ತ್ವರಿತ ಕ್ರಮ ಕೈಗೊಳ್ಳಲು ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಆಧುನೀಕರಿಸುವುದು ಹಾಗೂ ವಂಚನೆಯಾದ ಹಣವನ್ನು ಸಾಧ್ಯವಾದಷ್ಟು ಬೇಗ ಸ್ಥಗಿತಗೊಳಿಸಿ ಸಂತ್ರಸ್ತರಿಗೆ ಮರಳಿಸುವ ವ್ಯವಸ್ಥೆಯನ್ನು ಬಲ

## 39 ಅಕ್ರಮ ಬಾಂಗ್ಲಾದೇಶಿ ಪ್ರಜೆಗಳ ಬಂಧನ: ಗಡಿಪಾರಿಗೆ ಪಶ್ಚಿಮ ಬಂಗಾಳ ಗಡಿಗೆ ಕರೆದೊಯ್ದ ಪೊಲೀಸರು

**ಬೆಂಗಳೂರು, ಆ.31–** ನಗರದಲ್ಲಿ ಅಕ್ರಮವಾಗಿ ನೆಲೆಸಿದ್ದರೆಂದು ಗುರುತಿಸಲಾದ 39 ಬಾಂಗ್ಲಾದೇಶಿ ಪ್ರಜೆಗಳನ್ನು ಬೆಂಗಳೂರು ಪೊಲೀಸರು ಬಿಗಿ ಭದ್ರತೆಯಲ್ಲಿ ಗಡಿಪಾರು ಪ್ರಕ್ರಿಯೆಗಾಗಿ ಕರೆದೊಯ್ದಿದ್ದಾರೆ.

ಬೈಯಪ್ಪನಹಳ್ಳಿಯ ಎಸ್‌ಎಂವಿಟಿ ರೈಲ್ವೆ ಟರ್ಮಿನಲ್‌ನಿಂದ 31 ಮಂದಿಯನ್ನು ರೈಲಿನ ಮೂಲಕ ಹಾಗೂ 8 ಮಂದಿಯನ್ನು ವಿಮಾನದ ಮೂಲಕ ಪಶ್ಚಿಮ ಬಂಗಾಳದ ಗಡಿ ಭಾಗಕ್ಕೆ ಕರೆದೊಯ್ಯಲಾಗುತ್ತಿದೆ. ಅಲ್ಲಿ ಕಾನೂನು ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ ಬಳಿಕ ಬಾಂಗ್ಲಾದೇಶಕ್ಕೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಗರದಲ್ಲಿ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಹಾಗೂ ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಲು ಬೆಂಗಳೂರು ನಗರ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ವಿಶೇಷ ಕಾರ್ಯಾಚರಣೆಗಳು ಮುಂದುವರಿದಿವೆ. ವೀಸಾ ಅವಧಿ ಮುಗಿದಿದ್ದರೂ ಅಥವಾ ಯಾವುದೇ ಅಧಿಕೃತ ದಾಖಲೆಗಳಿಲ್ಲದೆ ನಗರದ ವಿವಿಧ ಪ್ರದೇಶಗಳಲ್ಲಿ ಕಾರ್ಮಿಕರು ಹಾಗೂ ಇತರ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದವರನ್ನು ಗುರಿಯಾಗಿಸಿಕೊಂಡು ಈ ಕಾರ್ಯಾಚರಣೆ ನಡೆಸಲಾಗಿದೆ.

ಬೆಂಗಳೂರಿನ ವಿವಿಧ 10 ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಅಕ್ರಮ ವಲಸಿಗರೆಂದು ಗುರುತಿಸಲಾದ 39 ಬಾಂಗ್ಲಾದೇಶಿ ಪ್ರಜೆಗಳನ್ನು ಬಂಧಿಸಲಾಗಿತ್ತು.20ಕ್ಕೂ ಹೆಚ್ಚು ಪೊಲೀಸರ ಕಾವಲು–ಬಂಧಿತರನ್ನು ಎಸ್‌ಎಂವಿಟಿ ರೈಲ್ವೆ ಟರ್ಮಿನಲ್‌ನಿಂದ ಪಶ್ಚಿಮ ಬಂಗಾಳದ ಮಾಲ್ಡಾ ಗಡಿ ಭಾಗದವರೆಗೆ 20ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯ ಕಾವಲಿನಲ್ಲಿ ಕರೆದೊಯ್ಯಲಾಗಿದೆ.

ಮಾಲ್ಡಾ ಗಡಿಭಾಗ ತಲುಪಿದ ಬಳಿಕ ಅಲ್ಲಿನ ಗಡಿ ಭದ್ರತಾ ಪಡೆ ಹಾಗೂ ವಲಸೆ (ಇಮಿಗ್ರೇಷನ್) ಅಧಿಕಾರಿಗಳ ಸಹಯೋಗದಲ್ಲಿ ಬಂಧಿತರ ರಾಷ್ಟ್ರೀಯತೆ ಮತ್ತು ದಾಖಲೆಗಳ ಪರಿಶೀಲನೆ ನಡೆಸಿ, ನಿಯಮಾನುಸಾರ ಬಾಂಗ್ಲಾದೇಶದ ಅಧಿಕಾರಿಗಳಿಗೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿದುಬಂದಿದೆ.

ಅಕ್ರಮ ವಲಸೆ ವಿರುದ್ಧ ಕಣ್ಗಾವಲು–ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧೆಡೆ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಿ ಗಡಿಪಾರು ಮಾಡಿರುವ ಹಲವು ಪ್ರಕರಣಗಳು ಈ ಹಿಂದೆಯೂ ನಡೆದಿವೆ.

ಎಲೆಕ್ಟ್ರಾನಿಕ್ ಸಿಟಿ, ಮಹದೇವಪುರ, ವರ್ತೂರು ಹಾಗೂ ರಾಮ ಮೂರ್ತಿನಗರ ಸೇರಿದಂತೆ ಹಲವು ಪ್ರದೇಶಗಳಲ್ಲಿ ಪೊಲೀಸರು ಪರಿಶೀಲನೆ ನಡೆಸಿ, ಅಕ್ರಮ ದಾಖಲೆಗಳನ್ನು ಹೊಂದಿರುವ ಆರೋಪದ ಮೇಲೆ ವಿದೇಶಿ ಪ್ರಜೆಗಳನ್ನು ವಶಕ್ಕೆ ಪಡೆದಿದ್ದರು. ಅಕ್ರಮ ವಲಸೆ ತಡೆಯಲು ರಾಜ್ಯದ ವಿವಿಧ ಭದ್ರತಾ ಏಜೆನ್ಸಿಗಳು ತನಿಖೆ ಹಾಗೂ ಕಣ್ಗಾವಲನ್ನು ಮುಂದುವರಿಸಿವೆ.

## ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮಹಿಳಾ ಘಟಕ ಕಾಲೇಜಿನ ವಾರ್ಷಿಕ ಸ್ವಾಗತ ಸಮಾರಂಭ

ವಿಶ್ವವಿದ್ಯಾನಿಲಯದ ಮಹಿಳಾ ಘಟಕ ಕಾಲೇಜು, ಮಲ್ಲೇಶ್ವರಂನಲ್ಲಿ 2026 –27ನೇ ಶೈಕ್ಷಣಿಕ ಸಾಲಿಗೆ ಹೊಸದಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ವನ್ನು ಶನಿವಾರ ಹಮ್ಮಿಕೊಳ್ಳಲಾಗಿತ್ತು.

ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ರಮೇಶ್ .ಬಿ. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಚಲನಚಿತ್ರ ನಿರ್ದೇಶಕ ಹಾಗೂ ನಟ ರಘುರಾಮ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.



ವಿಶ್ವವಿದ್ಯಾನಿಲಯದ ಡೀನರಾದ ಪ್ರೊ. ಜ್ಯೋತಿ ವೆಂಕಟೇಶ್ ಹಾಗೂ ರೋಟರಿ ಬೆಂಗಳೂರು ಪಶ್ಚಿಮ ವಿಭಾಗದ ಅಧ್ಯಕ್ಷ ಡಾ. ರಾಜೇಶ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲೆ ಡಾ.ಹೇಮಾಮಾಲಿನಿ ಅತಿಥಿಗಳನ್ನು ಸ್ವಾಗತಿಸಿದರು. ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ನಟ ರಘುರಾಮ್, ಆತ್ಮವಿಶ್ವಾಸ, ಪರಿಶ್ರಮ ಮತ್ತು ದೊಡ್ಡ ಕನಸುಗಳನ್ನು ಕಾಣುವ ಮಹತ್ವವನ್ನು ಕುರಿತು ವಿವರಿಸಿದರು.

ಪ್ರೊ.ಜ್ಯೋತಿ ವೆಂಕಟೇಶ್, ಜೀವನದ ಎಲ್ಲಾ ಕ್ಷೇತ್ರಗಳಲ್ಲಿಯೂ ಶ್ರೇಷ್ಠತೆಯನ್ನು ಸಾಧಿಸುವಂತೆ ವಿದ್ಯಾರ್ಥಿಗಳಿಗೆ ಪ್ರೇರೇಪಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರೊ.ರಮೇಶ್. ಬಿ. ವಿದ್ಯಾರ್ಥಿನಿಯರಿಗೆ ಶೈಕ್ಷಣಿಕ ಹಾಗೂ ವೃತ್ತಿ ಅವಕಾಶಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯ ಹೊಸ ಕೋರ್ಸುಗಳನ್ನು ಪರಿಚಯಿಸುತ್ತಿದೆ ಎಂದು ತಿಳಿಸಿದರು. ವಿದ್ಯಾರ್ಥಿನಿಯರು ಕಲಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಂಡು ಕಾಲೇಜು ಜೀವನದ ಪ್ರತಿಯೊಂದು ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಅವರು ಸಲಹೆಯಿತ್ತರು. ಕಾರ್ಯಕ್ರಮದ ಅಂಗವಾಗಿ ನಾಟಕ ಮತ್ತು ನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಗಳನ್ನು ಆಯೋಜಿಸಲಾಗಿತ್ತು. ಉಪನ್ಯಾಸಕಿ


ಬರಪೀಡಿತ ಪ್ರದೇಶಗಳ ರೈತರನ್ನು ಬೆಂಬಲಿಸುವಂತೆ ಒತ್ತಾಯಿಸಿ ಸೋಮವಾರ ಕೋಲಾರ ಬಳಿ ರೈತರು ನೀರಿನ ಟ್ಯಾಂಕ್ ಹಿಡಿದು ಪ್ರತಿಭಟನೆ ನಡೆಸಿದರು.

# ಕಲಬುರಗಿ ಮಹಾನಗರ ಪಾಲಿಕೆ ಮತ್ತೆ ಕೈವಶ, ಮೇಯರ್ ಅಜ್ಮಲ್ ಗೋಲಾ– ಉಪಮೇಯರ್ ಫರ್ಹಾನ್ ಖುಸ್ರೋ ಆಯ್ಕೆ

**ಕಲಬುರಗಿ, ಆ. 31:** ಮಹಾನಗರ ಪಾಲಿಕೆಯಲ್ಲಿ ಸ್ಪಷ್ಟ ಬಹುಮತ ಹೊಂದಿರುವ ಆಡಳಿತ ಪಕ್ಷ ಕಾಂಗ್ರೆಸ್ ಪಕ್ಷವು ಇಂದಿಲ್ಲಿ ಜರುಗಿದ 24ನೇ ಅವಧಿಯ ಮೇಯರ್ ಹಾಗೂ ಉಪ ಮೇಯರ್ ಚುನಾವಣೆಯಲ್ಲಿ ಮತ್ತೊಮ್ಮೆ ಪಾಲಿಕೆಯ ಆಡಳಿತದ ಚುಕ್ಕಾಣಿ ಹಿಡಿದಿದೆ.

ಕಾಂಗ್ರೆಸ್ ಪಕ್ಷದ ಪಾಲಿಕೆ ಸದಸ್ಯ ಅಜ್ಮಲ್ ಅಹಮದ್ ಗೋಳಾ ಅವರು ನೂತನ ಮೇಯರ್ ಆಗಿ ಹಾಗೂ ಫರ್ಹಾನಾಜ್ ಖುಸ್ರೋ ಜಹಗೀರ್ದಾರ್ ಅವರು ಉಪ ಮೇಯರ್ ಆಗಿ ಆಯ್ಕೆಯಾದರು. ಮೇಯರ್ ಸ್ಥಾನಕ್ಕೆ ನಗರದ ವಾರ್ಡ್ ಸಂಖ್ಯೆ 21ರ ಸದಸ್ಯ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಶೇಕ್ ಅಜಮಲ್ ಅಹ್ಮದ್ ಗೋಲಾ ಮತ್ತು ವಾರ್ಡ್ ಸಂ.38ರ ಸದಸ್ಯ ಬಿಜೆಪಿ ಪಕ್ಷದ ಗುರುರಾಜ್ ಹಾಗೂ ವಾರ್ಡ್ ಸಂ.30ರ ಸದಸ್ಯ ಜನತಾದಳ (ಜಾತ್ಯಾತೀತ) ಪಕ್ಷದ ಅಲೀಮುದ್ದಿನ್ ಪಟೇಲ್ ಅವರು ಮೇಯರ್ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದರು. ನಂತರ ಜರುಗಿದ ಚುನಾವಣೆಯಲ್ಲಿ ಶೇಕ್ ಅಜಮಲ್ ಅಹ್ಮದ್ ಗೋಲಾ ಪರವಾಗಿ 35 ಜನ,




ಗುರುರಾಜ್ ಪರವಾಗಿ 29 ಜನ ಹಾಗೂ ಅಲೀಮುದ್ದಿನ್ ಪಟೇಲ್ ಪರವಾಗಿ 3 ಜನ ಸದಸ್ಯರು ಕೈ ಎತ್ತುವ ಮೂಲಕ ತಮ್ಮ ಮತ ಚಲಾಯಿಸಿದರು. ಹೆಚ್ಚಿನ ಮತ ಪಡೆದ ಶೇಕ್ ಅಜಮಲ್ ಅಹ್ಮದ್ ಗೋಲಾ ಅವರನ್ನು ಚುನಾವಣಾಧಿಕಾರಿಗಳು ಜಯಶಾಲಿ ಎಂದು ಘೋಷಿಸಿದರು.

ಅದೇ ರೀತಿ ಉಪ ಮೇಯರ್ ಸ್ಥಾನಕ್ಕೆ ವಾರ್ಡ್ ಸಂ.20ರ ಸದಸ್ಯೆ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಸದಸ್ಯೆ ಫರ್ಹಾನಾಜ್ ಖುಸ್ರೋ ಜಾಗಿರದಾರ್ ಮತ್ತು ವಾರ್ಡ್ ಸಂ.29ರ ಸದಸ್ಯೆ ಭಾರತೀಯ ಜನತಾ ಪಕ್ಷದ ಮೇಘನಾ ಕಳಸ್ಕರ್ ನಾಮಪತ್ರ ಸಲ್ಲಿಸಿದರು. ಫರ್ಹಾನಾಜ್ ಖುಸ್ರೋ ಜಾಗಿರದಾರ್ ಪರವಾಗಿ 35, ಮೇಘನಾ ಕಳಸ್ಕರ್ ಪರವಾಗಿ 29 ಜನ ಕೈ ಎತ್ತುವ ಮೂಲ ಮತ ಚಲಾವನೆ ಮಾಡಿದ್ದಯಿರಿಂದ ಫರ್ಹಾನಾಜ್ ಖುಸ್ರೋ ಜಾಗಿರದಾರ್ ಅವರನ್ನು ಉಪ ಮೇಯರ್ ಹುದ್ದೆಗೆ ಚುನಾಯಿತರಾಗಿದ್ದಾರೆಂದು ಘೋಷಿಸಲಾಯಿತು.

ನಂತರ ನೂತನ ಮೇಯರ್ ಶೈಕ್ ಅಜ್ಮಲ್ ಅಹ್ಮದ್ ಗೋಲಾ ಮತ್ತು ಉಪ ಮೇಯರ್ ಫರ್ಹಾನಾಜ್ (ಫರ್ಹಾ ಖುಸ್ರೂ ಜಾಗೀರದಾರ) ಅವರಿಗೆ ಚುನಾವಣಾಧಿಕಾರಿ ಜಹೀರಾ ನಸ್ರೀಂ ಅವರು ಹೂಗುಚ್ಛ ನೀಡಿ ಶುಭ ಕೋರಿದರು.

ಗೋಲಾ– ಪಾಲಿಕೆಯ ನೂತನ ಮಹಾಪೌರರಾಗಿ ಆಯ್ಕೆಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶೈಕ್ ಅಜ್ಮಲ್ ಅಹ್ಮದ್ ಗೋಲಾ ಅವರು, ಪ್ರಸ್ತುತ ಬರದ ಛಾಯೆ ಕಾರಣ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿದ್ದು, ಇದಕ್ಕೆ ತಾವು ಪ್ರಥಮಾದ್ಯತೆ ನೀಡಲಾಗುವುದು. 24 ಗಂಟೆ ನಿರಂತರ ಕುಡಿಯುವ ನೀರಿನ ಯೋಜನೆಗೆ ವೇಗ ಹೆಚ್ಚಿಸಲಾಗುವುದು. ಕಸ ವಿಲೇವಾರಿ ಸಹ ನಮ್ಮ ಮುಂದಿದೆ. ಸರ್ಕಾರಿ ಆಸ್ತಿ ಅತಿಕ್ರಮಣ ಮತ್ತು ಪದಾಚಾರಿ ಮಾರ್ಗ ಅತಿಕ್ರಮಣ ಸಹ ತೆರವುಗೊಳಿಸಲಾಗುವುದು. ಕರ ಸಂಗ್ರಹಣೆ ಮಾಡಿ ಮೂಲಸೌಕರ್ಯಕ್ಕೆ ಹಣ ವಿನಿಯೋಗಿಸಲಾಗುವುದು ಎಂದ ಅವರು, ಎಲ್ಲ ಸಮಸ್ಯೆಗಳನ್ನು ಒಮ್ಮೆಲೆ ಬಗೆಹರಿಸಲು ಅಸಾಧ್ಯ. ಸಮಸ್ಯೆಗಳ ಆದ್ಯತಾ ಪಟ್ಟಿ ಮಾಡಿಕೊಂಡು ಹಂತ ಹಂತವಾಗಿ ಬಗೆಹರಿಸುವ ಕೆಲಸ ಮಾಡಲಾಗುವುದು ಎಂದರು.

# ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ನೌಕರರ ಆಗ್ರಹ




**ಬೀದರ್, ಆ. 31:** ಐದು ದಿನಗಳ ಕೆಲಸದ ಬ್ಯಾಂಕಿಂಗ್ ವ್ಯವಸ್ಥೆಯನ್ನು ಕೂಡಲೇ ಜಾರಿಗೊಳಿಸಬೇಕು. ಪಿಎಲ್‌ಐ ಯೋಜನೆಯಲ್ಲಿನ ಏಕಪಕ್ಷೀಯ ಹಾಗೂ ತಾರತಮ್ಯ ಕ್ರಮಗಳನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿ ಬ್ಯಾಂಕ್ ನೌಕರರು ನಗರದ ಶಿವಾಜಿ ವೃತ್ತದ ಬಳಿವಿರುವ ಎಸ್‌ಬಿಐ ಎದುರು ಪ್ರತಿಭಟನೆ ನಡೆಸಿದರು.

ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೌಕರರು ಕೇಂದ್ರ ಸರ್ಕಾರ ಹಾಗೂ ಬ್ಯಾಂಕಿಂಗ್ ವ್ಯವಸ್ಥೆ ಸರಿಪಡಿಸುವಂತೆ ಘೋಷಣೆಗಳನ್ನು ಕೂಗಿದರು.

ಬ್ಯಾಂಕ್ ಯೂನಿಯನ್ ಉಪಪ್ರಧಾನ ಕಾರ್ಯದರ್ಶಿ ರಮೇಶ್ ಶಿಂಧೆ ಮಾತನಾಡಿ, ಬ್ಯಾಂಕ್ ನೌಕರರ ಬಹುಕಾಲದ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಳಂಬ ಮಾಡಬಾರದು. ಈಗಾಗಲೇ ನೀಡಿರುವ ಭರವಸೆಗಳನ್ನು ಗೌರವಿಸಿ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆಯನ್ನು ಜಾರಿಗೊಳಿಸಬೇಕು. ಪಿಎಲ್‌ಐ ಕುರಿತು ಕಾರ್ಮಿಕ ಸಂಘಟನೆಗಳೊಂದಿಗೆ ಮಾತುಕತೆ ನಡೆಸಬೇಕು. ಪಿಂಚಣಿ ಪರಿಷ್ಕರಣೆ ಜಾರಿಗೊಳಿಸಬೇಕು. ಎಲ್ಲ ಬ್ಯಾಂಕ್ ನೌಕರರಿಗೆ ಏಕರೂಪದ ಡಿಎ ನೀಡಬೇಕು. ಎನ್‌ಪಿಎಸ್‌ನಿಂದ ಯುಪಿಎಸ್‌ಗೆ ಬದಲಾವಣೆಗೆ ಅವಕಾಶ ಕಲ್ಪಿಸಬೇಕು' ಎಂದು ಬೇಡಿಕೆ ಮಂಡಿಸಿದರು.

ನಮ್ಮ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಫಲವಾದರೆ ಸೆ.11ರಂದು ಅಖಿಲ ಭಾರತ ಮುಷ್ಕರ ನಡೆಸಲಾಗುವುದು. ಇದಾದ ಬಳಿಕವೂ ಸಮಸ್ಯೆಗಳಿಗೆ ಪರಿಹಾರ ದೊರೆಯದಿದ್ದರೆ ಸೆ.28 ರಿಂದ 30ರವರೆಗೆ ಮತ್ತೊಂದು ಅಖಿಲ ಭಾರತ ಮುಷ್ಕರ ನಡೆಸುವುದಾಗಿ ಎಚ್ಚರಿಕೆ ನೀಡಿದರು.

## ಮಂಡ್ಯ ಜೈಲಿನಲ್ಲಿ ಲಂಚಾವತಾರ ಹಾಗೂ ಕೈದಿಗೆ ರಾಜಾತಿಥ್ಯ

# ಕಾರಾಗೃಹ ಅಧೀಕ್ಷಕಿ ಶಾಂತಮ್ಮ ವರ್ಗಾವಣೆ ಡಿಜಿಪಿ ಅಲೋಕ್ ಕುಮಾರ್ ಆದೇಶ

**ಮಂಡ್ಯ, ಆ.31:** ವಿಚಾರಣಾಧೀನ ಕೈದಿಗೆ ರಾಜಾತಿಥ್ಯ ನೀಡಿದ ಆರೋಪದ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾ ಕಾರಾಗೃಹದ ಅಧೀಕ್ಷಕಿ ಎಂ. ಶಾಂತಮ್ಮ ಅವರನ್ನು ಎತ್ತಂಗಡಿ ಮಾಡಲಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.ಮಂಡ್ಯ ಜೈಲಿನ ಸುಮಾರು 80 ಕೈದಿಗಳ ಸಹಿ ಇದೆ ಎನ್ನಲಾದ ಮನವಿಯೊಂದು ಬೆಳಕಿಗೆ ಬಂದ ಕೆಲವೇ ದಿನಗಳಲ್ಲಿ ಈ ಬೆಳವಣಿಗೆ ನಡೆದಿದೆ; ಈ ಮನವಿಯಲ್ಲಿ ಜೈಲಿನೊಳಗಿನ ವಿವಿಧ ಸೌಲಭ್ಯಗಳಿಗಾಗಿ ಹಣ ವಸೂಲಿ ಮಾಡಲಾಗುವ ದರಗಳ ಪಟ್ಟಿಯೂ ಇದೆ ಎಂದು ಆರೋಪಿಸಲಾಗಿದೆ.

ಕೈದಿಗಳ ಸಹಿಗಳು, ಹೆಬ್ಬೆರಳ ಗುರುತುಗಳು ಮತ್ತು ವಿಚಾರಣಾಧೀನ ಕೈದಿಗಳ ಸಂಖ್ಯೆಗಳೊಂದಿಗೆ ಮಾಧ್ಯಮಗಳಿಗೆ ಕಳುಹಿಸಲಾದ ಈ ಅರ್ಜಿಯಲ್ಲಿ, ವಿವಿಧ ಸೌಲಭ್ಯಗಳಿಗಾಗಿ ನಿಗದಿಪಡಿಸಲಾದ ದರಗಳ ಪಟ್ಟಿ ಹಾಗೂ ನಿರ್ದಿಷ್ಟ ಸೆಲ್ಗಳಿಗೆ ಸಂಬಂಧಿಸಿದ ಮಾಸಿಕ ಪಾವತಿಗಳ ವಿವರಗಳು ಇದ್ದವು ಎಂದು ವರದಿಯಾಗಿದೆ.ಕರ್ನಾಟಕದ ಪೊಲೀಸ್ ಮಹಾನಿರ್ದೇಶಕ



(ಕಾರಾಗೃಹಗಳು) ಅಲೋಕ್ ಕುಮಾರ್ ಅವರು, ಕರ್ತವ್ಯ ಲೋಪದ ಕಾರಣದಿಂದ ಶಾಂತಮ್ಮ ಅವರನ್ನು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ವರ್ಗಾಯಿಸಲಾಗಿದೆ ಎಂದು ತಿಳಿಸಿದ್ದಾರೆ;

ಆದರೆ ಈ ಕುರಿತು ಹೆಚ್ಚಿನ ವಿವರಗಳನ್ನು ನೀಡಿಲ್ಲ.ಭೂ ಅಕ್ರಮ ಪ್ರಕರಣದಲ್ಲಿ ಜೈಲು ಸೇರಿದ್ದ ವಿಚಾರಣಾಧೀನ ಕೈದಿಗೆ ಯಾವುದೇ ಕಾಯಿಲೆ ಇಲ್ಲದಿದ್ದರೂ ಬೆನ್ನು ನೋವಿನ ನೆಪವೊಡ್ಡಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಬಗ್ಗೆ ನ್ಯಾಯಾಲಯಕ್ಕೆ ಯಾವುದೇ ಮಾಹಿತಿ ನೀಡಿರಲಿಲ್ಲ. ಆಸ್ಪತ್ರೆಯಲ್ಲಿದ್ದ ಕೈದಿ ಹುಸೇನ್ ತನ್ನ ಗೆಳತಿಯೊಂದಿಗೆ ರಾಜಾತಿಥ್ಯ ಅನುಭವಿಸುತ್ತಿದ್ದ ವಿಚಾರ ಬೆಳಕಿಗೆ ಬಂದಿತ್ತು.ಮಂಡ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಸಿ. ಚಂದ್ರಶೇಖರ್ ಆಸ್ಪತ್ರೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಈ ಅಕ್ರಮ ಬಯಲಾಗಿತ್ತು. ನ್ಯಾಯಾಲಯಕ್ಕೆ ಮಾಹಿತಿ ನೀಡದೆ ಕೈದಿಯನ್ನು ಆಸ್ಪತ್ರೆಗೆ ಕಳುಹಿಸಿದ್ದಕ್ಕೆ ನ್ಯಾಯಾಧೀಶರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು. ಅಲ್ಲದೆ, ಸ್ಥಳದಲ್ಲೇ ಜೈಲು ಅಧೀಕ್ಷಕಿ ಶಾಂತಮ್ಮ ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ತಂಡವು ಆಗಸ್ಟ್ 22 ರಂದು MIMS ಆಸ್ಪತ್ರೆಯನ್ನು ಪರಿಶೀಲಿಸಿತ್ತು.

ಅಧಿಕೃತ ಮೂಲಗಳ ಪ್ರಕಾರ, ಪರಿಶೀಲನೆಯ ವೇಳೆ, ಭ್ರಷ್ಟಾಚಾರ ಪ್ರಕರಣವೊಂದರಲ್ಲಿ ವಿಚಾರಣಾಧೀನ ಕೈದಿಯಾಗಿರುವ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಯ ಸಮೀಕ್ಷಾ ಮೇಲ್ವಿಚಾರಕ ಮಹಮದ್ ಹುಸೇನ್ ಅವರು ಇಲ್ಲಿನ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆಸ್ಪತ್ರೆಗೆ ದಾಖಲಾಗಿರುವುದು ಮತ್ತು ಆಗಸ್ಟ್ 21 ರಿಂದ ಅಲ್ಲಿ ಚಿಕಿತ್ಸೆ ಪಡೆಯುತ್ತಿರುವುದು ಕಂಡುಬಂದಿದೆ.

# ಎಚ್‌ಡಿಕೆ 'ದಾಖಲೆ ಬಾಂಬ್'ಗೆ ಸಚಿವ ಎಚ್.ಸಿ. ಬಾಲಕೃಷ್ಣ ವ್ಯಂಗ್ಯ

**ಮೈಸೂರು, ಆ.31–** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ದಾಖಲೆ ಬಿಡುಗಡೆ ಹೇಳಿಕೆಗೆ ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆ ಹಾಗೂ ಗ್ರಾಮೀಣ ತೆರಿಗೆ ವಸೂಲಿ ವಿಷಯವಾಗಿ ಸಚಿವ ಎಚ್.ಸಿ. ಬಾಲಕೃಷ್ಣ ಅವರು ಮೈಸೂರಿನಲ್ಲಿ ಸರಣಿ ಪ್ರತಿಕ್ರಿಯೆ ನೀಡಿದ್ದಾರೆ. ಇನ್ನು 10 ದಿನಗಳಲ್ಲಿ ದಾಖಲೆ ಬಿಡುಗಡೆ ಮಾಡುತ್ತೇನೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ವ್ಯಂಗ್ಯವಾಡಿದ ಅವರು, "ಕುಮಾರಸ್ವಾಮಿ ಅವರ ಚಿಂತನೆಗಳು ಆಗಾಗ ಬದಲಾಗುತ್ತಿರುತ್ತವೆ. ಅವರ ತಲೆಯಲ್ಲಿ ಏನು ಓಡುತ್ತಿದೆ ಎಂಬುದು ನಮಗೇನು ಗೊತ್ತು? ಅವರು ಮೇಕೆದಾಟು ಯೋಜನೆಗೆ ಕೇಂದ್ರದಿಂದ ಒಪ್ಪಿಗೆ ಕೊಡಿಸುವ 'ಅಭಿವೃದ್ಧಿ ಬಾಂಬ್' ಸಿಡಿಸಬಹುದು ಎಂಬ ಕುತೂಹಲ ನಮಗೂ ಇದೆ. ಅವರನ್ನು ಕರ್ನಾಟಕದ ಅಭಿವೃದ್ಧಿಗಾಗಿ ಕೇಂದ್ರ ಸಚಿವರನ್ನಾಗಿ ಮಾಡಲಾಗಿದ್ದು, ಅವರು ಶುಭ ಸುದ್ದಿಯನ್ನೇ ನೀಡಲಿ," ಎಂದರು. ವಿರೋಧ ಪಕ್ಷದ ಕೆಲಸವೇ ವಿರೋಧ ಮಾಡುವುದು, ಹೀಗಾಗಿ ಪಾದಯಾತ್ರೆ ಮಾಡುತ್ತಿದ್ದಾರೆ ಮಾಡಲಿ. ಮಾಜಿ ಸಚಿವ ನಾಗೇಂದ್ರ ಅವರು ಅಪರಾಧಿಯಲ್ಲ, ಕೇವಲ ಆರೋಪಿ.



ಈ ಪ್ರಕರಣದಲ್ಲಿ ನ್ಯಾಯಾಲಯವೇ ಅಂತಿಮ ತೀರ್ಮಾನ ಕೈಗೊಳ್ಳಲಿದೆ.

ನಾಗೇಂದ್ರ ರಾಜೀನಾಮೆಯಿಂದ ಸರ್ಕಾರಕ್ಕೆ ಯಾವುದೇ ಮುಜುಗರ ವಾಗಿಲ್ಲ, ರಾಜಕಾರಣದಲ್ಲಿ ಸಣ್ಣಪುಟ್ಟ ವ್ಯತ್ಯಾಸಗಳು ಸಹಜ," ಎಂದು ಸಮರ್ಥಿಸಿಕೊಂಡರು.ಇನ್ನು ಗ್ರಾಮೀಣ ಪ್ರದೇಶದ ತೆರಿಗೆ ಸಮಸ್ಯೆ ಕುರಿತು ಮಾತನಾಡಿದ ಅವರು, "ರಾಜ್ಯದ ಶೇ. 40ರಷ್ಟು ಜನರು ಗ್ರಾಮೀಣ ಭಾಗದಲ್ಲಿದ್ದಾರೆ. ತೆರಿಗೆ ವಸೂಲಿಗೂ ಮುನ್ನ ಜನರಿಗೆ ಮೂಲಭೂತ ಸೌಕರ್ಯ ಒದಗಿಸುವುದು ಅಗತ್ಯ. ಸಿಎಂ ಅವರು ಎಲ್ಲಾ ವಿಭಾಗಗಳ ವರದಿ ಕೇಳಿದ್ದು, ನಾನೂ ಹೊಸದಾಗಿ ಅಧಿಕಾರ ವಹಿಸಿಕೊಂಡಿರುವುದರಿಂದ ಎಲ್ಲವನ್ನೂ ಪರಿಶೀಲಿಸುತ್ತಿದ್ದೇನೆ. ಒಂದೇ ಬಾರಿಗೆ ಸರಿಮಾಡಲು ಸಾಧ್ಯವಿಲ್ಲ, ಹಂತಹಂತವಾಗಿ ಸರಿಪಡಿಸಲಾಗುವುದು" ಎಂದು ಸ್ಪಷ್ಟಪಡಿಸಿದರು.

# ರೈತರ ನಿರೀಕ್ಷೆ ಹುಸಿಮಾಡಿದ ಬರಗಾಲ

**ರಾಯಚೂರು, ಆ. 31:** ಕೇಂದ್ರ ಸರ್ಕಾರ ನಿಗದಿಪಡಿಸಿದ ಮಾನದಂಡಗಳ ಆಧಾರದ ಮೇಲೆ ರಾಜ್ಯ ಸರ್ಕಾರ ಎರಡು ತಾಲ್ಲೂಕನ್ನು ತೀವ್ರ ಬರ ಪೀಡಿತ ಹಾಗೂ ಇನ್ನೆರಡು ತಾಲ್ಲೂಕುಗಳನ್ನು ಸಾಧಾರಣ ಬರಪೀಡಿತ ಎಂದು ಘೋಷಣೆ ಮಾಡಿದೆ. ಉಳಿದ ಮೂರು ತಾಲ್ಲೂಕಿನಲ್ಲೂ ಬರ ಪರಿಸ್ಥಿತಿ ಇದ್ದರೂ ಸರ್ಕಾರ ಗಂಭೀರವಾಗಿ ಪರಿಗಣಿಸದೇ ಇರುವುದು ರೈತರಲ್ಲಿ ಅಸಮಾಧಾನ ಮೂಡಿಸಿದೆ.

ಜಿಲ್ಲೆಯ ದೇವದುರ್ಗ, ಮಸ್ಕಿ ತಾಲ್ಲೂಕಿನಲ್ಲಿ ತೀವ್ರ ಬರ ಹಾಗೂ ಲಿಂಗಸುಗೂರು, ರಾಯಚೂರು ತಾಲ್ಲೂಕಿನಲ್ಲಿ ಸಾಧಾರಣ ಬರ ಇದೆ. ಬರ ಪರಿಸ್ಥಿತಿ ಎದುರಿಸುತ್ತಿರುವ ಮಾನ್ವಿ, ಸಿರವಾರ ಹಾಗೂ ಸಿಂಧನೂರು ತಾಲ್ಲೂಕನ್ನು ಬರಪೀಡಿತ ಎಂದು ಘೋಷಣೆ ಮಾಡಿಲ್ಲ. ಹೀಗಾಗಿ ಈ ಮೂರು ತಾಲ್ಲೂಕುಗಳ ರೈತರ ನಿರೀಕ್ಷೆಯೂ ಹುಸಿಯಾಗಿದೆ.

ಕೇಂದ್ರ ಸರ್ಕಾರ ಸೂಚಿಸಿದ ಬರ ನಿರ್ಧಾರಕ ಮಾನದಂಡಗಳ ಆಧಾರದಲ್ಲಿ ಕರ್ನಾಟಕ ರಾಜ್ಯ ಪ್ರಕೃತಿ ವಿಕೋಪ ಮೇಲ್ವಿಚಾರಣಾ ಕೇಂದ್ರ (ಕೆಎಸ್‌ಎನ್‌ಡಿಎಂಸಿ)ವು ರಾಜ್ಯದಲ್ಲಿ ಜೂನ್ 1ರಿಂದ ಅಗಸ್ಟ್ 12ರವರೆಗೆ ಬರಪರಿಸ್ಥಿತಿ ಕುರಿತು ನಡೆಸಿದ ವೈಜ್ಞಾನಿಕ ಮೌಲ್ಯಮಾಪನದ ಆಧಾರ ಮೇಲೆ ಬರಪೀಡಿತ ತಾಲ್ಲೂಕುಗಳ ಘೋಷಣೆ ಮಾಡಲಾಗಿದೆ. ಆದರೆ, ಸ್ಥಳೀಯ ವಾಸ್ತವ ಅಂಶಗಳನ್ನೇ ಪರಿಗಣನೆಗೆ ತೆಗೆದುಕೊಂಡಿಲ್ಲ.

ಒಣಗಿದ ಬೆಳೆ: ರಾಯಚೂರು ತಾಲ್ಲೂಕಿನ ಒಟ್ಟಾರೆ ಬಿತ್ತನೆ ಪ್ರದೇಶದ ಪೈಕಿ ಶೇ 30ರಷ್ಟು ಕ್ಷೇತ್ರದಲ್ಲಿ ಶೇ 70ರಷ್ಟು ಬೆಳೆ ನಷ್ಟವಾಗಿದೆ. ಶೇ 33ರಿಂದ ಶೇ 50ರಷ್ಟು ಪ್ರದೇಶದಲ್ಲಿ ಶೇ 30ರಷ್ಟು ಬೆಳೆ ನಷ್ಟವಾಗಿದೆ. ಶೇ 50ರಷ್ಟು ಪ್ರದೇಶದಲ್ಲಿ ಶೇ 70ರಷ್ಟು ಬೆಳೆ ಹಾನಿಯಾಗಿದೆ.



ರಾಯಚೂರು ತಾಲ್ಲೂಕಿನ ದೇವಸುಗೂರಲ್ಲಿ ಉತ್ತಮ ಮಳೆಯಾದರೆ, ಕಲ್ಮಲಾದಲ್ಲಿ ನಿರೀಕ್ಷೆಯಷ್ಟು ಮಳೆಯೇ ಆಗಿಲ್ಲ.

ತಾಲ್ಲೂಕಿನ ನಾಲ್ಕು ಹೋಬಳಿಗಳಲ್ಲಿ ವಾಡಿಕೆಯಷ್ಟು ಮಳೆ ಸುರಿದಿಲ್ಲ. ಒಂದು ವೇಳೆ ಸರ್ಕಾರ ಪರಿಹಾರ ಘೋಷಣೆ ಮಾಡಿದರೆ, ತೀವ್ರ ಹಾಗೂ ಸಾಧಾರಣ ಬರ ಇದ್ದರೂ ಎಲ್ಲ ರೈತರಿಗೆ ಸಮಾನಂತರವಾದ ಪರಿಹಾರ ಬರಲಿದೆ ಎನ್ನುತ್ತಾರೆ ಕೃಷಿ ಇಲಾಖೆಯ ಅಧಿಕಾರಿಗಳು.

ಮಳೆ ಕೊರತೆಯಿಂದಾಗಿ ರಾಯಚೂರು, ದೇವದುರ್ಗ ಹಾಗೂ ಮಾನ್ವಿ ತಾಲ್ಲೂಕಿನಲ್ಲಿ ಹತ್ತಿ, ಸಿಂಧನೂರು, ಲಿಂಗಸುಗೂರು ತಾಲ್ಲೂಕಿನಲ್ಲಿ ಸೂರ್ಯಕಾಂತಿ ಹಾಗೂ ತೊಗರಿ ಬೆಳೆ ಒಣಗಿದೆ.

ದೇವದುರ್ಗ, ಮಸ್ಕಿಯ ಶೇ 10ರಷ್ಟು ಪ್ರದೇಶದಲ್ಲಿ ಶೇ 33ರಷ್ಟು ಬೆಳೆ ಹಾನಿಯಾಗಿದೆ. ಶೇ 50 ರಷ್ಟು ಪ್ರದೇಶದಲ್ಲಿ ಶೇ 90ರಷ್ಟು ಬೆಳೆ ನಷ್ಟವಾಗಿದೆ. ಹೀಗಾಗಿ ಈ ತಾಲ್ಲೂಕುಗಳಲ್ಲಿ ತೀವ್ರ ಬರವೆಂದು ಪರಿಗಣಿಸಲಾಗಿದೆ.

ಮಳೆಯೂ ಇಲ್ಲ, ನಾಲೆ ನೀರು ಇಲ್ಲ: ಸಿರವಾರ ತಾಲ್ಲೂಕಿನಾದ್ಯಂತ ಬರ ತಾಂಡವವಾಡುತ್ತಿದೆ. ಬಯಲು ಸೀಮೆ ಪ್ರದೇಶದಲ್ಲಿ ಮಳೆ ಇಲ್ಲದೆ, ಬಿತ್ತನೆಯಾದ ಬೆಳೆಗಳು ನಾಶವಾದರೆ, ತುಂಗಭದ್ರಾ ಎಡದಂಡೆ ನಾಲೆಯ ನೀರು ನಂಬಿದ್ದ ರೈತರು ಭತ್ತದ ಬೆಳೆಗೆ ಅಗತ್ಯ ಸಿದ್ಧತೆ ಮಾಡಿಕೊಂಡಿದ್ದರು. ಅಧಿಕಾರಿಗಳ ನಿರ್ಲಕ್ಷ್ಯದಿಂ ದಾಗಿ ನಾಲೆಗಳಿಗೆ ನೀರು ಬಾರದೆ ಸಂಕಷ್ಟ ಎದುರಿಸುತ್ತಿದ್ದಾರೆ.

ಬಯಲು ಸೀಮೆಯಲ್ಲಿ ಮಳೆಯನ್ನು ನಂಬಿ ಬಿತ್ತನೆ ಮಾಡಿದ ತೊಗರಿ, ಹತ್ತಿ, ಸೂರ್ಯಕಾಂತಿ ಬೆಳೆಗಳು ನೀರಿಲ್ಲದೇ ನಾಶವಾಗಿವೆ. ಸರ್ಕಾರ ಸಿರವಾರ ತಾಲ್ಲೂಕು ಬರಪೀಡಿತ ಎಂದು ಘೋಷಿಸದ ಕಾರಣ ರೈತರು ಸಂಕಷ್ಟ ಎದುರಿಸುವಂತಾಗಿದೆ.

20 ದಿನ ಕಳೆದರೂ ತುಂಗಭದ್ರಾ ಎಡದಂಡೆ ನಾಲೆಯ ಕೊನೆ ಭಾಗಕ್ಕೆ ನೀರು ಬಂದಿಲ್ಲ. ಮುಂದೆ ಬೆಳೆ ಬೆಳೆಯೋದೆ ಕಷ್ಟ. ಸಿರವಾರ ತಾಲ್ಲೂಕನ್ನು ಬರ ಪೀಡಿತ ತಾಲ್ಲೂಕು ಘೋಷಣೆಯಿಂದ ದೂರವಿಟ್ಟು ಅನ್ಯಾಯ ಮಾಡಲಾಗಿದೆ ಎಂದು ಭಾಗ್ಯನಗರ ಕ್ಯಾಂಪ್ ರೈತ ರೇವಣಸಿದ್ದಪ್ಪ ಬೇಸರ ವ್ಯಕ್ತಪಡಿಸುತ್ತಾರೆ.

## ವಿಜಯಪುರ ಅಂಚೆ ವಿಭಾಗದಲ್ಲಿ 34 ಗ್ರಾಮೀಣ ಡಾಕ್

# ಸೇವಕ ಹುದ್ದೆಗಳಿಗೆ ಅರ್ಜಿ ಆಹ್ವಾನ

**ವಿಜಯಪುರ,ಆ.31** ಭಾರತೀಯ ಅಂಚೆ ಇಲಾಖೆಯ ವಿಜಯಪುರ ಅಂಚೆ ವಿಭಾಗದ ವ್ಯಾಪ್ತಿಯ ವಿವಿಧ ಅಂಚೆ ಕಚೇರಿಗಳಲ್ಲಿ ಖಾಲಿ ಇರುವ ಒಟ್ಟು 34 ಗ್ರಾಮೀಣ ಡಾಕ್ ಸೇವಕ (ಜಿಡಿಎಸ್), ಶಾಖಾ ಅಂಚೆ ಪಾಲಕ (ಬಿಪಿಎಂ) ಹಾಗೂ ಸಹಾಯಕ ಅಂಚೆ ಪಾಲಕ (ಎಬಿಪಿಎಂ) ಹುದ್ದೆಗಳ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ನೇಮಕಾತಿಯು 10 ನೇ ತರಗತಿಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ನಡೆಯಲಿದ್ದು, ಅರ್ಹ ಅಭ್ಯರ್ಥಿಗಳಿಗೆ ಆಗಸ್ಟ್ 31 ರಿಂದ ಸೆಪ್ಟೆಂಬರ್ 19 ರವರೆಗೆ ಆನ್‌ಲೈನ್ ಒನ್ ಟೈಮ್ ನೋಂದಣಿ (ಓಟಿಆರ್) ಮಾಡಲು ಅವಕಾಶ ನೀಡಲಾಗಿದೆ.

ಅದರಂತೆ, ಸೆಪ್ಟೆಂಬರ್ 2 ರಿಂದ ಸೆಪ್ಟೆಂಬರ್ 21 ರವರೆಗೆ ಆನ್‌ಲೈನ್ ಅರ್ಜಿ ಸಲ್ಲಿಕೆ ಮತ್ತು ಶುಲ್ಕ ಪಾವತಿಸಲು ಸಮಯಾವಕಾಶ ಕಲ್ಪಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಭಾರತೀಯ ಅಂಚೆ ಇಲಾಖೆಯ ಅಧಿಕೃತ ಜಿಡಿಎಸ್ ನೇಮಕಾತಿ ಪೋರ್ಟಲ್ indiapost.gov.in/gdson lineengagement ಮೂಲಕವೇ ಅರ್ಜಿ ಸಲ್ಲಿಸಬಹುದು ಎಂದು ವಿಜಯಪುರ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಎಂ. ಎಸ್. ತೊಗರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ 2 ರಂದು ಶಿಶಿಕ್ಷು ಮೇಳಕ್ಕೆ ಆಹ್ವಾನ

**ವಿಜಯಪುರ,ಆ.31** ನಗರದ ಬಿ.ಡಿ.ಪಿ.ಎಚ್.ಡಬ್ಲ್ಯೂ.ಎ. ಐಟಿಐ ಖೇಡ ಕಾಲೇಜು ಆವರಣದಲ್ಲಿ ಸೆ.2ರಂದು ಬೆಳಗ್ಗೆ 9 ರಿಂದ ಸಂಜೆ 5ರವರೆಗೆ ಶಿಶಿಕ್ಷು ಮೇಳ ಆಯೋಜಿಸಲಾಗಿದೆ. ಐಟಿಐ ಸೇರಿದಂತೆ ವಿವಿಧ ತರಬೇತಿ ಪೂರ್ಣಗೊಳಿಸಿರುವ ಆಸಕ್ತ ಅಭ್ಯರ್ಥಿಗಳು Apprenticeship India ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಮೇಳದಲ್ಲಿ ಭಾಗವಹಿಸಬಹುದು.

ಉದ್ದಿಮೆದಾರರು ಸಹ Establish ment Registration ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಮೇಳದ ಪ್ರಯೋಜನ ಮಡೆದುಕೊಳ್ಳಬಹುದಾಗಿದೆ.

# ಬಳ್ಳಾರಿ ಜಿಲ್ಲಾ ಕುರುಬರ ಸಂಘಕ್ಕೆ ಅನಂತಪುರ ಜಿಲ್ಲಾ ಅಧ್ಯಕ್ಷ: ರಾಜಹಂಸ ಸ್ನೇಹಪೂರ್ವಕ ಭೇಟಿ

**ಬಳ್ಳಾರಿ ಆ 31.** ಭಾನುವಾರ ಅನಂತಪುರ ಜಿಲ್ಲೆಯ ಕುರುಬ ಸಂಘದ ಅಧ್ಯಕ್ಷರು, ರಾಜಹಂಸ ಶ್ರೀನಿವಾಸುಲು ಬಳ್ಳಾರಿ ನಲ್ಲಿ ಒಂದು ಮದುವೆ ಕಾರ್ಯಕ್ರಮಕ್ಕೆ ಆಗಮಿಸಿದ್ದರು.

ಅದೇ ಸಮಯದಲ್ಲಿ, ಬಳ್ಳಾರಿ ಜಿಲ್ಲಾ ಕುರಬ ಸಂಘ ಸಂಗೊಳ್ಳಿ ರಾಯಣ್ಣ ವೇದಿಕೆಯ ಆಹ್ವಾನ ಮೇರೆಗೆ ಸಂಘಕ್ಕೆ ಭೇಟಿ ನೀಡಿದ್ದರು.ಈ ಸಂದರ್ಭದಲ್ಲಿ ಆತ್ಮೀಯವಾಗಿ ಸನ್ಮಾನ ಮಾಡಲಾಯಿತು.

ಇದೇ ಸಂದರ್ಭದಲ್ಲಿ, ಮಾತನಾಡಿದ, ರಾಜಹಂಸ ಶ್ರೀನಿವಾಸ್, ಅವರು ರಾಯಲಸೀಮೆ, ತೆಲಂಗಾಣ ದಲ್ಲಿ ನಮ್ಮ ಸಮಾಜ ಕಡಮೆ ಇದೇ, ಕರ್ನಾಟಕ ದಲ್ಲಿ ದೊಡ್ಡ ಮಟ್ಟದಲ್ಲಿ,ಇದ್ದಾರೆ, ನೀವು ನಾವು ಯಲ್ಲರೂ ಅಣ್ಣ ತಮ್ಮಂದಿರುಯಂತೆ, ಇರೋಣ, ಆಂಧ್ರಪ್ರದೇಶ ದಿಂದ



ಕರ್ನಾಟಕ ಕ್ಕೆ ಬಂದು ಇಲ್ಲಿಯೇ ಸೆಟಲ್ ಆಗಿದ್ದ ನಮ್ಮ ಸಮಾಜದವರು ಇದ್ದಾರೆ. ನಮ್ಮ ಸಮಾಜದ ವಿದ್ಯಾರ್ಥಿಗಳಿಗೆ,ಉನ್ನತ ಮಟ್ಟದಲ್ಲಿ, ವಿದ್ಯಾಭ್ಯಾಸ ಮಾಡಲು ತುಂಬಾ ಸಹಕಾರ ಮಾಡುತ್ತ ಇದ್ದೇವೆ, ನಮ್ಮ ಸಮಾಜದವರಿಗೆ ಸಮಸ್ಯೆಗಳು ಬಂದರೆ ಅವರ ಪರವಾಗಿ ನಮ್ಮ ಸಮಾಜ ನಿಲ್ಲುತ್ತೆ ಅಂದರು.

ಈ ಸಂದರ್ಭದಲ್ಲಿ ಅನಂತಪುರಂನ ಸಮಾಜದ ಜನರಲ್ ಸೆಕ್ರೆಟರಿ, ಕೆ ಸಿ ನಾಗಣ್ಣ, ನಾರಾಯಣ, ವೆಂಕಟೇಶಲು, ಓಬುಳಪತಿ, ಮತ್ತಿರರು, ಬಳ್ಳಾರಿ ಕುರುಬ ಸಂಘದ, ಸೆಕ್ರೆಟರಿ ಮೋಹನ್, ಸಂಗೊಳ್ಳಿ ರಾಯಣ್ಣ ಸಂಘದ ಅಧ್ಯಕ್ಷರು ಬಟ್ಟೆ ಎರ್ರಿಸ್ವಾಮಿ, ಹಿರಿಯ ಪತ್ರಕರ್ತರು ಕೆ. ಬಜಾರಪ್ಪ, ಇನ್ನು ನೂರಾರು ಸಂಘದ ಸದಸ್ಯರು ಮುಖಂಡರು ಉಪಸ್ಥಿತರಿದ್ದರು.

# ಪಾರಂಪರಿಕ ಕಲೆಗಳ ಪ್ರದರ್ಶನವೇ ಸಾಂಸ್ಕೃತಿಕ ಸೊಬಗು - ಸೌರಭ

**ಬೀದರ,ಆ 31.**ಒಂದು ಜನಾಂಗದ ಉಸಿರೇ ಸಂಸ್ಕೃತಿ. ಪಾರಂಪರಿಕ ಕಲೆಗಳ ಪ್ರದರ್ಶನವೇ ಸಾಂಸ್ಕೃತಿಕ ಸೊಬಗು ಮತ್ತು ಸೌರಭ.

ಈ ಕಲೆಗಳ ಜೀವಂತಿಕೆಯಲ್ಲಿ ನಮ ಸಂಸ್ಕೃತಿ ಅಡಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಹೇಳಿದರು.

ಅವರು ಬೀದರಿನಲ್ಲಿ ಸೋಮವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು 2026–27ನೇ ಸಾಲಿನ ಸಾಮಾನ್ಯ ಯೋಜನೆಯಡಿ ಆಯೋಜಿಸಿದ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಲಾವಿದರು ಹಾಡುಗಳ ಆಯ್ಕೆಯಲ್ಲಿ ವಿಶೇಷ ಕಾಳಜಿ ವಹಿಸಬೇಕು. ಜಾನಪದ ಹಾಡುಗಳನ್ನು ಸಂಶೋಧನಾತ್ಮಕವಾಗಿ ಪರಿಶೀಲಿಸಬೇಕೆಂದರು.

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಮಾತನಾಡಿ, ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವಲ್ಲಿ




ಗ್ರಾಮೀಣ ಪ್ರದೇಶದ ಎಲ್ಲ ಕಲಾವಿದರ ಪಾತ್ರ ಮಹತ್ತರವಾಗಿದೆ. ಕಲೆಗಳು ನಶಿಸಿ ಹೋಗದಂತೆ ಕಲಾವಿದರು ತಮ್ಮ ಮಕ್ಕಳಿಗೆ ಕಲೆಗಳನ್ನು ಮುಂದುವರಿಸಿಕೊಂಡು ಹೋಗುವಂತೆ ತಿಳಿ ಹೇಳಬೇಕೆಂದರು.

ನಂತರ ಜರುಗಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು. ಮೈ ಝುಲ್ಲೆನಿಸುವ ಬಾಲರಾಜ್ ಮತ್ತು ತಂಡದವರ ತಮಟೆ ವಾದನ, ಶಂಭುಲಿಂಗ ವಾಲ್ದೊಡ್ಡಿ ಜಾನಪದ ಗೀತೆ, ದಿಲೀಪ್ ಕಾಡವಾದ ಅವರ ಸುಗಮ ಸಂಗೀತ, ಜಗನ್ನಾಥ್ ನಾನಕೇರಿಯವರ ಸಮಧುರ ಶಾಸ್ತ್ರೀಯ ಸಂಗೀತ ಎಲ್ಲರ ಹೃನ್ಮನ ಗೆದ್ದಿತು. ಉಷಾ ಪ್ರಭಾಕರ್ ಮತ್ತು ತಂಡದವರ ಸಮೂಹ ನೃತ್ಯ ಹಾಗೂ ಲಲಿತಾ ಪವಾರ್ ತಂಡದ ಲಂಬಾಣಿ ನೃತ್ಯ, ಮಲ್ಲಿಕಾರ್ಜುನ್ ಶಾಸ್ತ್ರಿ ಐನಾಪುರ ಅವರ ಕಥಾ ಕೀರ್ತನ, ಸಾಯಿಬಣ್ಣ ಭಜಂತ್ರಿ ಅವರ ಚಿಟ್ಟೆ ಮೇಳ ಮತ್ತು ಕೊನೆಯಲ್ಲಿ ವಿಜಯಕುಮಾರ ಸೋನಾರೆ ಮತ್ತು ತಂಡದವರ ಐಕ್ಯತೆ ನಾಟಕ ಪ್ರದರ್ಶನದ ಪ್ರಸ್ತುತಿ ಜನಮನ ಸೂರೆಗೊಂಡವು.

ಈ ಸಂದರ್ಭದಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ, ಸಂಜೀವಕುಮಾರ ಅತಿವಾಳೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿವೃತ್ತ ಉಪನಿರ್ದೇಶಕ ಜಿ.ಚಂದ್ರಕಾಂತ, ಉಷಾ ಪ್ರಭಾಕರ್, ಪತ್ರಕರ್ತ ವಿಶ್ವ ವಡಗಾಂವ್ ಸಮಾರಂಭದಲ್ಲಿ ಭಾಗವಹಿಸಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಸ್ವಾಗತಿಸುತ್ತ ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು. ದೇವಿದಾಸ ಜೋಶಿ ಕಾರ್ಯಕ್ರಮ ನಡೆಸಿ ಕೊಟ್ಟರು.

# ಸಮೃದ್ಧಿಯಾಗಿ ಮಳೆ,ಬೆಳೆಯಾಗಿ ರೈತರನ್ನು ಸುಖ ಶಾಂತಿಯಿಂದಿರಲು ಸೋಮಶೇಖರರೆಡ್ಡಿ ಪ್ರಾರ್ಥನೆ



**ಬಳ್ಳಾರಿ ಆ 31.** ಬಳ್ಳಾರಿ ನಗರದ ಸತ್ಯನಾರಾಯಣ ಪೇಟೆಯಲ್ಲಿ ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 355ನೇ ಆರಾಧನಾ ಮಹೋತ್ಸವದ ಅಂಗವಾಗಿ ನಡೆದ ಪವಿತ್ರ ರಾಯರ ತೇರು ಉತ್ಸವದಲ್ಲಿ ಬಳ್ಳಾರಿಯ ಮಾಜಿ ನಗರ ಶಾಸಕರಾದ ಗಾಲಿ ಸೋಮಶೇಖರ ರೆಡ್ಡಿ ಅವರು ಭಕ್ತಿಭಾವದಿಂದ ಭಾಗವಹಿಸಿ, ರಾಯರ ತೇರನ್ನು ಎಳೆದು ಗುರು ರಾಯರ ದಿವ್ಯ ಕೃಪೆಗೆ ಪಾತ್ರರಾದರು.

ನಂತರ ನಾಡಿನ ಒಳಿತಿಗಾಗಿ, ಜನರ, ರೈತರಿಗೆ ಮಳೆ ಬಳೆ

ಸಂಪೂರ್ಣವಾಗಿ ನೀಡಿ ಸುಖ ಶಾಂತಿಯಿಂದ ಜೀವನಸಾಗಿಸಬೇಕೆಂದು ದೇವರನ್ನು ಪ್ರಾರ್ಥಿಸಿದರು.

### ಬರಪೀಡಿತ ಪಟ್ಟಿಯಲ್ಲಿ ಕಲಬುರಗಿ ಕೈಬಿಟ್ಟಿರುವ ವಿಚಾರ

## ವಾಸ್ತವಾಂಶ ಆಧರಿಸಿ ಶೀಘ್ರ ನಿರ್ಧಾರ, ರೈತರ ಹಿತವೇ ಸರ್ಕಾರದ ಆದ್ಯತೆ: ಡಾ. ಅಜಯ್ ಸಿಂಗ್

**ಕಲಬುರಗಿ, ಆ. 31:** ಬರಪೀಡಿತ ಜಿಲ್ಲೆಗಳ ಪಟ್ಟಿಗೆ ಕಲಬುರಗಿ ಜಿಲ್ಲೆಯನ್ನು ಸೇರ್ಪಡೆಗೊಳಿಸುವ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರ ಗಮನಕ್ಕೆ ಈಗಾಗಲೇ ತಂದಿದ್ದು, ಮಳೆ ಕೊರತೆ, ಬೆಳೆಹಾನಿ ಹಾಗೂ ಒಣ ಹವೆಯಂತಹ ವಾಸ್ತವಾಂಶಗಳನ್ನು ಆಧರಿಸಿ ಶೀಘ್ರ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ-ತಂತ್ರಜ್ಞಾನ ಸಚಿವ ಡಾ.ಅಜಯ್ ಸಿಂಗ್ ಹೇಳಿದರು.



ಜಿಲ್ಲೆಯ ಜೇವರ್ಗಿ ಹಾಗೂ ಯಡ್ರಾಮಿ ತಾಲ್ಲೂಕುಗಳ ವಿವಿಧ ಗ್ರಾಮಗಳಿಗೆ ಸಂಚರಿಸಿ ಮಳೆ ಕೊರತೆಯಿಂದ ಹಾನಿಗೀಡಾಗಿರುವ ಬೆಳೆ ಪರಿಶೀಲಿಸಿದರು. ಮಳೆ ಕೊರತೆಯಿಂದ ಹಾನಿಗೊಳಗಾಗಿರುವ ಹತ್ತಿ, ಹೆಸರು ಸೇರಿದಂತೆ ವಿವಿಧ ಬೆಳೆಗಳು ಹಾನಿಗೊಳಗಾಗಿರುವದನ್ನು ಕಂಡ ಸಚಿವರು, ರೈತರೊಂದಿಗೆ ನೇರವಾಗಿ ಮಾತುಕತೆ ನಡೆಸಿ ಬೆಳೆ ನಷ್ಟ, ಕೃಷಿ ಚಟುವಟಿಕೆಗಳ ಮೇಲಿನ ಪರಿಣಾಮ ಹಾಗೂ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಬರಪೀಡಿತ ಎಂದು ಘೋಷಿಸುವುದು ಕೇವಲ ಮಳೆ ಕೊರತೆಯೊಂದನ್ನೇ ಆಧರಿಸಿ ಕೈಗೊಳ್ಳುವ ನಿರ್ಧಾರವಲ್ಲ. ಲಭ್ಯವಿರುವ ಅಧಿಕೃತ ಅಂಕಿ-ಅಂಶಗಳು ಹಾಗೂ ಕ್ಷೇತ್ರಮಟ್ಟದ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಲಿದೆ. ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ತಮ್ಮದು. ರಾಜ್ಯ ಸರ್ಕಾರ ಮೊದಲ ಹಂತದಲ್ಲಿ ಬರಪೀಡಿತ ಎಂದು ಅಧಿಕೃತವಾಗಿ ಘೋಷಿಸಿರುವ 101 ತಾಲ್ಲೂಕುಗಳ ಪಟ್ಟಿಯಲ್ಲಿ ಕಲಬುರಗಿ ಜಿಲ್ಲೆಯ ಯಾವುದೇ ತಾಲ್ಲೂಕು ಸ್ಥಾನ ಪಡೆಯದಿರುವುದರಿಂದ ಜಿಲ್ಲೆಯ ರೈತ ಸಮುದಾಯದಲ್ಲಿ ಉಂಟಾಗಿರುವ ಅಸಮಾಧಾನ ತಮ್ಮ ಗಮನಕ್ಕೂ ಬಂದಿದೆ. ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗ ದಂತೆ ಅಗತ್ಯ ಕ್ರಮ ಕೈಗೊಳ್ಳುವುದು ಸರ್ಕಾರದ ಬದ್ಧತೆಯಾಗಿದೆ ಎಂದರು.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜೇವರ್ಗಿ ಹಾಗೂ ಯಡ್ರಾಮಿ ತಾಲ್ಲೂಕುಗಳಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಆಗಸ್ಟ್ 27ರ ಮಳೆ ವರದಿ ಪ್ರಕಾರ, ಜೂನ್ 1ರಿಂದ ಆಗಸ್ಟ್ 29ರವರೆಗೆ ಜೇವರ್ಗಿ ತಾಲ್ಲೂಕಿ ನಲ್ಲಿ 393.7 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿದ್ದು, 184.9 ಮಿ.ಮೀ. ಮಾತ್ರ ಮಳೆಯಾಗಿದೆ. ಇದರಿಂದ ಶೇ.53ರಷ್ಟು ಮಳೆ ಕೊರತೆ ದಾಖಲಾಗಿದೆ. ಯಡ್ರಾಮಿ ತಾಲ್ಲೂಕಿನಲ್ಲಿ ಇದೇ ಅವಧಿಯಲ್ಲಿ 327 ಮಿ.ಮೀ. ವಾಡಿಕೆ ಮಳೆಯ ಬದಲಿಗೆ 201 ಮಿ.ಮೀ. ಮಳೆಯಾಗಿದ್ದು, ಶೇ.39ರಷ್ಟು ಕೊರತೆ ಉಂಟಾಗಿದೆ. ಆಗಸ್ಟ್ 1ರಿಂದ 29ರವರೆಗೆ ಜೇವರ್ಗಿ ತಾಲ್ಲೂಕಿನಲ್ಲಿ 144.3 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿದ್ದರೂ ಕೇವಲ 35.2 ಮಿ.ಮೀ. ಮಳೆಯಾಗಿದೆ. ಪರಿಣಾಮ ಶೇ.76ರಷ್ಟು ಮಳೆ ಕೊರತೆ ದಾಖಲಾಗಿದೆ. ಯಡ್ರಾಮಿಯಲ್ಲಿ 117.2 ಮಿ.ಮೀ. ವಾಡಿಕೆ ಮಳೆಯ ಬದಲಿಗೆ 36.6 ಮಿ.ಮೀ. ಮಳೆ ಯಾಗಿದ್ದು, ಶೇ.69ರಷ್ಟು ಕೊರತೆ ಕಂಡುಬಂದಿದೆ.

ಹೋಬಳಿವಾರು ಅಂಕಿ-ಅಂಶಗಳ ಪ್ರಕಾರ ಜೇವರ್ಗಿ ಹೋಬಳಿಯಲ್ಲಿ ಶೇ.52, ಅಂದೋಲಾ ಹೋಬಳಿಯಲ್ಲಿ ಶೇ.58 ಹಾಗೂ ನೆಲೋಗಿ ಹೋಬಳಿಯಲ್ಲಿ ಶೇ.45ರಷ್ಟು ಮಳೆ ಕೊರತೆ ದಾಖಲಾಗಿದೆ. ಯಡ್ರಾಮಿ

> ಜೇವರ್ಗಿ ಮತ್ತು ಯಡ್ರಾಮಿ ರೈತರು ಆತಂಕಪಡುವ ಅಗತ್ಯವಿಲ್ಲ. ಮಳೆ ಪರಿಸ್ಥಿತಿ ಹಾಗೂ ಬೆಳೆ ಸ್ಥಿತಿಯನ್ನು ನಿರಂತರವಾಗಿ ಗಮನಿಸಲಾಗುತ್ತಿದೆ. ರೈತರಿಗೆ ಅಗತ್ಯವಿರುವ ನೆರವು ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು. ಸರ್ಕಾರದ ಮುಂದೆ ರೈತರ ಹಿತವೇ ಮೊದಲ ಆದ್ಯತೆಯಾಗಿದೆ.
> – ಡಾ. ಅಜಯ್ ಧರ್ಮಸಿಂಗ್

ಹೋಬಳಿಯಲ್ಲಿ ಶೇ.44 ಹಾಗೂ ಇಜೇರಿ ಹೋಬಳಿಯಲ್ಲಿ ಶೇ.37ರಷ್ಟು ಕೊರತೆ ಕಂಡುಬಂದಿದೆ. ನಿರಂತರ ಮಳೆ ಕೊರತೆಯಿಂದ ಹತ್ತಿ, ಹೆಸರು ಸೇರಿದಂತೆ ವಿವಿಧ ಬೆಳೆಗಳ ಬೆಳವಣಿಗೆಗೆ ತೀವ್ರ ಹೊಡೆತ ಬೀಳುವ ಸಾಧ್ಯತೆ ಇದ್ದು, ರೈತರು ಸಂಕಷ್ಟ ಎದುರಿಸುವಂತಾಗಿದೆ.

580 ಕೋಟಿಗೂ ಅಧಿಕ ಬೆಳೆ ವಿಮೆ: ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಜೇವರ್ಗಿ ಹಾಗೂ ಯಡ್ರಾಮಿ ತಾಲ್ಲೂಕುಗಳ ರೈತರು ಉತ್ತಮ ಪ್ರಮಾಣದಲ್ಲಿ ಬೆಳೆ ವಿಮೆಗೆ ನೋಂದಣಿ ಮಾಡಿಕೊಂಡಿದ್ದಾರೆ. 2026-27ನೇ ಸಾಲಿನ ಖಾರಿಫ್ ಬೆಳೆ ವಿಮೆ ನೋಂದಣಿ ಮಾಹಿತಿಯಂತೆ ಜೇವರ್ಗಿಯಲ್ಲಿ 42,769 ಅರ್ಜಿಗಳು ಸಲ್ಲಿಕೆಯಾಗಿದ್ದು, 58,642.82 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿದೆ. ಈ ಪ್ರದೇಶಕ್ಕೆ ?347.44 ಕೋಟಿ ವಿಮಾ ಮೊತ್ತ ನಿಗದಿಯಾಗಿದೆ.

ಯಡ್ರಾಮಿಯಲ್ಲಿ 28,572 ಅರ್ಜಿಗಳು ಸಲ್ಲಿಕೆಯಾಗಿದ್ದು, 38,943.12 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿದೆ. ಒಟ್ಟು ರೂ. 232.76 ಕೋಟಿ ವಿಮಾ ಮೊತ್ತ ನಿಗದಿಯಾಗಿದ್ದು, ರೈತರ ಪಾಲು ?5.92 ಕೋಟಿಯಾಗಿದೆ. ಬರ ಘೋಷಣೆ ಕುರಿತು ಶಾಸಕರು ಮುಖ್ಯಮಂತ್ರಿ ಜಿಲ್ಲಾ ಉಸ್ತುವಾರಿ ಸಚಿವರನ್ನು ಭೇಟಿ ಮಾಡಿ ವರದಿ ಸಲ್ಲಿಸಿದ್ದಾರೆ. ಮಳೆ, ಬಿತ್ತನೆ ಹಾಗೂ ಬೆಳೆ ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸಲಾಗುತ್ತಿದ್ದು, ರೈತರ ಹಿತಾಸಕ್ತಿಗೆ ಅನುಗುಣ ವಾಗಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.



ಗಣೇಶ ಚೌತಿ ಸಮೀಪಿಸುತ್ತಿದ್ದಂತೆ ಬೆಳಗಾವಿಯಲ್ಲಿ ಮಾರಾಟಕ್ಕೆ ಸಿದ್ಧವಾಗಿರುವ ಗಣೇಶ ಮೂರ್ತಿಗಳು

## ಕೆ.ಪಿ.ಎಸ್.ಸಿ. ಮಧ್ಯವರ್ತಿ ಜೊತೆ ಖಂಡ್ರೆ ಸಂಬಂಧ ಏನು: ಭಗವಂತ ಖೂಬಾ

**ಬೀದರ್, ಆ.31:**ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರದ ದುರಾಡಳಿತದಿಂದ ಕೆ.ಪಿ.ಎಸ್.ಸಿ (ಕರ್ನಾಟಕ ಪಬ್ಲಿಕ್ ಸರ್ವಿಸ್ ಕಮಿಷನ್) ಎನ್ನುವ ಬದಲಾಗಿ ಕಳ್ಳರ ಪಬ್ಲಿಕ್ ಸರ್ವಿಸ್ ಕಮಿಷನ್ ಆಗಿ ಮಾರ್ಪಟ್ಟಿದೆಯಾ ಎಂಬುದು ಈ ಕೆ.ಪಿ.ಎಸ್.ಸಿ ಹಗರಣ ದಿಂದ ಅನುಮಾನ ಮೂಡುತ್ತಿದೆ.





ವಿದ್ಯಾರ್ಥಿಗಳು ಹಗಲು ರಾತ್ರಿ ಎನ್ನದೆ ಪರಿಶ್ರಮ ಪಟ್ಟು ಪರೀಕ್ಷೆಗೆ ಸಿದ್ಧವಾಗುತ್ತಾರೆ ಆದರೆ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಸರಿಯಾಗಿ ಪರೀಕ್ಷೆ ನಡೆಸದೆ, ಭ್ರಷ್ಟರ ಕೈಗೆ ಅಧಿಕಾರ ಕೊಟ್ಟು, ಮಧ್ಯವರ್ತಿಗಳ ಜೊತೆ ಶಾಮೀಲಾಗಿ ವಿದ್ಯಾರ್ಥಿಗಳ ಭವಿಷ್ಯದ ಆಟವಾಡುತ್ತಿದೆ. ಈ ಹಗರಣದ ಸಂಪೂರ್ಣ ಹೊಣೆ ರಾಜ್ಯ ಸರ್ಕಾರ ಹೊರಬೇಕು, ಮುಖ್ಯಮಂತ್ರಿ, ಗೃಹಮಂತ್ರಿಗಳು ರಾಜೀನಾಮೆ ನೀಡಬೇಕೆಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಆಗ್ರಹಿಸಿದ್ದಾರೆ.

ಈ ಮಧ್ಯವರ್ತಿಗೆ ಪಂಚಾಯತ ರಾಜ್ ಇಲಾಖೆಯ ಮಂತ್ರಿ ಈಶ್ವರ ಖಂಡ್ರೆ ಅವರು ತನ್ನ ವಿಧಾನಸೌಧ ದಲ್ಲಿರುವ ತನ್ನ ಮಂತ್ರಿ ಕಚೇರಿಯ ಖಾಸಗಿ ಕೋಣೆ ಅಲ್ಲಿ ಬಸವರಾಜ ಅವರ ಬಾಯಿಗೆ ಸಿಹಿತಿನಿಸುವ ಫೋಟೊ ಕೂಡ ಮಾಧ್ಯಮಗಳಲ್ಲಿ, ಸಾಮಾಜೀಕ ಜಾಲತಾಣಗಳಲ್ಲಿ ಬಿತ್ತರವಾಗಿವೆ, ಖಂಡ್ರೆ ಎಂದಿಗೂ ಯಾರೊಂದಿಗೂ ಇಷ್ಟೊಂದು ಪ್ರೀತಿಯಿಂದ ಇರುವುದು, ಬೀದರ ಜನತೆ, ರಾಜ್ಯದ ಜನತೆ ಇಲ್ಲಿಯವರೆಗೆ ನೋಡೆ ಇಲ್ಲಾ, ಅಂತಹದರಲ್ಲಿ ಈ ಮಧ್ಯವರ್ತಿ ಬಸವರಾಜ ಮೇಲೆ ಯಾಕಿಷ್ಟು ಪ್ರೀತಿ ಎಂಬುದು ಪ್ರತಿಯೊಬ್ಬರಿಗೂ ಕಾಡುತ್ತಿ ರುವ ಪ್ರಶ್ನೆಯಾಗಿದೆ.

ಖಂಡ್ರೆಯವರು ಅವನ ಜೊತೆ ಇಷ್ಟೊಂದು ನಿಕಟ ಸಂಬಂಧ ಹೊಂದಿರುವುದು ಯಾಕೆ? ಇದರ ಹಿಂದೆ ಯಾವ ಉದ್ದೇಶವಿದೆ? ಈ ಮಧ್ಯವರ್ತಿ ಜೊತೆಗೆ ಈಶ್ವರ ಖಂಡ್ರೆ ಪಾತ್ರ ಏನೆಂಬುದು ತನಿಖೆಯಾಗಬೇಕು ಮತ್ತು ಈಶ್ವರ ಖಂಡ್ರೆಯವರು ಕೂಡ ಇದರ ಬಗ್ಗೆ ಸ್ಪಷ್ಟನೆ ನೀಡಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಒತ್ತಾಯಿಸಿದ್ದಾರೆ.

ಈ ಮಧ್ಯವರ್ತಿ ಬಸವರಾಜ ಬಿ.ಜೆ.ಪಿ ಮುಖಂಡನೇ ಅಲ್ಲ, ಆತನು ನಮ್ಮ ಪಕ್ಷದ ಸಮಾನ್ಯ ಸದಸ್ಯತ್ವವು ಹೊಂದಿರುವುದಿಲ್ಲಾ, ಆತನಿಗೆ ಪಕ್ಷದಿಂದ ಯಾವುದೇ ಜವಾಬ್ದಾರಿಯೂ ನೀಡಿಲ್ಲ ಮತ್ತು ಆತ ನಮ್ಮ ನಮ್ಮ ಪಕ್ಷದಿಂದ ಯಾವುದೇ ಚುನಾವಣೆಗೂ ಸ್ಪರ್ಧಿಸಿರುವುದಿಲ್ಲಾ ಆದ್ದರಿಂದ ಇತನಿಗೂ, ಬಿ.ಜೆ.ಪಿ ಪಕ್ಷಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಭಗವಂತ ಖೂಬಾ ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿರುವ ವಿದ್ಯಾರ್ಥಿಗಳ ಮೇಲೆ ಈ ಸರ್ಕಾರಕ್ಕೆ ಕಾಳಜಿಯಿದ್ದರೆ, ನಿಜವಾಗಿಯೂ ವಿದ್ಯಾರ್ಥಿಗಳಿಗೆ ನ್ಯಾಯ ಕೊಡುವ ಮನಸ್ಸು ಈ ಸರ್ಕಾರಕ್ಕೆ ಇದ್ದರೆ, ಸರ್ಕಾರ ಪಕ್ಷಭೇದ ಮರೆತು, ಯಾರನ್ನು ಕಾಪಾಡುವ ಕುತಂತ್ರ ಮಾಡದೆ ತನಿಖೆ ನಡೆಸಬೇಕು, ಇಲ್ಲಿಯವರೆಗೆ ಇಂತಹ ಎಷ್ಟು ಅಕ್ರಮ ಹುದ್ದೆಗಳಾಗಿವೆ ಅವುಗಳೆಲ್ಲವೂ ಬಯಲಿಗೆಳೆಯಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಒತ್ತಾಯಿಸಿದ್ದಾರೆ.

## ವಿಜಯಪುರ ರಸ್ತೆ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆ

### ರಸ್ತೆ ಅಭಿವೃದ್ಧಿ ಕಾಮಗಾರಿಗೆ ಲೋಕೋಪಯೋಗಿ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರಿಂದ ಚಾಲನೆ

ವಿಜಯಪುರ, ಆ. 30 (ಕರ್ನಾಟಕ ವಾರ್ತೆ): ಉತ್ತಮ ರಸ್ತೆ ನಿರ್ಮಾಣದಿಂದ ನಗರದ ಅಭಿವೃದ್ಧಿಗೆ ವೇಗದ ಸಿಗುವುದರ ಜೊತೆಗೆ ಜನರ ಸುಗಮ ಸಂಚಾರಕ್ಕೆ ಮತ್ತಷ್ಟು ಅನುಕೂಲ ವಾಗುವುದರೊಂದಿಗೆ ಮಹತ್ವದ ಹೆಜ್ಜೆಯಾಗಿದೆ ಎಂದು ಲೋಕೋಪ ಯೋಗಿ ಇಲಾಖೆ ಸಚಿವರಾದ ಸತೀಶ ಜಾರಕಿಹೊಳಿ ಅವರು ಹೇಳಿದರು.



ನಗರದ ರಹಮಾನಿಯ ವೃತ್ತದಿಂದ ಕನ್ನಾನ ಫಂಕ್ಷನ್ ಹಾಲ್, ಬಾರಾಕೋಟ ತಾಂಡಾ ಮೂಲಕ ಜುಮನಾಳ, ಖತಿಜಾಪುರ ಕೂಡು ರಸ್ತೆ ನಿರ್ಮಾಣಕ್ಕೆ 5 ಕೋಟಿ ರೂ. ವೆಚ್ಚದಲ್ಲಿ ಹಾಗೂ ಅಥಣಿ ಮುಖ್ಯ ರಸ್ತೆಯಿಂದ ರಾಜಕುಮಾರ ಲೇಔಟ್ ಕೂಡು ರಸ್ತೆ 1.50 ಕೋಟಿ ವೆಚ್ಚದಲ್ಲಿ ಕೈಗೊಳ್ಳುತ್ತಿರುವ ರಸ್ತೆ ಕಾಮಗಾರಿಗಳಿಗೆ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರೊಂದಿಗೆ ಭಾನುವಾರ ಜಂಟಿಯಾಗಿ ವಿದ್ಯುಕ್ತ ಚಾಲನೆ ನೀಡಿ, ಮಾತನಾಡಿದ ಅವರು, ವಿಜಯಪುರದ ಸಮಗ್ರ ಅಭಿವೃದ್ಧಿಯ ಪಯಣ ನಿರಂತರವಾಗಿರಲಿದೆ ಎಂದರು.

ಈ ಅನುದಾನದಡಿ700 ಮೀ. ರಸ್ತೆ ಡಾಂಬರೀಕರಣ ಹಾಗೂ 185 ಮೀಟರ್ ಕಾಂಕ್ರೀಟ್ ರಸ್ತೆ ಮತ್ತು ಫೂಟ್ ಬ್ರಿಡ್ಜ್ ಸರ್ಮಿಸಲಾಗುವುದು ಎಂದು ಸಚಿವರು ತಿಳಿಸಿದರು.

ತೊರವಿ ಅತಾಲಟ್ಟಿಯಿಂದ ವಿಜಯಪುರ-ಅಥಣಿ ರಾಷ್ಟ್ರೀಯ ಹೆದ್ದಾರಿ 5488 ಸಂಪರ್ಕ ಕಲ್ಪಿಸುವ ಡಾಂಬರ್ ರಸ್ತೆ ಮೇಲ್ಮೈ ಹಾಳಾಗಿದ್ದು, 700 ಮೀ. ಉದ್ದಕ್ಕೂ ಎಸ್ ಡಿಬಿಸಿ ಹಾಗೂ 186 ಮೀ. ಉದ್ದದ ಆಂತರಿಕ ರಸ್ತೆಗೆ ಸಿಸಿ ರಸ್ತೆ ಸೇರಿಸಲಾಗುವುದು ಜೊತೆಗೆ ಮೈದಾನದಲ್ಲಿ ಪರ್ಸ್ ಅಳವಡಿಸಲಾಗುವುದು ಎಂದರು.

ತಿಕೋಟಾ ತಾಲೂಕಿನ ನವರಸಪುರ ತಾಜಪುರ ಜೋಡು ರಸ್ತೆಯ ಸುಧಾರಣೆ ಮಾಡಲಾಗುತ್ತಿದ್ದು, ವಿಜಯಪುರ ನಗರದ ತೋರವಿ ಅತಾಲಟ್ಟಿಯಿಂದ ವಿಜಯಪುರ-ಅಥಣಿ ರಾಷ್ಟ್ರೀಯ ಹೆದ್ದಾರಿ 548 ಬಿ ಯನ್ನು ಕಲ್ಪಿಸುವ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುವುದು. ಇದರಲ್ಲಿ ಕಾಲುಸಂಕ (ಫೂಟ್ ಬ್ರಿಡ್ಜ್) ರ್ಮಾಣ ಸೇರಿಸಲಾಗಿದೆ ಎಂದರು.

ಅಥಣಿ ಮುಖ್ಯ ರಸ್ತೆಯಿಂದ ರಾಜಕುಮಾರ ಲೇಔಟ್ ಮುಖ್ಯ ರಸ್ತೆ ,ಸುಪ್ರಿಂ ಮೆಡಿಕಲ್ ನಿಂದ ತೊರವಿ ಅತಾಲಟ್ಟಿ ಕೂಡುರಸ್ತೆ ಹಾಗೂ ಆಂತರಿಕ ರಸ್ತೆ ಸುಧಾರಣೆಗೆ 150 ಲಕ್ಷ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

## ಶಿಸ್ತು-ಸೇವಾ ಮನೋಭಾವನೆಗೆ ಸ್ಕೌಟ್ ಮತ್ತು ಗೈಡ್ ಸಂಸ್ಥೆ ಸಹಕಾರಿ

### ಕುಲಪತಿ ಪ್ರೊ.ಉಡಿಕೇರಿ ಮೆಚ್ಚುಗೆ



**ಕಲಬುರಗಿ, ಆ. 31:** ಯುವ ಜನರಲ್ಲಿ ಶಿಸ್ತು ಮತ್ತು ಸೇವಾ ಮನೋಭಾವನೆ ಬೆಳಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಮಹತ್ವದ ಪಾತ್ರವಹಿಸುತ್ತದೆ. ಸಮಾಜದಲ್ಲಿ ಬದುಕುವ ರೀತಿ ನೀತಿಗಳನ್ನು ಅರಿಯಲು ಸ್ಕೌಟ್ಸ್ ಮತ್ತು ಗೈಡ್ಸ್ ಶಿಬಿರಗಳು ಸಹಕಾರಿ. ಶಾಲಾ ಕಾಲೇಜುಗಳಿಂದಲೇ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಪ್ರಾಮಾಣಿಕತೆ, ದೇಶಪ್ರೇಮ ಬೆಳೆಸಲು ಇಂತಹ ಕಾರ್ಯಕ್ರಮಗಳು ಅಗತ್ಯವಿದೆ ಎಂದು ಕಲಬುರಗಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ್ ಉಡಿಕೇರಿ ಅವರು ಹೇಳಿದರು.

ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ ರಾಜ್ಯಮಟ್ಟದ ಕಬ್ ಮಾಸ್ಟರ್, ಸ್ಕೌಟ್ ಮಾಸ್ಟರ್, ಪಾಕ್ ಲೀಡರ್ ಮತ್ತು ಗೈಡ್ಸ್ ಕ್ಯಾಪ್ಟನ್ ಮೂಲ ಹಾಗೂ ಮುಂದುವರೆದ ತರಬೇತಿ ಮತ್ತು ಸಮಾಲೋಚನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವ ಜನಾಂಗವನ್ನು ಉತ್ತಮ ಪ್ರಜೆಗಳಾಗಿ ರೂಪಿಸಲು ಶಿಕ್ಷಣದೊಂದಿಗೆ ಎನ್ಎಸ್ಎಸ್, ಎನ್‌ಸಿಸಿ ಕ್ರೀಡಾ ಮನೋಭಾವನೆ ಬೆಳೆಸುವುದು ಅಷ್ಟೇ ಮುಖ್ಯ ಎಂದರು.

ವಿದ್ಯಾರ್ಥಿ ಶಕ್ತಿಯನ್ನು ದೇಶದ ಶಕ್ತಿಯಾಗಿ ಬೆಳೆಸುವ ಜವಾಬ್ದಾರಿ ಶಿಕ್ಷಕ ಸಮುದಾಯದ ಮೇಲಿದೆ. ಪ್ರಸ್ತುತ ಸರ್ಕಾರ ಕೃಷಿ ಮತ್ತು ವಿಜ್ಞಾನ ಕಾಲೇಜುಗಳಲ್ಲಿ ಎನ್ಎಸೆಸ್, ಎನ್ಸಿಸಿ ಕಾರ್ಯಕ್ರಮಗಳಿಗೆ ಆದ್ಯತೆ ನೀಡಿದೆ. ಎನ್ಎಸ್ಎಸ್, ಎನ್‌ಸಿಸಿ ಅರ್ಹರಾದ ವಿದ್ಯಾರ್ಥಿಗಳಿಗೆ ಹತ್ತು ಅಂಕಗಳನ್ನು ನೀಡಲಾಗುತ್ತಿದೆ. ಇದರಿಂದ ವಿದ್ಯಾರ್ಥಿ ಗಳಿಗೆ ಅನುಕೂಲವಾಗಿದೆ. ವಿದ್ಯಾಥಿಗಳು ವಿಶೇಷ ಚಟುವಟಿಕೆಗಳ ಕಡೆಗೂ ಆಸಕ್ತಿವಹಿಸಿ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

## ಸಾಧಕರ ಕೊಡುಗೆ ಮರೆಯಲಾಗದು: ನ್ಯಾ.ಉಪಾಧ್ಯಾಯ

**ಬೀದರ್, ಆ. 31:** ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ ಸಾಧಕರನ್ನು ಇತಿಹಾಸ ಎಂದಿಗೂ ಮರೆಯುವುದಿಲ್ಲ. ಮರೆಯಲೂ ಬಾರದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶ ರಾಘವೇಂದ್ರ ಉಪಾಧ್ಯಾಯ ಹೇಳಿದರು.



ನಗರದ ಗುರುನಾನಕ್ ದೇವ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಥಮ ವರ್ಷದ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ವ್ಯಸನಮುಕ್ತ ಭಾರತ, ತಂತ್ರಜ್ಞಾನದಿಂದಾಗುವ ಅಪರಾಧಗಳು, ಸೈಬರ್ ಕ್ರೈಂ ಹಾಗೂ ಕಿರುಕುಳ ವಿರೋಧಿ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ, ಸಂವಿಧಾನ ರಚನಾಕಾರರಿಗೆ ಪ್ರತಿಯೊಬ್ಬರೂ ಕೃತಜ್ಞರಾಗಿರಬೇಕು. ಸಂವಿಧಾನದ ಮಹತ್ವದ ಜೊತೆಗೆ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಕುರಿತು ವಿದ್ಯಾರ್ಥಿಗಳು ಅರಿವು ಹೊಂದಬೇಕು. ತಮ್ಮ ಜವಾಬ್ದಾರಿಯನ್ನು ಅರಿತು ಯಾವುದೇ ಕೆಲಸವನ್ನು ಪ್ರಾಮಾಣಿಕತೆ ಹಾಗೂ ಉತ್ತಮ ರೀತಿಯಲ್ಲಿ ನಿರ್ವಹಿಸುವುದೇ ದೇಶಕ್ಕೆ ನೀಡಬಹುದಾದ ಮಹತ್ವದ ಕೊಡುಗೆ ಎಂದರು.

ವಿದ್ಯಾರ್ಥಿಗಳು ವ್ಯಸನ, ರ್‍ಯಾಗಿಂಗ್, ಕಿರುಕುಳ ಹಾಗೂ ಸೈಬರ್ ಅಪರಾಧಗಳಿಂದ ದೂರವಿದ್ದು, ಅಮೂಲ್ಯವಾದ ಜೀವನವನ್ನು ಉತ್ತಮ ಗುರಿ ಸಾಧನೆಗೆ ಬಳಸಿಕೊಳ್ಳಬೇಕು. ವ್ಯಸನಮುಕ್ತ ಹಾಗೂ ಅಪರಾಧಮುಕ್ತ ಭಾರತ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

ಪೊಲೀಸ್ ಇಲಾಖೆಯ ಶಿವಕುಮಾರ್, ರಜನಿಕಾಂತ್, ವಿಜಯಲಕ್ಷ್ಮಿ ಹಾಗೂ ವಕೀಲ ಸಂಜುಕುಮಾರ್.ಬಿ. ಅವರು ಸೈಬರ್ ಕ್ರೈಂ, ತಂತ್ರಜ್ಞಾನದ ದುರ್ಬಳಕೆ, ವ್ಯಸನ ಮತ್ತು ಆಯಂಟಿ ರ್‍ಯಾಗಿಂಗ್ ಕುರಿತು ಮಾಹಿತಿ ನೀಡಿದರು.

## ಕಾಡುಪ್ರಾಣಿಗಳ ಹಾವಳಿ ನಿಯಂತ್ರಣ: ಸಚಿವರಿಗೆ ಶಾಸಕ ಶೈಲೇಂದ್ರ ಬೆಲ್ದಾಳೆ ಮನವಿ

**ಬೀದರ್, ಆ.31-:** 'ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಹೆಚ್ಚುತ್ತಿರುವ ಕಾಡು ಪ್ರಾಣಿಗಳ ಹಾವಳಿಯನ್ನು ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಕಾಡು ಪ್ರಾಣಿಗಳಿಂದ ಬೆಳೆ ಹಾಗೂ ಜಾನುವಾರು ಹಾನಿಗೊಳಗಾದ ರೈತರಿಗೆ ಶೀಘ್ರ ಪರಿಹಾರ ಬಿಡುಗಡೆಗೊಳಿಸಬೇಕು' ಎಂದು ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಒತ್ತಾಯಿಸಿದರು.



ನಗರಕ್ಕೆ ಆಗಮಿಸಿದ್ದ ಅರಣ್ಯ ಸಚಿವ ರಾಮಲಿಂಗಾರೆ3ಡ್ಡಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಅವರು, ಬೀದರ ದಕ್ಷಿಣ ಕ್ಷೇತ್ರದ ಅಮಲಾಪುರ-ಮನ್ನಳ್ಳಿ ರಸ್ತೆ ಹಾಗೂ ಬೆಳ್ಳೂರ ಗ್ರಾಮದ ಮುಖ್ಯ ದ್ವಾರದಿಂದ ಕಮಠಾಣ ಗ್ರಾಮಕ್ಕೆ ತೆರಳುವ ರಸ್ತೆಗಳ ಕೆಲವು ಭಾಗಗಳು ದಟ್ಟ ಅರಣ್ಯ ಪ್ರದೇಶದ ಮೂಲಕ ಹಾದುಹೋಗುತ್ತಿವೆ. ಈ ಮಾರ್ಗಗಳಲ್ಲಿ ಕಾಡುಹಂದಿ, ಜಿಂಕೆ, ಕೃಷ್ಣಮೃಗ, ಕಾಡುಮಂಗಗಳು ಸೇರಿದಂತೆ ವಿವಿಧ ಕಾಡುಪ್ರಾಣಿಗಳ ಓಡಾಟ ಹೆಚ್ಚಾಗಿದೆ. ವಿಶೇಷವಾಗಿ ರಾತ್ರಿ ವೇಳೆ ಪ್ರಾಣಿಗಳು ಏಕಾಏಕಿ ರಸ್ತೆ ದಾಟುತ್ತಿರುವುದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರಲ್ಲಿ ಆತಂಕ ಉಂಟಾಗುತ್ತಿದೆ ಎಂದು ತಿಳಿಸಿದರು.

ಕಾಡು ಪ್ರಾಣಿಗಳಿಂದ ಉಂಟಾಗುತ್ತಿರುವ ಅಪಘಾತದ ಅಪಾಯವನ್ನು ಕಡಿಮೆ ಮಾಡಲು, ಅಮಲಾಪುರ-ಮನ್ನಳ್ಳಿ ಹಾಗೂ ಬೆಳ್ಳೂರ-ಕಮಠಾಣ ರಸ್ತೆಗಳಿಗೆ ಹೊಂದಿಕೊಂಡಿರುವ ಅರಣ್ಯ ಪ್ರದೇಶದ ಎರಡೂ ಬದಿಗಳಲ್ಲಿ ತಂತಿಬೇಲಿ ನಿರ್ಮಿಸಬೇಕು ಎಂದು ಒತ್ತಾಯಿಸಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಕಾಡು ಪ್ರಾಣಿಗಳ ಓಡಾಟ ಹೆಚ್ಚಿರುವ ಪ್ರದೇಶಗಳನ್ನು ಗುರುತಿಸಿ, ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಅನು ಕೂಲ ಮಾಡಿಕೊಡಬೇಕು. ತಂತಿ ಬೇಲಿ ನಿರ್ಮಾಣದಿಂದ ಕಾಡು ಪ್ರಾಣಿಗಳ ರಸ್ತೆ ಪ್ರವೇಶ ನಿಯಂತ್ರಣ ಪ್ರಾಣಿಗಳ ಸಂರಕ್ಷಣೆಗೂ ಸಹಕಾರಿಯಾ ಗಲಿದೆ. ಜತೆಗೆ ಪ್ರಾಣಿಗಳು ರೈತರ ಜಮೀನುಗಳಿಗೆ ನುಗ್ಗಿ ಬೆಳೆಗಳು ನಾಶಪಡಿಸುತ್ತಿರುವುದರಿಂದ ರೈತರಿಗೆ ಆರ್ಥಿಕ ನಷ್ಟವಾಗುತ್ತಿದೆ ಎಂಬ ವಿಚಾರವೂ ಗಮನಕ್ಕೆ ತಂದರು.

## ರಾಯರ ಆರಾಧನೆಯ ಚಿನ್ನದ ರಥೋತ್ಸವ

### ಮಂತ್ರಾಲಯದ ಉತ್ತರ ಆರಾಧನೆಯಲ್ಲಿ ಲಕ್ಷಾಂತರ ಭಕ್ತರು ಭಾಗಿ

**ಮಂತ್ರಾಲಯ, ಆ. 31:** ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವದಂಗವಾಗಿ ನಡೆದ ಚಿನ್ನದ ರಥೋತ್ಸವ ವೈಭವದಿಂದ ಜರುಗಿತು. ಶ್ರೀ ಸುಬುಧೇಂದ್ರ ತೀರ್ಥ ಶ್ರೀಗಳು ರಥೋತ್ಸವಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿದರು.



ಆರಾಧನಾ ಮಹೋತ್ಸವದ ಪ್ರಯುಕ್ತ ಚಿನ್ನದ ರಥೋತ್ಸವ ಸಂದರ್ಭದಲ್ಲಿ ಲಕ್ಷಾವಧಿ ಭಕ್ತರು ಭಾಗಿಯಾಗಿ ರಾಯರ ದರ್ಶನ ಹಗೂ ಚಿನ್ನದ ರಥೋತ್ಸ್ವ ನೋಡಿ ಕಣ್ತುಂಬಿಕೊಂಡರು. ಉತ್ತಾರಾಧನೆಯ ಶುಭ ದಿನದಂದು ಗುರು ರಾಯರು ಪ್ರಹ್ಲಾದ ರಾಜರ ಉತ್ಸವ ಮೂರ್ತಿಯ ರೂಪದಲ್ಲಿ ಹೊರಪ್ರಾಕಾರಕ್ಕೆ ಬಂದು ಭಕ್ತರಿಗೆ ದರ್ಶನ ನೀಡುತ್ತಾರೆ ಎಂಬ ಬಲವಾದ ನಂಬಿಕೆಯಿದೆ.

ಮಹಾರಥೋತ್ಸವಕ್ಕೂ ಮುನ್ನ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥರ ಸಾನ್ನಿಧ್ಯದಲ್ಲಿ ವಸಂತೋತ್ಸವ ನೆರವೇರಲಿದ್ದು, ರಾಯರ ವೃಂದಾವನಕ್ಕೆ ಗುಲಾಲ್ ಎರಚುವ ಮೂಲಕ ಬಣ್ಣಗಳ ಹಬ್ಬವನ್ನು ಆಚರಿಸಲಾಗುತ್ತದೆ. ತದನಂತರ ಸಂಸ್ಕೃತ ಪಾಠಶಾಲೆಯಿಂದ ಮಠದ ಮದ್ವದ್ವಾರದವರೆಗೆ ರಾಯರ ಮೆರವಣಿಗೆ ನಡೆದು, ರಾಜಬೀದಿಯಲ್ಲಿ ಮಹಾರಥೋತ್ಸವಕ್ಕೆ ಚಾಲನೆ ಸಿಗಲಿದೆ.

ಈ ಬಾರಿ ರಾಯರ ವೃಂದಾವನಕ್ಕೆ ವಿಶೇಷವಾಗಿ ನವರತ್ನ ಕವಚವನ್ನು ಅಳವಡಿಸಲಾಗಿದ್ದು, ರಥೋತ್ಸವದ ವೇಳೆ ಪ್ರತಿವರ್ಷದಂತೆ ಹೆಲಿಕಾಪ್ಟರ್ ಮೂಲಕ ಮಹಾರಥಕ್ಕೆ ಪುಷ್ಪವೃಷ್ಟಿ ನಡೆಯಿತು. ಕರ್ನಾಟಕ ಮಾತ್ರವಲ್ಲದೇ, ತೆಲಂಗಾಣ, ಆಂಧ್ರಪ್ರದೇಶ ಮತ್ತು ತಮಿಳುನಾಡು ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿರುವ ಲಕ್ಷಾಂತರ ಭಕ್ತರು ಮತ್ತು ಭಜನಾ ಮಂಡಳಿಗಳು ಹಾಗೂ ಕಲಾತಂಡಗಳು ತಮ್ಮ ರಂಗಿನ ಪ್ರದರ್ಶನದ ಮೂಲಕ ಉತ್ಸವಕ್ಕೆ ಮತ್ತಷ್ಟು ಕಳೆ ತಂದಿವೆ.

ಉತ್ತಾರಾಧನೆಯ ದಿನ ರಾಯರು ಭಕ್ತರ ಬೇಡಿಕೆಗಳನ್ನು ಈಡೇರಿಸುತ್ತಾರೆ ಎಂಬ ನಂಬಿಕೆ ಇರುವುದರಿಂದ, ಶ್ರೀಗಳ ಅನುಗ್ರಹ ಪಡೆಯಲು ದೇಶದ ಮೂಲೆಮೂಲೆಗಳಿಂದ ಅಪಾರ ಸಂಖ್ಯೆಯ ಭಕ್ತರು ಮಂತ್ರಾಲಯದಲ್ಲಿ ಬೀಡುಬಿಟ್ಟಿದ್ದಾರೆ.

## ಮಂಥನ್ ಸ್ಟಾರ್ಟ್‌ಅಪ್ ನಿಧಿ, ಕೇಂದ್ರೀಯ ವಿವಿ ಎರಡು ಸ್ಟಾರ್ಟ್‌ಅಪ್ ತಂಡಗಳು ಅಂತಿಮ ಸುತ್ತಿಗೆ ಆಯ್ಕೆ

**ಕಲಬುರಗಿ, ಆ. 31:** ಇಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ವ್ಯವಹಾರ ನಿರ್ವಹಣಾ ವಿಭಾಗ ಹಾಗೂ ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗದ ವಿದ್ಯಾರ್ಥಿಗಳ ನೇತೃತ್ವದ ಎರಡು ಸ್ಟಾರ್ಟ್‌ಫ್ ತಂಡಗಳು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ಆಯೋಜಿಸಿರುವ 'ಮಂಥಯನ್ ಸ್ಟಾರ್ಟ್‌ಫ್ ನಿಧಿ 2026'ರ ಅಂತಿಮ ಸುತ್ತಿಗೆ ಆಯ್ಕೆಯಾಗಿವೆ.



ಮಂಥನ್ ಎಫ್‌ಕೆಸಿಸಿಐ ಪ್ರಮುಖ ವಾರ್ಷಿಕ ವ್ಯಾಪಾರ ಯೋಜನೆ ಪ್ರಸ್ತುತಿ ಸ್ಪರ್ಧೆಯಾಗಿದ್ದು, ರಾಜ್ಯದ ವಿದ್ಯಾರ್ಥಿಗಳು, ಯುವ ಉದ್ಯಮಿಗಳು ಮತ್ತು ಸ್ಟಾರ್ಟ್‌ಪ್ ಸಂಸ್ಥಾಪಕರಲ್ಲಿ ನಾವೀನ್ಯತೆ ಹಾಗೂ ಉದ್ಯಮಶೀಲತೆಯನ್ನು ಉತ್ತೇಜಿಸುವ ಉದ್ದೇಶದಿಂದ ಆಯೋಜಿಸಲಾಗು ತ್ತಿದೆ. ಕಾಲೇಜು ಹಂತದಲ್ಲಿಯೇ ವಿದ್ಯಾರ್ಥಿಗಳಲ್ಲಿರುವ ಉದ್ಯಮ ಐಡಿಯಾಗಳನ್ನು ಹೊರ ತರುವುದು ಮತ್ತು ಹೊಸ ಉದ್ಯಮವನ್ನು ಆರಂಭಿಸುವ ಯೋಜನೆಗಳಿಗೆ ಅನುದಾನ, ಕೈಗಾರಿಕೆಗಳಿಗೆ ಪ್ರೋತ್ಸಾಹಸೇರಿದಂತೆ ವಿದ್ಯಾರ್ಥಿ ಮತ್ತು ಕೈಗಾರಿಕೋದ್ಯಮ ಸ್ನೇಹಿ ಸ್ಪರ್ಧೆಯನ್ನು ಕಳೆದ 2007 ರಿಂದ ಮಾಡುತ್ತಾ ಬಂದಿದೆ. ಈ ವರ್ಷ ತನ್ನ 18ನೇ ಆವೃತ್ತಿಯನ್ನು ನಡೆಸುತ್ತಿದೆ.

ಮೊದಲ ತಂಡವು ನೆಕ್ಸ್ ಬಸ್ ಕೃತಕ ಬುದ್ಧಿಮತ್ತೆ ಮತ್ತು ಇಂಟರ್‌ನೆಟ್ ಆಫ್ ಥಿಂಗ್ಸ್ ಆಧಾರಿತ ಸಾರ್ವಜನಿಕ ಸಾರಿಗೆ ಪರಿಹಾರವಾಗಿದೆ. ಈ ವ್ಯವಸ್ಥೆಯು ಬಸ್‌ನ ನೈಜ-ಸಮಯದ ಟ್ರ್ಯಾಕಿಂಗ್, ಅಂದಾಜು ಆಗಮನ ಸಮಯ, ಜನದಟ್ಟಣೆ ಮಾಹಿತಿ, ಸ್ಮಾರ್ಟ್ ಮಾರ್ಗ ಶಿಫಾರಸುಗಳು ಹಾಗೂ ಎಸ್‌ಓಎಸ್ ಸೇರಿದಂತೆ ಸುರಕ್ಷತಾ ವೈಶಿಷ್ಟ್ಯಗಳನ್ನು ಒದಗಿಸುತ್ತದೆ. ಸುಮಾರು 1,000 ಪ್ರಯಾಣಿಕರ ಸಮೀಕ್ಷೆಯ ಆಧಾರದ ಮೇಲೆ ರೂಪಿಸಲಾದ ಈ ಯೋಜನೆಯು ಸಾರ್ವಜನಿಕ ಬಸ್ ಪ್ರಯಾಣವನ್ನು ಹೆಚ್ಚು ಸುರಕ್ಷಿತ, ಚುರುಕಾದ ಮತ್ತು ವಿಶ್ವಾಸಾರ್ಹವಾಗಿಸುವ ಗುರಿಯನ್ನು ಹೊಂದಿದೆ. ಈ ಸ್ಟಾರ್ಟ್‌ಪ್ ಎಂಬಿಎ ದ್ವಿತೀಯ ವರ್ಷದ ವಿದ್ಯಾರ್ಥಿಗಳಾದ ಕು. ಸೃಷ್ಟಿ ಪ್ರಿಯಾ, ಅಜರ್ ಇಕ್ಬಾಲ್ ಹಾಗೂ ಎಂಬಿಎ (ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣೆ) ದ್ವಿತೀಯ ವರ್ಷದ ವಿದ್ಯಾರ್ಥಿ ಮುಕೇಶ್ ಜಿ. ಅಭಿವೃದ್ಧಿಪಡಿಸಿದ್ದಾರೆ.

ಎರಡನೇ ತಂಡವು ಒಂದು ಯೋಜನೆ, ಒಂದು ಪಾವತಿ, ಸಂಪೂರ್ಣ ಪ್ರವಾಸ.: ದಿನದ ಪ್ರವಾಸಗಳನ್ನು ಸರಳ, ಅನುಕೂಲಕರ ಮತ್ತು ಆನಂದದಾಯಕವಾಗಿಸುವ ಸಮಗ್ರ ಪ್ರಯಾಣ ವೇದಿಕೆಯಾಗಿದೆ. ಸ್ಥಳಗಳ ಹುಡುಕಾಟ, ಪ್ರವಾಸ ಯೋಜನೆ, ಸಾರಿಗೆ ಬುಕ್ಕಿಂಗ್, ಹೋಟೆಲ್,ಪ್ರವಾಸಿ ತಾಣಗಳ ಟಿಕೆಟ್ ಹಾಗೂ ಊಟದ ವ್ಯವಸ್ಥೆ ಸೇರಿದಂತೆ ಎಲ್ಲ ಸೇವೆಗಳನ್ನು ಒಂದೇ ವೇದಿಕೆಂಮಲ್ಲಿ ಒಂದೇ ಬಾರಿ ಪಾವತಿ ಸೌಲಭ್ಯದೊಂದಿಗೆ ಒದಗಿಸುತ್ತದೆ. ಇದು ಬೆಂಗಳೂರು, ತೆಲಂಗಾಣ, ಆಂದ್ರಪ್ರದೇಶ ಸೇರಿದಂತೆ ಇತರೆ ಪ್ರಮುಖ ನಗರಗಳಿಗೆ ಯೋಜನೆ ವಿಸ್ತರಿಸಲು ಸಿದ್ಧತೆ ನಡೆಸಿದೆ. ಇದು ಸುಗಮ ಮತ್ತು ಕೈಗೆಟುಕುವ ಪ್ರಯಾಣ ಅನುಭವವನ್ನು ನೀಡುತ್ತಾ, 20 ಲಕ್ಷ ಬಳಕೆದಾರ ರನ್ನು,1 ಲಕ್ಷ ಬುಕ್ಕಿಂಗ್‌ಗಳನ್ನು ಮತ್ತು ವಾರ್ಷಿಕ 4.50 ಕೋಟಿ ಆದಾಯವನ್ನು ತಲುಪುವುದಾಗಿದೆ. ಪೂರ್ಣ ಯಾತ್ರಾ ಸ್ಟಾರ್ಟ್‌ಅಪ್ ಎಂಬಿಎ ವಿದ್ಯಾರ್ಥಿ ಉಂಕೂರು ಲಕ್ಷ್ಮಣರಾವ್, ಕಂಪ್ಯೂಟರ್ ವಿಜ್ಞಾನ ವಿಭಾಗದ ಪ್ರಿನ್ಸ್ ಕುಮಾರ್, ಇತಿಹಾಸ ಮತ್ತು ಪುರಾತತ್ವ ವಿಭಾಗದ ಉನ್ನವ ಯೋಗೇಶ್ವರರಾವ್ ಹಾಗೂ ವ್ಯವಹಾರ ಅಧ್ಯಯನ ವಿಭಾಗದ ಮುಂಡ್ಯ ವಿಠಲ್ ಅವರು ಜಂಟಿಯಾಗಿ ಅಭಿವೃದ್ಧಿಪಡಿಸಿದ್ದಾರೆ.

# ರಾಹುಲ್ ವಿರುದ್ಧ ಎಫ್ಐಆರ್ ಕಾನೂನು ಹೋರಾಟಕ್ಕೆ ಕೈ ಸಜ್ಜು

**ನವದೆಹಲಿ, ಆ. 31:** ಉತ್ತರಾಖಂಡದ ಹಲ್ದವಾನಿಯಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಸಮಾವೇಶ ನಡೆದ ನಂತರ, ಆ ಸ್ಥಳದಲ್ಲಿ ನಡೆದ ಶುದ್ಧೀಕರಣ ಹವನ ಪ್ರಕರಣ ಈಗ ತೀವ್ರ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿದೆ. ಈ ಘಟನೆಯನ್ನು ಪ್ರಶ್ನಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧವೇ ಉತ್ತರಾಖಂಡ ಪೊಲೀಸರು ಎಫ್ಐಆರ್ ದಾಖಲಿಸಿದ್ದಾರೆ. ಈ ಕ್ರಮವನ್ನು ತೀವ್ರವಾಗಿ ಖಂಡಿಸಿರುವ ಕಾಂಗ್ರೆಸ್, ಬಿಜೆಪಿಯ ಜಾತಿವಾದಿ ಮನಸ್ಥಿತಿ ವಿರುದ್ಧ ಕಾನೂನು ಹಾಗೂ ಪ್ರಜಾಸತ್ತಾತ್ಮಕ ಹೋರಾಟ ರೂಪಿಸುವುದಾಗಿ ಸ್ಪಷ್ಟಪಡಿಸಿದೆ.

ಆಗಸ್ಟ್ 8 ರಂದು ಹಲ್ದ್ವಾನಿಯ ರಾಮಲೀಲಾ ಮೈದಾನದಲ್ಲಿ ದಲಿತ ಸಮುದಾಯದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ಸಾರ್ವಜನಿಕ ಸಮಾವೇಶ ನಡೆದಿತ್ತು. ಇದಾದ ಕೆಲವು ದಿನಗಳ ನಂತರ, ಆಗಸ್ಟ್ 11 ರಂದು ಅದೇ ಸ್ಥಳದಲ್ಲಿ ಕೆಲವರು ಶುದ್ಧೀಕರಣ ಯಜ್ಞ ನಡೆಸಿದ್ದರು. ಇದನ್ನು ದಲಿತ ವಿರೋಧಿ ಹಾಗೂ ಅಸ್ಪೃಶ್ಯತೆಯ ಸಂಕೇತ ಎಂದು ಕರೆದಿದ್ದ ರಾಹುಲ್ ಗಾಂಧಿ, ಶುದ್ಧೀಕರಣ ನಡೆಸಿದವರ ವಿರುದ್ಧ ಎಸ್ಸಿ/ಎಸ್ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಲ್ಲಿ ಆಗ್ರಹಿಸಿದ್ದರು.

ಆದರೆ, ಶ್ರೀರಾಮಸೇನಾ ಧರ್ಮಾರ್ಥ ಸೇವಾ ನ್ಯಾಸದ ಸದಸ್ಯ ಹಾಗೂ ವಾಲ್ಮೀಕಿ ಸಮುದಾಯದ ಅಮಿತ್ ಕುಮಾರ್ ಎಂಬುವವರು ನೀಡಿದ ದೂರಿನನ್ವಯ ಹಲ್ದವಾನಿ ಪೊಲೀಸ್ ಠಾಣೆಯಲ್ಲಿ ರಾಹುಲ್ ಗಾಂಧಿ ವಿರುದ್ಧವೇ ದೂರು ದಾಖಲಾಗಿದೆ. ಧಾರ್ಮಿಕ ಆಚರಣೆಗೆ ಜಾತಿಯ ಬಣ್ಣ ಬಳಿದು ಸಮುದಾಯಗಳ ನಡುವೆ ದ್ವೇಷ ಹೆಚ್ಚಿಸಲು ರಾಹುಲ್ ಯತ್ನಿಸಿದ್ದಾರೆ ಎಂದು ಆರೋಪಿಸಲಾಗಿದ್ದು, ಭಾರತೀಯ ನ್ಯಾಯಸಂಹಿತೆ ಸೆಕ್ಷನ್ 196, 299 ಹಾಗೂ SC/ST ಕಾಯ್ದೆಯಡಿ ಎಫ್ಐಆರ್ ದಾಖಲಿಸಲಾಗಿದೆ.

ಬಿಜೆಪಿ ಸರ್ಕಾರದ ಈ ನಡವಳಿಕೆಗೆ ತೀವ್ರ ಕಿಡಿಕಾರಿರುವ ಕಾಂಗ್ರೆಸ್ ನಾಯಕಿ ಕುಮಾರಿ ಸೆಲ್ಜಾ, ಶುದ್ಧೀಕರಣದಂತಹ ಅಸ್ಪೃಶ್ಯತೆಯ ಆಚರಣೆ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಅದರ ವಿರುದ್ಧ ಧ್ವನಿಎತ್ತಿದ ರಾಹುಲ್ ಗಾಂಧಿ ಅವರನ್ನೇ ಅಪರಾಧಿಯನ್ನಾಗಿ ಮಾಡಲು ಹೊರಟಿರುವುದು ಬಿಜೆಪಿಯ ದಲಿತ ವಿರೋಧಿ ಮತ್ತು ಸಂವಿಧಾನ ವಿರೋಧಿ ಮನಸ್ಥಿತಿಗೆ ಸಾಕ್ಷಿ ಎಂದು ವಾಗ್ದಾಳಿ ನಡೆಸಿದ್ದಾರೆ. ಅಲ್ಲದೆ, ದಲಿತರ ಆತ್ಮಗೌರವ ಹಾಗೂ ಸಂವಿಧಾನದ ರಕ್ಷಣೆಗಾಗಿ ಈ ಜಾತಿವಾದಿ ಮನಸ್ಥಿತಿಯ ವಿರುದ್ಧ ಕೊನೆಯವರೆಗೂ ಶಕ್ತಿಮೀರಿ ಕಾನೂನು ಹೋರಾಟ ನಡೆಸುವುದಾಗಿ ಕಾಂಗ್ರೆಸ್ ಘೋಷಿಸಿದೆ.

## ಪೊಯ್ಸರ್ ಜಿಮ್ಖಾನಾದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ-ಯುವ ಕ್ರೀಡಾಪಟುಗಳಿಗೆ ಸನ್ಮಾನ

# ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಕ್ರೀಡೆ ಪಾತ್ರ ಮಹತ್ವದ್ದು: ಗೋಪಾಲ್ ಸಿ.ಶೆಟ್ಟಿ

**ಮುಂಬಯಿ, ಆ.31:** ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದರ ಜೊತೆಗೆ ಯುವಜನರು ಶಿಕ್ಷಣದೊಂದಿಗೆ ಕ್ರೀಡೆಯಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಉತ್ತೇಜಿಸುವ ಉದ್ದೇಶದಿಂದ ಮಹಾನಗರದ ಕಾಂದಿವಿಲಿ ಪಶ್ಚಿಮದಲ್ಲಿನ ಪೊಯ್ಸರ್ ಜಿಮ್ಖಾನಾದಲ್ಲಿ ರಾಷ್ಟ್ರೀಯ ಕ್ರೀಡಾ ದಿನವನ್ನು ಇತ್ತೀಚೆಗೆ ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ವಿವಿಧ ಕ್ರೀಡೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪ್ರತಿಭಾವಂತ ಯುವ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು.



ಗೌರವ ಅತಿಥಿಯಾಗಿ ಉಪಸ್ಥಿತ ಜನಸೇವಕ ಹಾಗೂ ಮಾಜಿ ಸಂಸದ ಗೋಪಾಲ್ ಸಿ.ಶೆಟ್ಟಿ ಮಾತನಾಡಿ "ಶಿಕ್ಷಣ ಮತ್ತು ಕ್ರೀಡೆ ಎರಡೂ ಜೊತೆಜೊತೆಯಾಗಿ ಸಾಗಬೇಕು. ಪೋಷಕರು ತಮ್ಮ ಮಕ್ಕಳಿಗೆ ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಯಲ್ಲಿಯೂ ಮುಂದುವರಿಯಲು ಬೆಂಬಲ ನೀಡಬೇಕು. ಕ್ರೀಡೆ ಮಕ್ಕಳ ವ್ಯಕ್ತಿತ್ವ ಹಾಗೂ ಸರ್ವಾಂಗೀಣ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ". ಕ್ರೀಡಾ ಪ್ರತಿಭೆಗಳ ಬೆಳವಣಿಗೆಯಲ್ಲಿ ಪೋಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಕ್ಕಳು ಶಿಕ್ಷಣದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ನಿರಂತರವಾಗಿ ಭಾಗವಹಿಸಲು ಪೋಷಕರು ಪ್ರೋತ್ಸಾಹ ಮತ್ತು ಸಂಪೂರ್ಣ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ವಿವಿಧ ಕ್ರೀಡಾ ವಿಭಾಗಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಯುವ ಕ್ರೀಡಾಪಟುಗಳನ್ನು ಸನ್ಮಾನಿಸಿ ಅಭಿನಂದಿಸಿದ ಗೋಪಾಲ್ ಶೆಟ್ಟಿ ಅವರು, ನಿರಂತರ ಪರಿಶ್ರಮದೊಂದಿಗೆ ಉನ್ನತ ಗುರಿಗಳನ್ನು ಸಾಧಿಸಿ ಮಹಾರಾಷ್ಟ್ರ ಹಾಗೂ ದೇಶಕ್ಕೆ ಕೀರ್ತಿ ತರಬೇಕೆಂದು ಹಾರೈಸಿದರು.

ಉತ್ತರ ಮುಂಬಯಿಯ ಜಿಲ್ಲಾ ಕ್ರೀಡಾಧಿಕಾರಿ ಸುಶ್ರೀ ಸಯಾಲಿ ಜಾಧವ್ ಮಕ್ಕಳ ವ್ಯಕ್ತಿತ್ವ ನಿರ್ಮಾಣ ಹಾಗೂ ಜೀವನದ ಸವಾಲುಗಳನ್ನು ಎದುರಿಸುವಲ್ಲಿ ಕ್ರೀಡೆಯ ಮಹತ್ವವನ್ನು ವಿವರಿಸಿದರು. ಕ್ರೀಡೆಯಲ್ಲಿ ನಿರಂತರವಾಗಿ ಭಾಗವಹಿಸುವುದರಿಂದ ಬದ್ಧತೆ, ಏಕಾಗ್ರತೆ ಮತ್ತು ಸಮರ್ಪಣೆ ಎಂಬ ಮೂರು ಪ್ರಮುಖ ಗುಣಗಳು ಬೆಳೆಯುತ್ತವೆ. ಇವು ಕ್ರೀಡಾಂಗಣದಲ್ಲಿ ಮಾತ್ರವಲ್ಲದೆ ಜೀವನದ ಪ್ರತಿಯೊಂದು ಕ್ಷೇತ್ರದಲ್ಲಿಯೂ ಯಶಸ್ಸು ಸಾಧಿಸಲು ಸಹಕಾರಿಯಾಗುತ್ತವೆ ಎಂದರು. ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಸುನಿಲ್ ವಲಾವಲ್ಕರ್ ರಚಿಸಿದ 'ಬದಲ್ತೆ ಕ್ರೀಡಾ ಜಗತ್' ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ವಲಾವಲ್ಕರ್ ಮಾತನಾಡಿ, ಉದಯೋನ್ಮುಖ ಕ್ರೀಡಾ ಪ್ರತಿಭೆಗಳನ್ನು ಬೆಳೆಸಲು ಮತ್ತು ಪ್ರೋತ್ಸಾಹಿಸಲು ಪೊಯ್ಸರ್ ಜಿಮ್ಖಾನಾ ಹಾಗೂ ಗೋಪಾಲ್ ಶೆಟ್ಟಿ ಅವರ ಪ್ರಯತ್ನದಿಂದ ನಿರ್ಮಿಸಲಾದ ಉತ್ತಮ ಕ್ರೀಡಾ ಮೂಲಸೌಕರ್ಯ ಮತ್ತು ಸೌಲಭ್ಯಗಳನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಹಾಗೂ ಸಂಪಾದಕ ಪದ್ಮಭೂಷಣ್ ದೇಶಪಾಂಡೆ, ಪೊಯ್ಸರ್ ಜಿಮ್ಖಾನಾದ ಅಧ್ಯಕ್ಷ ಮುಖೇಶ್ ಭಂಡಾರಿ, ಉಪಾಧ್ಯಕ್ಷ ಕರುಣಾಕರ ಎಸ್.ಶೆಟ್ಟಿ ಸೇರಿದಂತೆ ಗಣ್ಯರು, ಪದಾಧಿಕಾರಿಗಳು, ಕ್ರೀಡಾಪಟುಗಳು, ತರಬೇತುದಾರರು, ಪೋಷಕರು ಹಾಗೂ ಜಿಮ್ಖಾನಾದ ಸದಸ್ಯರು ಉಪಸ್ಥಿತರಿದ್ದರು.

ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಈ ಕಾರ್ಯಕ್ರಮವು ಕ್ರೀಡೆಯನ್ನು ಉತ್ತೇಜಿಸುವುದು, ಯುವ ಪ್ರತಿಭೆಗಳನ್ನು ಬೆಳೆಸುವುದು ಹಾಗೂ ಮುಂದಿನ ಪೀಳಿಗೆಯ ಕ್ರೀಡಾಪಟುಗಳಿಗೆ ಉತ್ತಮ ಅವಕಾಶಗಳನ್ನು ಕಲ್ಪಿಸುವ ಪೊಯ್ಸರ್ ಜಿಮ್ಖಾನಾದ ಬದ್ಧತೆಯನ್ನು ಮತ್ತೊಮ್ಮೆ ಸಾರಿತು.

# ಮಂಗಳೂರು–ಮೂಡುಶೆಡ್ಡೆ ವಿಷ್ಣುಮೂರ್ತಿ ದೇಗುಲದ ಆವರಣದಲ್ಲಿ ಆಡಿಟೋರಿಯಂ ನಿರ್ಮಾಣ: ದೇಣಿಗೆಗೆ ಮನವಿ

**ಮುಂಬಯಿ, ಆ.31:** ಕರ್ನಾಟಕ ಕರಾವಳಿಯ ಮಂಗಳೂರು ಮೂಡುಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನಕ್ಕೆ ದೇಣಿಗೆ ಕೋರಿ ಮಹಾರಾಷ್ಟ್ರದ ಕಲ್ಯಾಣ್ ಲೋಕಸಭಾ ಕ್ಷೇತ್ರದ ಸಂಸದ ಡಾ| ಶ್ರೀಕಾಂತ್ ಏಕನಾಥ್ ಶಿಂಧೆ ಅವರಿಗೆ ಭಾನುವಾರ ಸಂಸದರ ಅಧಿಕೃತ ನಿವಾಸ ಥಾಣೆ ಲೂಯಿಸ್‌ವಾಡಿ ಇಲ್ಲಿನ ಶುಭ್‌ದೀಪ್ ಬಂಗಲೋಗೆ ವಿಷ್ಣುಮೂರ್ತಿ ದೇವಸ್ಥಾನ ಪುನರ್‌ನಿರ್ಮಾಣ ಸಮಿತಿ ಪರವಾಗಿ ಮುಂಬಯಿ ಸಮಿತಿಯ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಮೂಡುಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ಮುಂಬಯಿ ಸಮಿತಿ ಅಧ್ಯಕ್ಷ ಮೂಡುಶೆಡ್ಡೆ ವಿಶ್ವನಾಥ್ ಎಸ್.ಶೆಟ್ಟಿ, ಗೌರವಾಧ್ಯಕ್ಷ ಮುಂಡಪ್ಪ ಎಸ್.ಪಯ್ಯಡೆ, ಕಾರ್ಯದರ್ಶಿ ದಿವಾಕರ್ ರೈ ಪ್ರಧಾನವಾಗಿದ್ದು ಡಾ| ಶ್ರೀಕಾಂತ್ ಶಿಂಧೆ ಅವರಿಗೆ ಮನವಿ ಸಲ್ಲಿಸಿ ಮೂಡುಶೆಡ್ಡೆ ಗ್ರಾಮಸ್ಥರು ಡಾ. ಶ್ರೀಕಾಂತ್ ಶಿಂಧೆ ಅವರಿಗೆ ವಿನಮ್ರ ಮನವಿ ಸಲ್ಲಿಸಿ ಅವರ ಹಾಗೂ ಅವರ ಮಾತಾಪಿತರ ಹೆಸರು ಮೂಡುಶೆಡ್ಡೆ ಗ್ರಾಮದಲ್ಲಿ ಶಾಸ್ವತವಾಗಿ ಸ್ಮರಣೀಯವಾಗಿರಬೇಕು ಎಂಬ ಉದ್ದೇಶದಿಂದ ಡಾ| ಶ್ರೀಕಾಂತ್ ಲತಾ ಏಕನಾಥ್ ಶಿಂಧೆ ಆಡಿಟೋರಿಯಂ ಹೆಸರಿನಲ್ಲಿ ಸಭಾಂಗಣ ನಿರ್ಮಿಸಲು ಯೋಚಿಸಲಾಗಿದೆ ಎಂದರು.

ಯೋಜನೆಯಂತೆ ನೆಲಮಹಡಿಯಲ್ಲಿ ಅಡುಗೆಮನೆ ಹಾಗೂ ಊಟದ ವ್ಯವಸ್ಥೆಗಾಗಿ ಒಟ್ಟು 11,980 ಚದರ ಅಡಿ ವಿಸ್ತೀರ್ಣದ ಕಟ್ಟಡ ಹಾಗೂ ಪ್ರಥಮ ಮಹಡಿಯಲ್ಲಿ 9,085 ಚದರ ಅಡಿ ವಿಸ್ತೀರ್ಣದ ಸಭಾಂಗಣ ನಿರ್ಮಾಣಗೊಳ್ಳಲಿದೆ. ಈ ಪುಣ್ಯ ಕಾರ್ಯಕ್ಕೆ ಡಾ| ಶ್ರೀಕಾಂತ್ ಶಿಂಧೆ ಅವರು ಸಮ್ಮತಿಸಿ, ತಮ್ಮ ಹೃದಯಪೂರ್ವಕ ಬೆಂಬಲದೊಂದಿಗೆ 3.5 ಕೋಟಿ ದೇಣಿಗೆ ನೀಡುವಂತೆ ದೇವಸ್ಥಾನ ಪುನರ್‌ನಿರ್ಮಾಣ ಸಮಿತಿ ವಿನಮ್ರವಾಗಿ ಮನವಿ ಮಾಡಿದೆ ಎಂದು ಮೂಡುಶೆಡ್ಡೆ ವಿಶ್ವನಾಥ್ ಎಸ್.ಶೆಟ್ಟಿ ತಿಳಿಸಿದರು. ಕಳೆದ ಜುಲೈನಲ್ಲಿ ನಡೆದ




ದೇವಸ್ಥಾನದ ಶಿಲಾನ್ಯಾಸ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಡಾ| ಶ್ರೀಕಾಂತ್ ಶಿಂಧೆ ತಮ್ಮ ಭಾಷಣದಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರಗಳ ನಡುವಿನ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಬಾಂಧವ್ಯವನ್ನು ವಿವರಿಸಿ, ಛತ್ರಪತಿ ಶಿವಾಜಿ ಮಹಾರಾಜರು ಕರ್ನಾಟಕದಲ್ಲಿ ತಂಗಿದ್ದ ವಿಚಾರ ಹಾಗೂ ಮಹಾರಾಷ್ಟ್ರದ ಭಕ್ತರೊಂದಿಗೆ ಕರ್ನಾಟಕದ ಜನರೂ ಪಂಢರಪುರ ಜಾತ್ರೆಯಲ್ಲಿ ಪಾಲ್ಗೊಳ್ಳುವ ಪರಂಪರೆಯನ್ನು ಸುಂದರವಾಗಿ ವಿವರಿಸಿದ್ದನ್ನು ವಿಶ್ವನಾಥ್ ಎಸ್.ಶೆಟ್ಟಿ ಪುನರುಚ್ಚಿಸಿ ಈ ಭಾಷಣವು ವಿಶ್ವದ ವಿವಿಧೆಡೆ ನೆಲೆಸಿರುವ ತುಳು ಹಾಗೂ ದಕ್ಷಿಣ ಭಾರತೀಯ ಸಮುದಾಯಗಳಲ್ಲಿ ವ್ಯಾಪಕವಾಗಿ ಹರಿದಾಡಿದ್ದು, ಮುಂಬೈನ ದಕ್ಷಿಣ ಭಾರತೀಯ ಸಮುದಾಯದ ಅನೇಕರು ದೂರವಾಣಿ ಮೂಲಕ ಸಂಪರ್ಕಿಸಿ ಭಾಷಣವನ್ನು ಪ್ರಶಂಸಿಸಿದ್ದಾರೆ. ಅವರ ಭಾಷಣದ ಮೂಲಕ ಮೂಡುಶೆಡ್ಡೆ ಗ್ರಾಮದ ಹೆಸರು ಎಲ್ಲೆಡೆ ಪರಿಚಿತವಾಗಿರುವುದು ಗ್ರಾಮಸ್ಥರಲ್ಲಿ ಹೆಮ್ಮೆಯ ಭಾವನೆ ಮೂಡಿಸಿದೆ ಎಂದು ಸಮಿತಿ ಅಭಿಪ್ರಾಯ ಪಟ್ಟಿದ್ದಾಗಿ ತಿಳಿಸಿದರು.

ದಕ್ಷಿಣ ಕನ್ನಡದ ಇತಿಹಾಸದಲ್ಲಿ ಅನೇಕ ದೇವಸ್ಥಾನಗಳ ಜೀರ್ಣೋದ್ಧಾರ ಹಾಗೂ ಪುನಃರ್ ನಿರ್ಮಾಣ ಕಾರ್ಯಗಳು ನಡೆದಿದ್ದರೂ, 5,000ಕ್ಕೂ ಅಧಿಕ ಭಕ್ತರ ಸಮ್ಮುಖದಲ್ಲಿ ನಡೆದ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಡಾ| ಶ್ರೀಕಾಂತ್ ಶಿಂಧೆ ಅವರು ನೀಡಿದ ಸ್ಮರಣೀಯ ಭಾಷಣವು ಮೂಡುಶೆಡ್ಡೆಯ ಜನತೆಗೆ ವಿಶೇಷ ಹೆಮ್ಮೆಯ ಸಂಗತಿಯಾಗಿದೆ. ಇದೇ ಸಂದರ್ಭದಲ್ಲಿ ದೇವಸ್ಥಾನದ ಬ್ರಹ್ಮಕಲಶೋತ್ಸವದಲ್ಲಿ ತನ್ನ ತಂದೆ ಹಾಗೂ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹಾಲಿ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅರೊಂದಿಗೆ ಪಾಲ್ಗೊಳ್ಳುವುದಾಗಿ ನೀಡಿದ ಭರವಸೆಯೂ ಶೀಘ್ರದಲ್ಲೇ ಪೂರೈಸುವ ಭರವಸೆ ನಮಗಿದೆ ಎಂದು ಮುಂಡಪ್ಪ ಎಸ್.ಪಯ್ಯಡೆ ಆಶಯ ವ್ಯಕ್ತಪಡಿಸಿದರು.

ಇಂದಿನ ಭೇಟಿಯ ಸಂದರ್ಭದಲ್ಲಿ ದೇವಸ್ಥಾನದ ಮುಂಬಯಿ ಸಮಿತಿಯ ಉಪಾಧ್ಯಕ್ಷೆ ಶರ್ಮಿಳಾ ಡಿ.ರೈ, ಉಪಾಧ್ಯಕ್ಷ ಗೋಪಾಲ್ ಶೆಟ್ಟಿ, ಶಿವಸೇನೆಯ ದಕ್ಷಿಣ ಭಾರತೀಯ ಘಟಕದ ಥಾಣೆ ಜಿಲ್ಲಾಧ್ಯಕ್ಷರಾದ ಸುಭಾಷ್ ಶೆಟ್ಟಿ ಇನ್ನಂಜೆ ಮತ್ತು ಮಹಿಳಾಧ್ಯಕ್ಷೆ ಅನುಪಮಾ ಶೆಟ್ಟಿ ಉಪಸ್ಥಿತರಿದ್ದರು.


ॐ
Om Namo Bhagavate Sri Ramanaya



INVITATION
You are cordially invited to attend
Pooja and Cultural Function
on the auspicious occasion of
ADVENT DAY
( Arrival day of Bhagavan Ramana Maharshi
to Thiruvannamalai on 1st September 1896 )

Date:
Tuesday,
1st September 2026

Time:
10:30 AM

CHIEF GUEST
Dr. M. K. Sridhar, Ph.D.
Padma Shri Awardee
Founder Pro-Chancellor,
Chanakya University
Bengaluru

GUESTS OF HONOUR
M. N. Sundara Raj
Author, President
Ramana Kendra
Shivamogga

Sri Shashidhar Kote
Singer, Musician & Artist.

Venue:
RAMANA MAHARSHI ASHRAM
Thirumagondanahalli, 26th KM, NH-7,
Hosur Main Road, Bengaluru

PROGRAMME
Pooja
Cultural Programmes
Talk by Guests

Lunch Prasadam:
1:00 PM

With Regards,
B. Srinivasa Reddy & Family
We seek your gracious presence and blessings on this sacred occasion.